ಸಂಪುಟ: 04 ಸಂಚಿಕೆ: 185 ಪುಟಗಳು: 08 ಮಂಗಳವಾರ 17 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಜೀವ ನಮ್ಮ ಮಾತನ್ನು ಕೇಳುವುದಿಲ್ಲ, ಯಾವಾಗ ಬೇಕಾದರೂ ಹೋಗಬಹುದು. ಜೀವನ ನಮ್ಮ ಮಾತನ್ನು ಕೇಳುತ್ತದೆ, ಹೇಗೆ ಬೇಕಾದರೂ ರೂಪಿಸಿಕೊಳ್ಳಬಹುದು.

## ಪಾಕ್ ಪರ ಘೋಷಣೆ ಆಗಲಿ ತೀವ್ರ ವಿಚಾರಣೆ

- NIA ತನಿಖೆಗೆ ಆಗ್ರಹ
- ಕೇರಳ ಮೂಲದ ವ್ಯಕ್ತಿಗಳ ಕೈವಾಡ
- ನಾಗಮಂಗಲ ಗಲಭೆ ವೇಳೆ ಮತಾಂಧರಿಂದ ಪಾಕಿಸ್ತಾನ ಜಿಂದಾಬಾದ್ ಘೋಷಣೆ



ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಕಳೆದ ಬುಧವಾರ ತಡರಾತ್ರಿ ಗಣೇಶ ವಿಸರ್ಜನಾ ಮೆರವಣಿಗೆ ವೇಳೆ ಕೋಮು ಗಲಭೆ ನಡೆದಿದೆ. ಇದರಲ್ಲಿ **ನಿಷೇಧಿತ ಸಂಘಟನೆಗಳ ಕೈವಾಡ** ಇದೆ ಎಂದು ಆರೋಪಿಸಿದ್ದ ವಿಪಕ್ಷ ನಾಯಕ ಆರ್.ಅಶೋಕ ಅವರು, ಇದೀಗ ಗಲಭೆ ವೇಳೆ ಮೂರು ಕಿಡಿಗೇಡಿಗಳು ಪಾಕಿಸ್ತಾನ ಪರ ಘೋಷಣೆ ಕೂಗಿದ್ದಾರೆ ಎಂದು ಆಪಾದಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಗಲಭೆಗಳ ಪೋಸ್ಟ್ ಹಾಕಿರುವ ಅವರು, ನಾಗಮಂಗಲ ಘಟನೆ ವೇಳೆ **ಮೂವರು ದುರುಳರು ಪಾಕಿಸ್ತಾನ ಪರ ಘೋಷಣೆ** ಕೂಗಿದ್ದಾರೆ. ಇದನ್ನು ಪ್ರತ್ಯಕ್ಷದರ್ಶಿಗಳ ಹೇಳುತ್ತಿದ್ದು, ಈ ಕೋಮುದಳ್ಳುರಿಯಲ್ಲಿ ನಿಷೇಧಿತ ಸಂಘಟನೆಗಳ ಕೈವಾಡವಿರುವ ಅನುಮಾನ ಮತ್ತಷ್ಟು ಗಟ್ಟಿಯಾಗಿತ್ತಿದೆ.

**ಕೇಸರಿ ನಾಯಕರು ಕೆಂಡ**

> ನಾಗಮಂಗಲದಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಕೋಮುಗಲಭೆಯಲ್ಲಿ ಮೂವರು ಕಿಡಿಗೇಡಿಗಳು ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳ ಹೇಳುತ್ತಿದ್ದು, ಈ ಕೋಮುದಳ್ಳುರಿಯಲ್ಲಿ ನಿಷೇಧಿತ ಸಂಘಟನೆಗಳ ಕೈವಾಡವಿರುವ ಅನುಮಾನ ಮತ್ತಷ್ಟು ಗಟ್ಟಿಯಾಗುತ್ತಿದೆ.
> -**ಆರ್.ಅಶೋಕ್** ಪ್ರತಿಪಕ್ಷದ ನಾಯಕ

• ಉದಯವಾಹಿನಿ, ಬೆಂಗಳೂರು

ಚಿಕ್ಕಮಗಳೂರು, ದಾವಣಗೆರೆಯಲ್ಲಿ ಪುಂಡಾಟ ಈ ಕೋಮು ಘರ್ಷಣೆ ಮಾಡುವ ಮುನ್ನವೇ ಮಲೆನಾಡಿನ . ದಾವಣಗೆರೆಯ ಗಾಂಧಿನಗರ ಹಾಗೂ ಅಹ್ಮದ್ ನಗರಗಳಲ್ಲಿ ಹಿಂದೂ ಯುವಕರು ಬಾವುಟ ಕಟ್ಟಿದ್ದಕ್ಕೆ ಮತಾಂಧ ಪುಂಡರು ಅವರ ಮೇಲೆ ಹಲ್ಲೆ ಮಾಡಿದ್ದಾರೆ. ಇವನ್ನೆಲ್ಲಾ ಗಮನಿಸುತ್ತಿದ್ದರೆ ಈ ಪ್ರಚೋದನಕಾರಿ ಘಟನೆಗಳು ಗಣೇಶೋತ್ಸವವನ್ನೇ ಟಾರ್ಗೆಟ್ ಮಾಡಿರುವಂತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಇಂತಹ ಘಟನೆಗಳು ಅಯೋಧ್ಯ ರಾಮ ಮಂದಿರದ ಉದ್ಘಾಟನೆ ಸಂದರ್ಭದಲ್ಲಿಯೂ ನಡೆದಿತ್ತು. ಹಿಂದೂಗಳ ಹಬ್ಬಗಳು, ಉತ್ಸವಗಳು, ಸಂಭ್ರಮಾಚರಣೆಗಳನ್ನೇ ಗುರಿಯಾಗಿಸಿ ರಾಜ್ಯಾದ್ಯಂತ ನಡೆಸುತ್ತಿರುವ ಇಂತಹ ದುಷ್ಕೃತ್ಯಗಳ ಹಿಂದೆ ಮತೀಯ ಮೂಲಭೂತವಾದಿ ಸಂಘಟನೆಗಳ ದೊಡ್ಡ ಜಾಲವೇ ಸಕ್ರಿಯವಾದಂತಿದೆ ಎಂದು ವಿವರಿಸಿದರು.

ಇನ್ನೂ ಅಂತಾರಾಜ್ಯ, ಅಂತರಾಷ್ಟ್ರೀಯ ನಂಟು ಹೊಂದಿರುವ ಇಂತಹ ವ್ಯವಸ್ಥಿತ, ಪ್ರಾಯೋಜಿತ, ಜಾಲವನ್ನು ಬೇಧಿಸುವುದು ಸ್ಥಳೀಯ ಪೊಲೀಸರಿಂದ ಅಸಾಧ್ಯವಾಗಿದೆ. ಕೂಡಲೇ ಈ ಎಲ್ಲಾ ಪ್ರಕರಣಗಳ ತನಿಖೆಯನ್ನು ರಾಷ್ಟ್ರೀಯ ತನಿಖಾ ದಳಕ್ಕೆ ಒಪ್ಪಿಸಬೇಕು ಎಂದು ಗೃಹ ಸಚಿವ ಜಿ.ಪರಮೇಶ್ವರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದರು. ನಾಗಮಂಗಲದಲ್ಲಿ ನಡೆದ ಕೋಮು ಘರ್ಷಣೆಯಲ್ಲಿ ಸುಮಾರು 150 ಮಂದಿ ಮೇಲೆ ಎಫ್ಐಆರ್ ಆಗಿದೆ. ಸಿಸಿಟಿವಿ ಆಧರಿಸಿ ಅನೇಕ ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಆದರೆ ಮತಾಂಧದರು ಮಾಸ್ಕ್ ಹಾಕಿಕೊಂಡು ಬಂದು, ದುರುದ್ದೇಶಪೂರ್ವಕವಾಗಿ ಸಿಸಿಟಿವಿ ಹಾಳು ಮಾಡಿ, ಕೃತ್ಯ ಎಸಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ ಎಂದು ಆರ್.ಅಶೋಕ ಆರೋಪಿಸಿದ್ದರು. ಘಟನೆಯಲ್ಲಿ ಬೆಂಕಿ ಹೊತ್ತಿ ಉರಿದಿದ್ದು, ಬೈಕ್‌ಗಳು ಜಖಂಗೊಂಡಿವೆ. ಅಂಗಡಿ ಮುಂಗಟ್ಟುಗಳಿಗೆ ಹಾನಿ ಆಗಿವೆ. ಈ ಘಟನೆಯನ್ನು ಗೃಹ ಸಚಿವ ಜಿ.ಪರಮೇಶ್ವರ ಅವರು ಆಕಸ್ಮಿಕ ಎಂದಿದ್ದರು. ಈ ಹೇಳಿಕೆಗೆ ಬಿಜೆಪಿಯ ನಾಯಕರು ಗರಂ ಆಗಿದ್ದರು.

**ಕೇರಳದಿಂದ ಬಂದವರು:** ಯತ್ನಾಳ್: ರಾಜ್ಯದಲ್ಲಿಎಲ್ಲೆಲ್ಲಿ ಗಲಭೆಯಾಗಿದೆಯೋ ಅಲ್ಲೆಲ್ಲ ಕೃತ್ಯ ನಡೆಸಲು ಬಂದವರು ಕೇರಳದಿಂದ ಬಂದವರೇ ಆಗಿದ್ದಾರೆ ಶಾಸಕ ಬಸನಗೌಡ ಪಾಟೀಲ ಯತ್ನಾಳ ಆರೋಪಿಸಿದ್ದರು. ''ಟಿಪ್ಪು ಸುಲ್ತಾನ್ ಜಯಂತಿಯಂದು ಕೊಡಗಿನಲ್ಲಿ ನಮ್ಮ ಕಾರ್ಯಕರ್ತನ ಕೊಲೆಯಾಗಿತ್ತು. ಇಂತಹ ಕೃತ್ಯ ಮಾಡಲು ಕೇರಳದಿಂದಲೇ ಬರುತ್ತಾರೆ. ಮಂಗಳೂರು ಹಾಗೂ ಕರಾವಳಿಯಲ್ಲಿ ಎಲ್ಲೆಲ್ಲಿ ಗಲಾಟೆ ಆಗಿದ್ದವೋ, ಅಲ್ಲೆಲ್ಲಾ ಬಂದವರು ಯಾರು..?'' ಎಂದು ಪ್ರಶ್ನಿಸಿದ ಅವರು, ''ಇಂಥವರನ್ನು ಮನೆಗೆ ಹೊಕ್ಕು ಹೊಡೆಯಿರಿ ಎಂದು ನಾನು ಹೇಳಿಲ್ಲ. ನಮ್ಮ ಮನೆ ಹೊಕ್ಕು ಹೊಡಿತಾರೆ ಎಂದರೆ ಪ್ರತಿರೋಧ ತೋರಿಸಬೇಕಲ್ಲ,'' ಎಂದು ಹೇಳಿದ್ದಾಗಿ ತಿಳಿಸಿದರು. ''ಕಾಂಗ್ರೆಸ್ ಮುಸ್ಲಿಂರ ಪಾರ್ಟಿಯಾಗಿದ್ದು, ಮುಸ್ಲಿಂರ ತುಷ್ಟೀಕರಣ ಮಾಡುವುದನ್ನು ಬಿಟ್ಟು ಆ ಪಕ್ಷ ಏನು ಮಾಡಲ್ಲ. ಹಿಂದೂಗಳು ಜಾಗೃತರಾಗದೇ ಇರುವುದು ಈ ದೇಶದ ದುರಂತ,'' ಎಂದಿದ್ದರು.

### ಗಲಭೆಗೆ ಮಾಸ್ಕ್ ಖರೀದಿ

''ಗಲಭೆ ಸೃಷ್ಟಿಸಿ, ದಾಂದಲೆ ಮಾಡಿರುವ ದುಷ್ಕರ್ಮಿಗಳು ಅದಕ್ಕೂ ಮುನ್ನ 150 ಮಾಸ್ಕ್ ಖರೀದಿಸಿದ್ದು, ಸಿಸಿ ಟಿವಿಗಳನ್ನು ನಾಶ ಮಾಡಿದ್ದಾರೆ. ಈ ದುಷ್ಕೃತ್ಯವು



ಪೂರ್ವನಿಯೋಜಿತ ಎಂಬುದು ಸ್ಥಳೀಯರ ಅನುಮಾನವಾಗಿದೆ. ಮುಖ್ಯವಾಗಿ, ಸರಕಾರ ದಾಖಲಿಸಿರುವ ಎಫ್ಐಆರ್ ನಲ್ಲಿ ಮೊದಲ 23 ಆರೋಪಿಗಳು ಹಿಂದೂಗಳೇ ಆಗಿದ್ದಾರೆ. ಇದು ಪೊಲೀಸರು ನಿಷೇಧಿತ ಸಂಘಟನೆಗಳ ಒತ್ತಡದಲ್ಲಿರುವ ಸಂಶಯವನ್ನು ಬಲಪಡಿಸುತ್ತದೆ,'' ಎಂದಿದ್ದಾರೆ.

1. ನಾಗಮಂಗಲ ಕೋಮುಗಲಭೆ ವೇಳೆ ಪಾಕ್ ಪರ ಘೋಷಣೆ ಎಂದು ಪ್ರಶ್ನಾರ್ಥಕ ಚಿಹ್ನೆಯೊಂದಿಗೆ ಪೋಸ್ಟ್
2. ಮೂವರು ಕಿಡಿಗೇಡಿಗಳು ಪಾಕಿಸ್ತಾನ ಜಿಂದಾಬಾದ್ ಘೋಷಣೆಗಳು ಕೂಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳ ಹೇಳುತ್ತಿದ್ದಾರೆ
3. ದಾವಣಗೆರೆಯ ಗಾಂಧಿನಗರ ಹಾಗೂ ಅಹ್ಮದ್ ನಗರಗಳಲ್ಲಿ ಹಿಂದೂ ಯುವಕರು ಬಾವುಟ ಕಟ್ಟಿದ್ದಕ್ಕೆ ಮತಾಂಧ ಪುಂಡರು ಅವರ ಮೇಲೆ ಹಲ್ಲೆ

### ಎನ್ಐಎ ತನಿಖೆಗೆ ಆಗ್ರಹ

ಅಂತಾರಾಜ್ಯ, ಅಂತರಾಷ್ಟ್ರೀಯ ನಂಟು ಹೊಂದಿರುವ ಇಂತಹ ವ್ಯವಸ್ಥಿತ, ಪ್ರಾಯೋಜಿತ, ಜಾಲವನ್ನ ಬೇಧಿಸುವುದು ಸ್ಥಳೀಯ ಪೊಲೀಸರಿಂದ ಅಸಾಧ್ಯವಾಗಿದ್ದು, ಕೂಡಲೇ ಈ ಪ್ರಕರಣಗಳನ್ನ ಎನ್ಐಎ ತನಿಖೆಗೆ ಒಪ್ಪಿಸಬೇಕು ಎಂದು ಗೃಹ ಸಚಿವ ಹಾಗೂ ಮುಖ್ಯಮಂತ್ರಿ ಅವರನ್ನ ಒತ್ತಾಯಿಸುತ್ತೇನೆ ಎಂದಿದ್ದಾರೆ.

### ಚಿತ್ರದುರ್ಗದಲ್ಲಿ ಪ್ಯಾಲೆಸ್ತೀನ್ ಪರ ಘೋಷಣೆ



ಈದ್ ಮಿಲಾದ್ ಮೆರವಣಿಗೆ ವೇಳೆ ಪ್ಯಾಲೆಸ್ಟೈನ್ ಪರ ಘೋಷಣೆ ಕೂಗಿ ಪ್ಯಾಲೆಸ್ಟೈಲ್ ಬಾವುಟ ಹಿಡಿದು ಮೆರವಣಿಗೆಯಲ್ಲಿ ಸಾಗಿದ ಘಟನೆ ಚಿತ್ರದುರ್ಗದಲ್ಲಿ ನಡೆದಿದೆ.ಚಿತ್ರದುರ್ಗ ನಗರದ ಗಾಂಧಿ ವೃತ್ತದ ಬಳಿ ಈದ್ ಮಿಲಾದ್ ಮೆರವಣಿಗೆಯಲ್ಲಿ ಯುವಕರ ಗುಂಪೊಂದು ಪ್ಯಾಲೆಸ್ಟೈನ್ ಬಾವುಟ ಹಿಡಿದು, ಪ್ಯಾಲೆಸ್ಟೈನ್ ಜಿಂದಾಬಾದ್ ಎಂದು ಘೋಷಣೆ ಕೂಗಿದೆ. ಕ್ಷಣ ಎಚ್ಚೆತ್ತ ಪೊಲೀಸರು ಎರಡು ಧ್ವಜಗಳನ್ನು ವಶಕ್ಕೆ ಪಡೆದು ಕಿಡಿಗೇಡಿಗಳಿಗೆ ಎಚ್ಚರಿಕೆ ನೀಡಿ ಕಳುಹಿಸಿದ್ದಾರೆ. ಇದೇ ವೇಳೆ ಕೋಲಾರ ನಗರದಲ್ಲಿಯೂ ಈದ್ ಮಿಲಾದ್ ಮೆರವಣಿಗೆ ವೇಳೆ ಪ್ಯಾಲೆಸ್ಟೈನ್ ಪರ ಘೋಷಣೆ ಕೂಗಿದ ಘಟನೆ ನಡೆದಿದೆ ಎಂದು ತಿಳಿದುಬಂದಿದೆ.

## ಕಳೆದೆರಡು ತಿಂಗಳ ಹಣ ಒಂದೇ ಬಾರಿ ಅಕೌಂಟ್‌ಗೆ ಪಾವತಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆ ಯಾವುದೇ ಕಾರಣಕ್ಕೂ ಬಂದ್ ಆಗುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮತ್ತೊಮ್ಮೆ ಸ್ಪಷ್ಟನೆ ನೀಡಿದ್ದಾರೆ. ಈ ಸಂಬಂಧ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆಯ ಕುರಿತು ನಾನು ಈಗಾಗಲೇ ಹಲವು ಬಾರಿ ಸ್ಪಷ್ಟನೆ ನೀಡಿದ್ದೇನೆ.ಇದೀಗ ಮತ್ತೊಮ್ಮೆ ಸ್ಪಷ್ಟನೆ ಕೊಡುತ್ತಿದ್ದೇನೆ ಎಂದರು. ಗೃಹಲಕ್ಷ್ಮಿ ಹಣ ನಿತ್ಯ, ಸತ್ಯ, ನಿರಂತರ. ಕಳೆದೆರಡು ತಿಂಗಳಿಂದ ಬರದಿರುವ ಹಣ ಒಂದೇ ಬಾರಿ ಅಕೌಂಟ್‌ಗೆ ಪಾವತಿಯಾಗಲಿದೆ. ಲಿಂಗತ್ವ ಅಲ್ಪಸಂಖ್ಯಾತರಿಗೆ ಮೂರು ತಿಂಗಳ ಹಿಂದಷ್ಟೆ ಅರ್ಜಿ ಹಾಕಲು ಅವಕಾಶ ನೀಡಲಾಗಿತ್ತು. ಅವರಿಗೂ ಕೂಡ ಅಷ್ಟು ಬಾಕಿ ಹಣ ಒಟ್ಟಿಗೆ ಜಮಾ ಆಗಲಿದೆ ಎಂದು ಸಚಿವೆ ಸ್ಪಷ್ಟಪಡಿಸಿದರು.

## ಬಿಜೆಪಿ ಭ್ರಷ್ಟ ಪಕ್ಷ ಎಂದು ಲೇಬಲ್ ಕೊಟ್ಟಿದ್ದೆ ಬಿ ವೈವಿ

• ಉದಯವಾಹಿನಿ, ಬೆಳಗಾವಿ

ಬಿಜೆಪಿ ರಾಜ್ಯಾಧ್ಯಕ್ಷನಾಗಿ ಬಿ.ವೈ. ವಿಜಯೇಂದ್ರ ಅವರನ್ನು ನಾನೆಂದೂ ಒಪ್ಪೋದಿಲ್ಲ. ಮುಂದಿನ ಅಧ್ಯಕ್ಷ ಯಾರು ಎಂಬುದು ಪಕ್ಷದ ವರಿಷ್ಠರು ತೀರ್ಮಾನ ಮಾಡಬೇಕು. ವಿಜಯೇಂದ್ರ, ಬಿಜೆಪಿ ಪಕ್ಷದಲ್ಲಿ ಇನ್ನೂ ಜೂನಿಯರ್, ಅವನಿಗೆ ಏನೂ ಐಡಿಯಾಲಜಿ ಇಲ್ಲ. ಬಿಜೆಪಿಯ ಭ್ರಷ್ಟ ಎಂಬ ಲೇಬಲ್ ವಿಜಯೇಂದ್ರ ಮೇಲಿದೆ. ಬಿಜೆಪಿ ಭ್ರಷ್ಟ ಪಕ್ಷ ಎಂದು ಲೇಬಲ್ ಕೊಟ್ಟಿದ್ದೆ ಬಿ ವೈ ವಿಜಯೇಂದ್ರ ಎಂದು ಗಂಭೀರವಾದ ಆರೋಪ ಮಾಡಿದರು. ಅವನು ಅಧ್ಯಕ್ಷ ಆಗಿದ್ದಕ್ಕೆ ನನಗೆ ವಿರೋಧವಿದೆ. ಹಾಗಂತ ನಾನೆಂದೂ ಯಡಿಯೂರಪ್ಪ ಅವರಿಗೆ ವಿರೋಧಿ ಅಲ್ಲ. ಯಡಿಯೂರಪ್ಪ ನಮ್ಮ ಪಕ್ಷಕ್ಕೆ ಪ್ರಶ್ನಾತೀತ ನಾಯಕ. ಯಡಿಯೂರಪ್ಪರ ಬಗ್ಗೆ ನಮಗೆ ತುಂಬಾ ಗೌರವವಿದೆ. ಆದರೆ, ವಿಜಯೇಂದ್ರ ನಮ್ಮ ಪಕ್ಷದ ನಾಯಕನಲ್ಲ ಎಂದು ತಮ್ಮದೇ ಪಕ್ಷದ ರಾಜ್ಯಾಧ್ಯಕ್ಷರ ವಿರುದ್ಧ ಏಕವಚನದಲ್ಲೇ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ಆಕ್ರೋಶ ಹೊರಹಾಕಿದ್ದಾರೆ. ಯಡಿಯೂರಪ್ಪನವರ ಬಗ್ಗೆ ನಮಗೆ ಬಹಳ ಗೌರವವಿದೆ. ಯಡಿಯೂರಪ್ಪಗೆ ವಯಸ್ಸಾಗಿದೆ, ಅವರಿಗೆ ವಿಶ್ರಾಂತಿಯ ಅಗತ್ಯವಿದೆ ಎಂದರು.

## ದೇವರಾಜ ಅರಸರಿಂದ ಲಿಂಗಾಯತರಿಗೆ ಅನ್ಯಾಯ

• ಉದಯವಾಹಿನಿ, ಸಿಂಧನೂರು

'ಹಾವನೂರ ಆಯೋಗದ ವರದಿ ಆಧಾರದ ಮೇಲೆ ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸು ಅವರು ಹಿಂದುಳಿದ ವರ್ಗದ ಸಮುದಾಯಗಳಿಗೆ ಮೀಸಲಾತಿ ಕಲ್ಪಿಸಿ ಮಹತ್ಕಾರ್ಯ ಮಾಡಿದರು. ಆದರೆ ಲಿಂಗಾಯತರಿಗೆ ಭೂಮಿಯುಳ್ಳವರು, ಆರ್ಥಿಕವಾಗಿ ಸದೃಢರೆನ್ನುವ ಕಾರಣದಿಂದ ಮೀಸಲಾತಿ ಕೊಡದೆ ನಮ್ಮ ಸಮಾಜಕ್ಕೆ ಅನ್ಯಾಯ ಮಾಡಿದ್ದಾರೆ' ಎಂದು ಬಿಜೆಪಿ ಶಾಸಕ ಅರವಿಂದ ಬೆಲ್ಲದ ಹೇಳಿದರು. ಮುಸ್ಲಿಮರು ಹಿಂದುಳಿದ ಪ್ರವರ್ಗ-1, 2ಎ ಮತ್ತು 2ಬಿ ಮೂರರಲ್ಲಿಯೂ ಮೀಸಲಾತಿ ಪಡೆಯುತ್ತಿದ್ದು, ಅವರಿಗೆ ಶೇ 23ರಷ್ಟು ಪಾಲು ಲಭಿಸುತ್ತಿತ್ತು. ಇದೇ ಕಾರಣಕ್ಕೆ ಬೊಮ್ಮಾಯಿ ನೇತೃತ್ವದ ಸರ್ಕಾರದಲ್ಲಿ ಶೇ 4 ಮೀಸಲಾತಿಯನ್ನು ರದ್ದುಪಡಿಸಿ ಇತರ ವರ್ಗಗಳಿಗೆ ನೀಡಲಾಯಿತು' ಎಂದು ಸ್ಮರಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೂಲತಃ ವಕೀಲರಾಗಿರುವುದರಿಂದ ಸೆ.22ರಂದು ಬೆಳಗಾವಿಯಲ್ಲಿ ಪಂಚಮಸಾಲಿ ಸಮಾಜದ ಕರ್ನಾಟಕದ ವಕೀಲರಿಂದ '2ಎ' ಮೀಸಲಾತಿಗೆ ಒತ್ತಾಯಿಸಿ ಮನವಿಪತ್ರ ಕೊಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ' ಎಂದರು.

## ನೂರು ಕಾನೂನು ಮಾಡಿ,ನಾನು ಅಂಜಲ್ಲ: ಶಾಸಕ ಬಸನಗೌಡ


• ಉದಯವಾಹಿನಿ, ವಿಜಯಪುರ

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬಗ್ಗೆ ಮಾತನಾಡಿರುವ ಕುರಿತಾಗಿ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎನ್ನುವ ಸಚಿವ ಎಂ.ಬಿ. ಪಾಟೀಲ್ ಅವರು ನೂರು ಕಾನೂನು ಮಾಡಲಿ. ನಾನು ಯಾರಿಗೂ ಅಂತೆಲ್ಲ. ಎಂತೆಂತಹ ಮಹಾ ನಾಯಕರಿಗೆ ಅಂಜಿಲ್ಲ. ನಮ್ಮ ಪಕ್ಷದ ಮಹಾ ನಾಯಕರಿಗೂ ಅಂಜಿಲ್ಲ.ಇವರ್ಯಾರು ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು. ಸುದ್ದಿಗಾರರ ಜತೆ ಮಾತನಾಡಿದ ಅವರು, ಎಂ.ಬಿ.ಪಾಟೀಲರ ಹಿಂದೆ ಒಬ್ಬ ಸೂಫಿಸಂತ, ಮಹಾನ್ ದಾರ್ಶನಿಕನಿದ್ದಾನೆ. ಲಿಂಗಾಯತರು-ಮುಸ್ಲಿಮರು ಒಂದು, ಅವರ ನಮ್ಮ ಅಚರಣೆಗಳು ಒಂದು ಎಂದು ಹೇಳುತ್ತಾರೆ. ಲಿಂಗಾಯತರು, ಮುಸ್ಲಿಮರು ಯಾವಾಗ ಒಂದಾಗಲು ಸಾಧ್ಯವಾಗುತ್ತದೆ? ಲಿಂಗಾಯತರಿರಲಿ, ವೀರಶೈವರಿರಲಿ ಎಲ್ಲಾರೂ ಸನಾತನ ಹಿಂದೂ ಧರ್ಮದ ಭಾಗನೇ ಎಂದರು.

## ಹಿಂದೂ ಸ್ಮಶಾನದ ಕಂಪೌಂಡ್ ಒಡೆದು ಇಂದಿರಾ ಕ್ಯಾಂಟೀನ್ ನಿರ್ಮಾಣ

• ಉದಯವಾಹಿನಿ, ಹುಬ್ಬಳ್ಳಿ

ಒಂದು ಕಡೆ ರಾಜ್ಯದಲ್ಲಿ ನಾಗಮಂಗಲ ಗಲಭೆ ಭಾರಿ ಸದ್ದು ಮಾಡುತ್ತಿದ್ದು, ಇನ್ನೊಂದೆಡೆ ಹುಬ್ಬಳ್ಳಿಯಲ್ಲಿ ಹಿಂದೂ ಸ್ಮಶಾನದ ಕಂಪೌಂಡ್ ಒಡೆದು ಹಾಕಿ ಇಂದಿರಾ ಕ್ಯಾಂಟೀನ್ ನಿರ್ಮಾಣ ಮಾಡಿದ್ದಾರೆ ಎಂದು ಶ್ರೀ ರಾಮಸೇನೆಯ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಆಕ್ರೋಶ ಹೊರಹಕಿದ್ದಾರೆ.



ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹಿಂದೂ ಸ್ಮಶಾನ ಕಾಂಪೌಂಡ್ ಒಡೆದು ಇಂದಿರಾ ಕ್ಯಾಂಟೀನ್ ನಿರ್ಮಾಣ ಮಾಡಲಾಗಿದೆ. ಹುಬ್ಬಳ್ಳಿಯ ಮಂಟೂರು ರಸ್ತೆಯಲ್ಲಿರುವ ಹಿಂದೂ ಸ್ಮಶಾನದ ಕಾಂಪೌಂಡ್ ಒಡೆದು ಇಂದಿರಾ ಕ್ಯಾಂಟೀನ್ ನಿರ್ಮಾಣ ಮಾಡಲಾಗಿದೆ ಎಂದು ಶಾಸಕ ಪ್ರಸಾದ್ ಅಭಯ ವಿರುದ್ಧ ಇಂದಿರಾ ಕ್ಯಾಂಟೀನ್ ನಿರ್ಮಾಣದ ಆರೋಪ ಮಾಡಿದ್ದಾರೆ.

ಕಾಂಗ್ರೆಸ್ ಸರ್ಕಾರ ಇದೆ ಎಂದು ಶಾಸಕ ಅಬ್ಬಯ್ಯ ದರ್ಪ ತೋರಿದ್ದಾರೆ. ಎರಡೇ ದಿನದಲ್ಲಿ ರಾತ್ರೋರಾತ್ರಿ ಇಂದಿರಾ ಕ್ಯಾಂಟೀನ್ ಕಟ್ಟಿದ್ದಾರೆ. ಕೂಡಲೇ ಕ್ಯಾಂಟೀನ್ ಕಟ್ಟಡ ಸ್ಥಳಾಂತರ ಮಾಡುವಂತೆ ಆಗ್ರಹಿಸುತ್ತಿದ್ದು, ಇಲ್ಲದಿದ್ದರೆ ನಾವೇ ಇಂದಿರಾ ಕ್ಯಾಂಟೀನ್ ತೆರವು ಮಾಡುತ್ತೇವೆ ಎಂದು ಹುಬ್ಬಳ್ಳಿಯಲ್ಲಿ ಶ್ರೀರಾಮ ಸೇನೆಯ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಆಗ್ರಹ ಮಾಡಿದರು.

## ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದ ಉಡುಪಿ ಜನಪ್ರತಿನಿಧಿಗಳು

• ಉದಯವಾಹಿನಿ, ಉಡುಪಿ

ರಾಜ್ಯ ಕಾಂಗ್ರೆಸ್ ಸರ್ಕಾರವು ಕರಾವಳಿಯನ್ನು ನಿರ್ಲಕ್ಷ್ಯ ಮಾಡುತ್ತಿದ್ದು, ಹೀಗೆ ಮುಂದುವರಿದರೇ ಸಿಎಂ ಮನೆ ಮುಂದೆ ಧರಣಿ ಮಾಡುತ್ತೇವೆ ಎಂದು ಉಡುಪಿ ಜಿಲ್ಲೆಯ 5 ಮಂದಿ ಶಾಸಕರು ಹಾಗೂ ಸಂಸದರು ಎಚ್ಚರಿಕೆ ನೀಡಿದರು.

ಜಂಟಿ ಸುದ್ದಿಗೋಷ್ಠಿಯಲ್ಲಿ ಶಾಸಕ ಸುನೀಲ್ ಕುಮಾರ್ ಮಾತನಾಡಿ, ಎರಡು ಬಜೆಟ್‌ನಲ್ಲಿ ಉಡುಪಿಗೆ ಯಾವುದೇ ಯೋಜನೆ ನೀಡಿಲ್ಲ.

ಜಿಲ್ಲಾಡಳಿತ 240 ಕೋಟಿ ಮಳೆಹಾನಿ ಹೇಳಿದೆ. ಸರ್ಕಾರ ದಿವಾಳಿಯಾಗಿದೆ. ಒಂದು ಪೈಸೆ ಹಣವೂ ಬಿಡುಗಡೆ ಮಾಡಿಲ್ಲ. ಇದು ಕರಾವಳಿಯ ನಿರ್ಲಕ್ಷ್ಯವಲ್ಲದೆ ಮತ್ತಿನ್ನೇನು? ಐದು ಜನ ಬಿಜೆಪಿ



ಶಾಸಕರಿದ್ದಾರೆ ಎನ್ನುವ ಕಾರಣಕ್ಕೆ ಅನುದಾನ ನೀಡುತ್ತಿಲ್ಲ ಎಂದು ಆರೋಪಿಸಿದರು.

ತಾಲ್ಲೂಕು ಮಟ್ಟದ ಅಧಿಕಾರಿಗಳ ನಿರಂತರ ವರ್ಗಾವಣೆ ಮಾಡಲಾಗುತ್ತಿದೆ. ಶಾಸಕರಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಅಸಹಕಾರ ನೀಡುತ್ತಿದ್ದಾರೆ. ಕರಾವಳಿಯ ಎಲ್ಲಾ ಬಿಜೆಪಿ ಶಾಸಕರು ನಮ್ಮ ಬೇಡಿಕೆ ನೀಡಿದ್ದೇವೆ. ಈ ಅನುದಾನವನ್ನು ಸರ್ಕಾರ ತಕ್ಷಣ ಬಿಡುಗಡೆ ಮಾಡಬೇಕು. ಕರಾವಳಿಯ ನಿರ್ಲಕ್ಷ್ಯ ಮುಂದುವರಿಸಬಾರದು, ಸಮಸ್ಯೆಗಳನ್ನು 10 ದಿನದೊಳಗೆ ಸರಿಪಡಿಸಬೇಕು. ಅನುದಾನಕ್ಕೆ ಆಗ್ರಹಿಸಿ ಮುಖ್ಯಮಂತ್ರಿಗಳ ಮನೆ ಮುಂದೆ ಧರಣಿ ಕೂಡುವುದಾಗಿ ಎಚ್ಚರಿಸಿದರು.

ಕಸ್ತೂರಿ ರಂಗನ್ ವರದಿ ವಿಚಾರವಾಗಿ ಮಾತನಾಡಿದ ಸುನೀಲ್ ಕುಮಾರ್, ಜನವಸತಿ ಪ್ರದೇಶಗಳಿಗೆ ತೊಂದರೆ ಕೊಡಬಾರದು. ಜನರಿಗೆ ತೊಂದರೆಯಾಗದ ಸರ್ವೇ ಆಗಬೇಕು. ಏಕಾಏಕಿ ಬೆಂಗಳೂರು ಅಧಿಕಾರಗಳು ವರದಿ ಜಾರಿ ಮಾಡಬಾರದು. ಕೃಷಿ ಕಂದಾಯ ಅರಣ್ಯ ಪ್ರತ್ಯೇಕ ಸರ್ವೇ ನಡೆಸಬೇಕು. ಜನವಸತಿ ಪ್ರದೇಶಗಳಿಗೆ ತೊಂದರೆ ಕೊಡಬೇಡಿ ಎಂದರು.

## ಪಾಂಡವಪುರದ ಆರ್‌ಎಸ್‌ಎಸ್ ಕಚೇರಿಗೆ ನುಗ್ಗಿದ ಪೊಲೀಸರು

### ಘಟನೆಯ ಬಗ್ಗೆ ಪರಿಶೀಲಿಸಿ ಸಮಗ್ರ ವರದಿಯನ್ನ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರರಿಗೆ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ನಾಗಮಂಗಲದಲ್ಲಿ ನಡೆದ ಗಣೇಶೋತ್ಸವ ಗಲಾಟೆ ಪ್ರಕರಣದ ಸತ್ಯಾಸತ್ಯತೆ ತಿಳಿಯಲು ರಚನೆಯಾಗಿರುವ ಬಿಜೆಪಿ ನೇತೃತ್ವದ ಸತ್ಯಾ ಶೋಧನ ಸಮಿತಿ ಮಂಡ್ಯದ ನಾಗಮಂಗಲಕ್ಕೆ ಭೇಟಿ ಕೊಡ್ತಿದೆ. ಬಿಜೆಪಿ ಶಾಸಕ ಅಶ್ವಥ್ ನಾರಾಯಣ್ ನೇತೃತ್ವ ನಿಯೋಗ ಭೇಟಿ ನೀಡಲಿದೆ.

ಘಟನೆಯ ಬಗ್ಗೆ ಪರಿಶೀಲಿಸಿ ಸಮಗ್ರ ವರದಿಯನ್ನ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರರಿಗೆ ಸಲ್ಲಿಕೆ ಮಾಡಲಿದ್ದಾರೆ. ಇದರ ನಡುವೆ ನಾಗಮಂಗಲಕ್ಕೆ ಭೇಟಿ ನೀಡುತ್ತಿದ್ದ ಆರ್ ಎಸ್ ಎಸ್ ಮುಖಂಡರ ವಶಕ್ಕೆ ಪಡೆದುಕೊಳ್ಳಲಾಗಿದೆ. ಆರ್‌ಎಸ್‌ಎಸ್ ಮುಖಂಡರ ಬಂಧನ ಖಂಡಿಸಿ ಪ್ರತಿಭಟನೆ ನಡೆಸಲಾಗಿದೆ. ಮಂಡ್ಯದ ಪಾಂಡವಪುರದ ಬಳಿ ಹಿಂದು ಪರ ಸಂಘಟನೆ ಕಾರ್ಯಕರ್ತರು ಪ್ರತಿಭಟನೆ



ನಡೆಸಿದ್ದಾರೆ. ಆರ್‌ಎಸ್‌ಎಸ್ ಕಚೇರಿ ಒಳ ಪ್ರವೇಶ ಮಾಡಿ ಮುಖಂಡರನ್ನ ವಶಕ್ಕೆ ಪಡೆದ ಪೊಲೀಸರ ವಿರುದ್ಧ ಪ್ರತಿಭಟನೆ ನಡೆಸಲಾಗಿದೆ. ಈ ಕುರಿತು ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ ವೈ ವಿಜಯೇಂದ್ರ ಅವರು ವಾಗ್ದಾಳಿ ನಡೆಸಿದ್ದಾರೆ.

ಮೊನ್ನೆ ನಾಗಮಂಗಲದಲ್ಲಿ ಗಣೇಶೋತ್ಸವ ಮೆರವಣಿಗೆಯ ಮೇಲೆ ನಡೆದ ಕಲ್ಲು ತೂರಾಟದ ಘಟನೆ ಸೃಷ್ಟಿಸಿದ ದುಗುಡದ ವಾತಾವರಣ ಇನ್ನೂ ಸಹಜ ಸ್ಥಿತಿಯತ್ತ ಮರಳುತ್ತಿಲ್ಲ ಈ ನಡುವೆ ಬೆಂಕಿಗೆ ತುಪ್ಪ ಸುರಿದಂತೆ ಪೊಲೀಸರು ನಿನ್ನೆ ರಾತ್ರಿ ಪಾಂಡವಪುರದ ಆರ್.ಎಸ್.ಎಸ್ ಕಚೇರಿಗೆ ನುಗ್ಗಿ ಅನುಚಿತ ವರ್ತನೆ ತೋರಿದ್ದಾರೆ, ಪೊಲೀಸರ ಮೂಲಕ ಕಾಂಗ್ರೆಸ್ ಸರ್ಕಾರ ತುರ್ತು ಪರಿಸ್ಥಿತಿಯ ಕರಾಳ ದಿನಗಳನ್ನು ನೆನಪಿಸುವ ದಾಟಿಯಲ್ಲಿ ವರ್ತಿಸುತ್ತಿದೆ. ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಬದುಕುತ್ತಿದ್ದೇವೆಯೋ ಅಥವಾ ಹಿಂದೂ ಮನಸ್ಥಿತಿಯ ವಿರೋಧಿ ಸರ್ಕಾರದ ನೆರಳಿನಲ್ಲಿದ್ದೇವೆಯೋ ಎಂಬ ಆತಂಕ ಹಿಂದೂ ಸಮಾಜವನ್ನು ಕಾಡುತ್ತಿದೆ. ನೈಜ ರಾಷ್ಟ್ರೀಯತೆಯನ್ನು ಪ್ರತಿಪಾದಿಸುವ ಭಾರತೀಯ ಸಮಾಜ ಕಟ್ಟುವ ಉದಾತ್ತ ಉದ್ದೇಶದಿಂದ ಜನ್ಮತಳೆದ ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ನಿರ್ಬಂಧಿಸಲು ಕಾಂಗ್ರೆಸ್ ನೆಹರು ಕಾಲದಿಂದಲೂ ಯತ್ನಿಸುತ್ತಲೇ ಇದೆ. ಆದರೆ ಸಮರ್ಪಣೆಯ ಬದ್ಧತೆ, ತ್ಯಾಗದ ಪರಿಪೂರ್ಣತೆಯನ್ನು ಮೈಗೂಡಿಸಿಕೊಂಡಿರುವ ಕೋಟ್ಯಾಂತರ ಸ್ವಯಂಸೇವಕರ ಮಹಾಪಡೆಯನ್ನು ಹೊಂದಿರುವ ಆರ್‌ಎಸ್‌ಎಸ್, ದಬ್ಬಾಳಿಕೆ ಎದುರಾದಷ್ಟು ಹೆಮ್ಮರವಾಗಿ ಬೆಳೆಯುತ್ತಲೇ ಇರುತ್ತದೆ, ಇದನ್ನು ಮಾನ್ಯ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಅರಿತು ನಡೆದರೆ ಒಳಿತು.

### ಸಂವಿಧಾನ ವಿರೋಧಿ ಕ್ರಮ

ಪಾಂಡವಪುರದ ಆರ್‌ಎಸ್‌ಎಸ್ ಕಚೇರಿಗೆ ಪೊಲೀಸರು ನುಗ್ಗಿದ ಘಟನೆ ಅತ್ಯಂತ ಖಂಡನೀಯ, ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುವ ಸಂವಿಧಾನ ವಿರೋಧಿ ಕ್ರಮ, ಹಿಂದೂ ಸಮಾಜವನ್ನು ಪ್ರಚೋದಿಸುವ ನಡವಳಿಕೆ, ಸರ್ಕಾರ ಈ ಕೂಡಲೇ ಘಟನೆಯ ಕುರಿತು ಕ್ಷಮೆಯಾಚಿಸಲಿ ಪೊಲೀಸ್ ದರ್ಪ ಮೆರೆದ ಅಧಿಕಾರಿಗಳನ್ನು ಅಮಾನತ್ತಿನಲ್ಲಿಡಲಿ ಎಂದು ಒತ್ತಾಯಿಸುವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಹೇಳಿದರು.

## ಮುನಿರತ್ನ ಕುರಿತು ಇನ್ನೂ 2 ಆಡಿಯೋ ರಿಲೀಸ್ ಮಾಡುತ್ತೇನೆ

• ಉದಯವಾಹಿನಿ, ಬೆಂಗಳೂರು

ಜೀವ ಬೆದರಿಕೆ ಹಾಗೂ ಅವಾಚ್ಯ ಶಬ್ದಗಳಿಂದ ಜಾತಿ ನಿಂದನೆ ಮಾಡಿದ ಆರೋಪದ ಹಿನ್ನೆಲೆಯಲ್ಲಿ ರಾಜರಾಜೇಶ್ವರಿ ನಗರದ ಬಿಜೆಪಿ ಶಾಸಕ ಮುನಿರತ್ನ ಬಂಧನದ ವಿಚಾರವಾಗಿ ಇದೀಗ ಗುತ್ತಿಗೆದಾರ ಚಲುವರಾಜು ಮತ್ತೊಂದು ಹೊಸ ಬಾಂಬ್ ಸಿಡಿಸಿದ್ದು, ನಾಳೆ ಇನ್ನೂ ಎರಡು ಆಡಿಯೋ ರಿಲೀಸ್ ಮಾಡುತ್ತೇನೆ ಎಂದು ಸ್ಫೋಟಕ ಹೇಳಿಕೆ ನೀಡಿದರು.

ಹೌದು ಬೆಂಗಳೂರಿನಲ್ಲಿ ಮಾತನಾಡಿದ ಚಲುವರಾಜು, ಮುನಿರತ್ನ ಅವರ ಕುರಿತು ಇನ್ನು ಎರಡು ಆಡಿಯೋ ಇವೆ.

ನಾಳೆ ಎರಡು ಆಡಿಯೋಗಳನ್ನು ರಿಲೀಸ್ ಮಾಡುತ್ತೇನೆ ಹನುಮಂತರಾಯಪ್ಪ ಜೊತೆ ಮಾತನಾಡಿದ ಆಡಿಯೋ ಹಾಗೂ 30% ಕಮಿಷನ್ ವಿಚಾರದ ಆಡಿಯೋ ಬಿಡುಗಡೆ ಮಾಡುತ್ತೇನೆ ನಾಳೆ ಎರಡು ಆಡಿಯೋಗಳನ್ನು



ರಿಲಿಸ್ ಮಾಡುತ್ತೇನೆ ಎಂದು ಚೆಲುವರಾಜು ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಈಗಾಗಲೇ ಮುನಿರತ್ನರನ್ನು ಗುತ್ತಿಗೆದಾರ ಚೆಲುವರಾಜನಿಗೆ ಜೀವ ಬೆದರಿಕೆ ಹಾಗೂ ಅವಾಚ್ಯ ಶಬ್ದಗಳಿಂದ ಜಾತಿ ನಿಂದನೆ ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ಅವರನ್ನು ಬಂಧಿಸಲಾಗಿದೆ. ಇದರ ಬೆನ್ನಲ್ಲೆ ಗುತ್ತಿಗೆದಾರ ಚೆಲುವರಾಜು ಮತ್ತೆರಡು ಹೊಸ ಆಡಿಯೋಗಳನ್ನು ಬಿಡುಗಡೆ ಮಾಡುತ್ತೇನೆ ಎಂದು ಸ್ಫೋಟಕ ಹೇಳಿಕೆ ನೀಡಿದ್ದು ಪ್ರಕರಣ ರೋಚಕ ತಿರುವು ಪಡೆದುಕೊಳ್ಳುತ್ತದೆ.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,505/Gram24ct ₹6,880/Gram22ct ಬೆಳ್ಳಿ: ₹93.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

## ಏನೊಂದುಂ ತೋರದ ಅರಿವೊಂದೇ ಪರಮಾರ್ಥ

ನಿಜಗುಣರ ಪರಮಾನುಭವ ಬೋಧೆಯ ಮಾತು. ಪರಮಾತ್ಮನ ತನ್ನ ನಿಜ ಸ್ವರೂಪದ ಅರಿವಾದ ಬಳಿಕ ಜಗತ್ತು ಇದೆ ಎಂಬುದು ಭ್ರಾಂತಿ ತಪ್ಪು ತಿಳುವಳಿಕೆ ಎಂದು ಅನುಭವಕ್ಕೆ ಬರುವುದು. ಹಾಗೆಯೇ ನಾನು ಇದ್ದೇನೆ ಎಂಬ ತಿಳಿವಳಿಕೆಯೂ ಮಿಥ್ಯಾ ಎಂಬುದು ದೃಢವಾಗುವುದು. ಹೀಗೆ ಜಗತ್ತು ಮತ್ತು ನಾನು ಎರಡೂ ಸುಳ್ಳಾದ ಬಳಿಕ ಏನೊಂದೂ ತೋರದೇ ಉಳಿಯದೇ ಅರಿವು ಮಾತ್ರ, ಅರಿವು ಸ್ವರೂಪನಾದ ತಾನು ಮಾತ್ರ, ಉಳಿಯುವುದು. ಅದುವೇ ಪರಮಾರ್ಥ.

## ಸರ್ಕಾರಿ ನೌಕರರ 5 ದಿನಗಳ ಕೆಲಸದ ವಾರ ಸಾಧ್ಯವೇ?

■ ರಾಜ್ಯ 7ನೇ ವೇತನ ಆಯೋಗ ಕರ್ನಾಟಕ ಸರ್ಕಾರಕ್ಕೆ ಕೇವಲ ಸರ್ಕಾರಿ ನೌಕರರ ವೇತನ, ಭತ್ಯೆಗಳ ಹೆಚ್ಚಳದ ಕುರಿತು ಶಿಫಾರಸು ಮಾಡಿಲ್ಲ

• ಉದಯವಾಹಿನಿ ಬೆಂಗಳೂರು

ಕೆ. ಸುಧಾಕರ್ ರಾವ್ ನೇತೃತ್ವದ ರಾಜ್ಯ 7ನೇ ವೇತನ ಆಯೋಗ ಕರ್ನಾಟಕ ಸರ್ಕಾರಕ್ಕೆ ಕೇವಲ ಸರ್ಕಾರಿ ನೌಕರರ ವೇತನ, ಭತ್ಯೆಗಳ ಹೆಚ್ಚಳದ ಕುರಿತು ಶಿಫಾರಸು ಮಾಡಿಲ್ಲ. ನೌಕರರ ವಿವಿಧ ಬೇಡಿಕೆಗಳ ಕುರಿತು ಪರಿಶೀಲನೆ ನಡೆಸಿ, ವಿವರವಾದ ವರದಿ ಕೊಟ್ಟಿದೆ.

ಇದರಲ್ಲಿ ಐದು ದಿನಗಳ ಕೆಲಸದ ವಾರವೂ ಸೇರಿದೆ. ಇದು ಸರ್ಕಾರದಿಂದ ಜಾರಿಗೊಳಿಸಲು ಸಾಧ್ಯವೇ?, ಈ ವಿಚಾರದಲ್ಲಿ 558 ಪುಟಗಳ ಸಂಪುಟ-1ರ ವರದಿಯಲ್ಲಿ ಆಯೋಗ ಪರಿಶೀಲಿಸಿದ ಅಂಶಗಳು ಏನು? ಎಂಬ ಮಾಹಿತಿ ಇಲ್ಲಿದೆ. ಆಯೋಗ ತನ್ನ ವರದಿಯಲ್ಲಿ ಒಂದು ವಿಷಯದ ಚರ್ಚೆಯಲ್ಲಿ ಕಾಲಕಾಲಕ್ಕೆ ಹಲವು ಭಾಗೀದಾರರು ನಿರತರಾಗಿದ್ದಾರೆ ಅದು ರಾಜ್ಯ ಸರ್ಕಾರಿ ನೌಕರರಿಗೆ 5 ದಿನಗಳ ಕೆಲಸದ ವಾರವನ್ನು ರಾಜ್ಯ ಸರ್ಕಾರ ಅಳವಡಿಸಿಕೊಳ್ಳಬೇಕೆ. ಈ ಪದ್ಧತಿಗೆ ವಾಸ್ತವವಾಗಿ, ಕೇಂದ್ರದ ಮಾದರಿಯಲ್ಲಿ ಐದು ದಿನಗಳ ಕೆಲಸ ಮತ್ತು ಎರಡು ದಿನಗಳ ವಿಶ್ರಾಂತಿ ಎಂಬ ಪದ್ಧತಿಯನ್ನು ರಾಜ್ಯ ಸರ್ಕಾರಿ ನೌಕರರಿಗೆ ರಾಜ್ಯಾದ್ಯಂತ ಐದು ದಿನಗಳ ಕೆಲಸದ ವಾರವನ್ನು ಅಳವಡಿಸಿಕೊಳ್ಳುವುದಕ್ಕಾಗಿ ಈ ಆಯೋಗವು ಕೆಎಸ್‌ಜಿಇಎ ಮತ್ತು ಇತರೆ ಇಲಾ ಸಂಘಗಳಿಂದ ಹಲವು ಮನವಿಗಳನ್ನು ಸ್ವೀಕರಿಸಿರುತ್ತದೆ ಎಂದು ಹೇಳಿದೆ.



ಉದಯವಾಹಿನಿ ಚಿತ್ರ

ಇದು ಸರ್ಕಾರಿ ಕಛೇರಿಗಳ ಮತ್ತು ಸಂಸ್ಥೆಗಳ ದಕ್ಷತೆಯನ್ನು ಇನ್ನಷ್ಟು ಕುಂಠಿತವಾಗುವುದಕ್ಕೆ ಕಾರಣವಾಯಿತು ಎಂಬ ಸಾರ್ವಜನಿಕರ ಸಾಮಾನ್ಯ ಗ್ರಹಿಕೆಯ ಆಧಾರದ ಮೇಲೆ ಒಂದು ವರ್ಷದೊಳಗೆ ಇದನ್ನು ಹಿಂತೆಗೆದುಕೊಳ್ಳಲಾಯಿತು.

**ಎರಡು ದಿನಗಳ ವಿಶ್ರಾಂತಿ**

ಆಯೋಗದಲ್ಲಿ ಚರ್ಚಿಸುವ ಸಂದರ್ಭದಲ್ಲಿ ಹೊಂದಿಕೊಳ್ಳುವ ಕೆಲಸದ ವ್ಯವಸ್ಥೆಯನ್ನು ಪರಿಗಣಿಸಲು ಕೋರಿಕೊಳ್ಳುವುದರ ಮೂಲಕ ತಮ್ಮ ಬೇಡಿಕೆಯನ್ನು ಹಲವು ನೌಕರರ ಸಂಘಗಳು ಸಮರ್ಥಿಸಿಕೊಂಡಿರುತ್ತವೆ. ಇದು ಕುಟುಂಬ ಸ್ನೇಹಿ ಉದ್ಯೋಗದ ಆಚರಣೆಗಳಿಗೆ ಸೂಕ್ತ ಪರಿಗಣನೆಯನ್ನು ನೀಡುತ್ತದೆ, ಇದು ಉದ್ಯೋಗದಾತರಿಗೆ, ಉದ್ಯೋಗಿಗಳಿಬ್ಬರಿಗೂ ಸಹಾಯಕ ವಾಗುತ್ತದೆ ಮತ್ತು ಕೆಲಸದ ಜೀವನ ಮತ್ತು ವಿಶ್ರಾಂತಿಯ ಜೀವನ ಸಮತೋಲನವನ್ನು ಸೂಕ್ತವಾಗಿ ಪರಿಗಣಿಸುವುದನ್ನು ನೋಡುತ್ತದೆ. ಇದು ಉದ್ಯೋಗ ಸಂತೃಪ್ತಿ ಮತ್ತು ಉತ್ಪಾದಕತೆಯ ಮೇಲೆ ಹೆಚ್ಚು ಪರಿಣಾಮ ಬೀರುತ್ತದೆ. ಈ ವಿಷಯವನ್ನು 2011ರ ಅಧಿಕಾರಿ ವೇತನ ಸಮಿತಿಯು ಸೂಕ್ಷ್ಮವಾಗಿ ಗಮನಿಸಿರುತ್ತದೆ.

> ಈ ವರದಿಯು ಅಭಿವೃದ್ಧಿ ಹೊಂದಿದ ರಾಷ್ಟ್ರಗಳಾದ ಅಮೆರಿಕ, ಇಂಗ್ಲೆಂಡ್, ಕೆನಡಾ, ಆಸ್ಟ್ರೇಲಿಯಾ, ಫ್ರಾನ್ಸ್, ಜರ್ಮನಿ ಮತ್ತು ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರಗಳಾದ ಚೀನಾ, ಇಂಡೋನೇಷಿಯಾ, ಕೊಲಂಬಿಯಾ ಐದು ದಿನಗಳ ಕೆಲಸದ ವಾರವನ್ನು ಅಳವಡಿಸಿಕೊಂಡಿರುವುದನ್ನು ಸಹ ಉಲ್ಲೇಖಿಸಿದೆ ಮತ್ತು ಈ 2011 ವರದಿಯಲ್ಲಿ, ಐದು ದಿನಗಳ ಕೆಲಸದ ವಾರವನ್ನು ವಿರೋಧಿಸಲು ಮೂಲ ಕಾರಣ 1985ರಲ್ಲಿ ಕರ್ನಾಟಕದಲ್ಲಿ ಪರಿಚಯಿಸಿದ ಆರಂಭದಲ್ಲಿಯೇ ಇದು ವಿಫಲವಾಯಿತು ಎಂದು ಉಲ್ಲೇಖಿಸಿದೆ.

> ಕಾರ್ಯಬಲ ಮತ್ತು ಸಂಸ್ಥೆಗಳ ಬೆಳವಣಿಗೆ ಮತ್ತು ಸದೃಢತೆಗಾಗಿ ಪ್ರಾಮುಖ್ಯತೆ ಇರುವುದರಿಂದ ಕೆಲಸ ಮತ್ತು ವಿರಾಮದ ನಡುವೆ ಸರಿಯಾದ ಸಮತೋಲನವಿರಬೇಕು. ವಾಸ್ತವವಾಗಿ ಆಧುನಿಕ ತಂತ್ರಜ್ಞಾನ ಯುಗದಲ್ಲಿ ಗುಣಮಟ್ಟದ ಮೇಲೆ ಹೆಚ್ಚಿನ ಗಮನಹರಿಸಬೇಕು ಮತ್ತು ಐದು ದಿನಗಳ ಕೆಲಸದ ವಾರವು ಪ್ರಗತಿಪರ ಬದಲಾವಣೆಯ ದಿಕ್ಕಿನೆಡೆಗೆ ಎಂದು ಕಾಣಬಹುದು.

ಸರ್ಕಾರಿ ಕಛೇರಿಗಳು ಐದು ದಿನಗಳ ಕೆಲಸ ಮಾಡುವ ಕುರಿತ ಅಧ್ಯಯನದಲ್ಲಿ ಭಾರತೀಯ ನಿರ್ವಹಣಾ ಸಂಸ್ಥೆ, ಬೆಂಗಳೂರು ನಿರತವಾಗಿತ್ತು ಮತ್ತು ಇದು ಪ್ರತಿ ವಾರದಲ್ಲಿ 5 ದಿನಗಳ ಕೆಲಸದ ಅವಧಿಯನ್ನು ನಿಗದಿಪಡಿಸಲು ಶಿಫಾರಸ್ಸು ಮಾಡಿತ್ತು. ಸಮಿತಿಯ ವರದಿಯಲ್ಲಿ ಕಾಲಾವಧಿಯವರೆಗಿನ ಕೆಲಸವು ಸಂಸ್ಥೆಗಳ ಉತ್ಪಾದಕತೆ ಮತ್ತು ದಕ್ಷತೆಯನ್ನು ಹೆಚ್ಚಿಸುವುದಿಲ್ಲವೆಂದು ಉಲ್ಲೇಖಿಸಿರುತ್ತದೆ. ಅತಿಯಾದ ದೀರ್ಘವಾಗಿ, ಪ್ರಯಾಸಕರ ಕೆಲಸದ ವಾರಗಳು ಆಯಾಸಕ್ಕೆ ಕಾರಣವಾಗಬಹುದು ಮತ್ತು ಇದರಿಂದಾಗಿ ಕಡಿಮೆ ಉತ್ಪಾದಕತೆಗೆ ಕಾರಣವಾಗುತ್ತದೆ.

## ಹರಿದಾಸ ವೈಭವ



• ಉದಯವಾಹಿನಿ ಬೆಂಗಳೂರು

ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ದಂತೆ ಶ್ರೀ ಮಠದ ವಿಚಾರಣಾಕರ್ತರಾದ ಶ್ರೀ ಗಿರಿರಾಜಾಚಾರ್ಯರ ನೇತೃತ್ವದಲ್ಲಿ ಸೆಪ್ಟೆಂಬರ್ 19, ಗುರುವಾರ ಸಂಜೆ 7-00ಕ್ಕೆ ಶ್ರೀಮತಿ ಶ್ರೀವಿದ್ಯಾ ದೇಸಾಯಿ ಇವರ ಹರಿದಾಸ ವೈಭವ ಗಾಯನಕ್ಕೆ ವಾದ್ಯ ಸಹಕಾರದಲ್ಲಿ ಹಾರ್ಮೋನಿಯಂ ವಾದನದಲ್ಲಿ ಕು|| ಸೃಷ್ಟಿ ದೇಸಾಯಿ ಮತ್ತು ತಬಲಾ ವಾದನದಲ್ಲಿ ಶ್ರೀ ಋತುಪರ್ಣ ದೇಸಾಯಿ ಸಾಥ್ ನೀಡಲಿದ್ದಾರೆ ಎಂದು ಶ್ರೀ ಗೊಗ್ಗಿ ಕೃಷ್ಣಾಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಒಂದನೇ ಮುಖ್ಯರಸ್ತೆ, ಪವಮಾನಪುರ, ಬೆಂಗಳೂರು-560062

## ನಿಷೇಧಿತ ವಸ್ತುಗಳು ಹೋಗಲು ಪೊಲೀಸರೇ ಕಾರಣ?

• ಉದಯವಾಹಿನಿ ಬೆಂಗಳೂರು

ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೈದಿಗಳಿಗೆ ರಾಜಾತಿಥ್ಯ ನೀಡುತ್ತಿರುವ ಬಗ್ಗೆ ಆರೋಪಗಳು ಕೇಳಿಬಂದ ಹಿನ್ನೆಲೆ ಸಿಸಿಬಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಈ ವೇಳೆ 15 ಮೊಬೈಲ್‌ಗಳು, ಎಲೆಕ್ಟ್ರಿಕ್ ಸ್ಟವ್, ಚಾಕು, ಪೆನ್ ಡ್ರೈವ್ ಸೇರಿ ಹಲವು ವಸ್ತುಗಳು ಪತ್ತೆ ಆಗಿವೆ.

ನಿಷೇಧಿತ ವಸ್ತುಗಳು ಜೈಲಿನ ಒಳಗೆ ಹೋಗಲು ಪೊಲೀಸರೇ ಕಾರಣ ಎಂದು ಎಫ್‌ಐಆರ್‌ನಲ್ಲಿ ದಾಖಲಿಸಲಾಗಿದೆ. ಹುಳಿಮಾವು ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಕುಮಾರಸ್ವಾಮಿ, ಮಡಿವಾಳ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಮಹಮದ್, ಮೈಕೋಲೇಔಟ್ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಗಿರೀಶ್ ಎಂಎಲ್, ಬೇಗೂರು ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಕೃಷ್ಣಕುಮಾರ್, ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಸತೀಶ್ ಬಿಎಸ್ ಸೇರಿದಂತೆ ಸಿಬ್ಬಂದಿಗಳನ್ನು ಒಳಗೊಂಡ ಪ್ರತ್ಯೇಕ 2 ತಂಡಗಳನ್ನು ರಚಿಸಿ ಏಕಕಾಲದಲ್ಲಿ ರೈಡ್ ಮಾಡಲಾಗಿತ್ತು. ದಾಳಿ ವೇಳೆ ಹಲವು ನಿಷೇಧಿತ ವಸ್ತುಗಳು ಪತ್ತೆಯಾಗಿವೆ. ಭದ್ರತೆ ಇದ್ದರೂ ಜೈಲಿನ ಒಳಗಡೆ ನಿಷೇಧಿತ ವಸ್ತುಗಳು ಸಿಕ್ಕಿರುವ ಹಿನ್ನೆಲೆ ಕಾರಾಗೃಹದ ಅಧಿಕಾರಿಗಳು ಹಾಗೂ ಕೆಎಸ್‌ಐಎಸ್‌ಎಫ್ ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಗೊತ್ತಿದ್ದರೂ ಸಹ ನಿಷೇದಿತ ವಸ್ತುಗಳನ್ನು ಕೇಂದ್ರಕಾರಾಗೃಹದ ಒಳಗಡೆ ಬಿಡಲಾಗಿದೆ ಎಂದು ಆರೋಪಿಸಲಾಗಿದೆ.





ಉದಯವಾಹಿನಿ ಚಿತ್ರ

ವಿಚಾರಣಾಧೀನಾ ಖೈದಿಗಳು, ಸಜಾ ಬಂಧಿಗಳ ಜೊತೆಯಲ್ಲಿ ಕಾರಾಗೃಹ ಇಲಾಖೆಯ ಹಾಗೂ ಕೆಎಸ್‌ಐಎಸ್‌ಎಫ್ ಅಧಿಕಾರಿಗಳು ಶಾಮೀಲಾಗಿದ್ದಾರೆ. ಈ ಹಿನ್ನೆಲೆ ಸಿಬ್ಬಂದಿಗಳ ವಿರುದ್ಧ ಕಾನೂನು ಕ್ರಮ ಜರುಗಿಸುವ ಬಗ್ಗೆ ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ.

## 2ನೇ ವಿಮಾನ ನಿಲ್ದಾಣಕ್ಕೆ ಸ್ಥಳ ಫಿಕ್ಸ್ ಆಯ್ತಾ..!?

• ಉದಯವಾಹಿನಿ ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಎರಡನೇ ವಿಮಾನ ನಿಲ್ದಾಣ ನಿರ್ಮಾಣ ಮಾಡಲೇಬೇಕು ಎಂದು ಪಣ ತೊಟ್ಟಿರುವ ಕಾಂಗ್ರೆಸ್ ಸರ್ಕಾರವು ಸ್ಥಳವನ್ನು ಬಹುತೇಕವಾಗಿ ಫಿಕ್ಸ್ ಮಾಡಿದೆ ಎಂದು ಮೂಲಗಳಿಂದ ತಿಳಿದುಬಂದಿದೆ.

ಈ ಸಂಬಂಧ ಶುಕ್ರವಾರ 11ನೇ ಸುತ್ತಿನ ಸಭೆ ನಡೆದಿದೆ. ಈ ಸಭೆಯಲ್ಲಿ ನೆಲಮಂಗಲದ ಸಮೀಪವೇ ಏರ್‌ಪೋರ್ಟ್ ಕಟ್ಟುವ ನಿರ್ಧಾರವನ್ನ ಬಹುತೇಕ ಅಂತಿಮಗೊಳಿಸಲಾಗಿದೆ ಎಂದು ಹೇಳಲಾಗಿದೆ.

ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ನಿಗದಿಪಡಿಸಿದ ತಾಂತ್ರಿಕ ಮಾನದಂಡಗಳ ಅನ್ವಯ, ಎರಡನೇ ವಿಮಾನ ನಿಲ್ದಾಣಕ್ಕೆ ನೆಲಮಂಗಲ-ಕುಣಿಗಲ್ ನಡುವಿನ ಜಾಗವನ್ನ ಬಹುತೇಕ ಅಂತಿಮಗೊಳಿಸಲಾಗಿದೆ. ವಿಮಾನ ನಿಲ್ದಾಣ ನಿರ್ಮಾಣಕ್ಕೆ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ನೆಲಮಂಗಲದ ಬಳಿ ರಾಜ್ಯ ಸರ್ಕಾರ ಈಗಾಗಲೇ ಜಾಗ ಗುರುತಿಸಿದೆ ಎಂದು ಮಾಹಿತಿ ಲಭ್ಯವಾಗಿದೆ. ನೆಲಮಂಗಲದ ಬಳಿ ಏರ್‌ಪೋರ್ಟ್ ನಿರ್ಮಾಣವಾದರೆ ಇದು ಮೈಸೂರು ರಸ್ತೆ ಮತ್ತು ಕನಕಪುರ ರಸ್ತೆಗಳನ್ನೂ ಸಂಪರ್ಕಿಸುವುದರಿಂದ ಈ ಭಾಗದ ಪ್ರಯಾಣಿಕರಿಗೂ ಅನುಕೂಲ ಆಗುತ್ತದೆ. ನೈಸ್‌ರಸ್ತೆ, ಪಿಆರ್‌ಆರ್ ಮತ್ತು ಸೆಟಲೈಟ್ ಟೌನ್ ರಿಂಗ್ ರೋಡ್ ಜೊತೆಗೆ ಸಂಪರ್ಕಿಸಿ ಬೆಂಗಳೂರಿನ ದಕ್ಷಿಣಭಾಗದ ಜನರಿ ಗೂ ಅನುಕೂಲ ಆಗುತ್ತದೆ. ನೆಲಮಂಗಲ ಬೆಂಗಳೂರು ನಗರದ ಒಳಭಾಗದಿಂದ ಸುಮಾರು 30 ಕಿಮೀ ದೂರದಲ್ಲಿದೆ.



ಉದಯವಾಹಿನಿ ಚಿತ್ರ

> ವಿಮಾನ ನಿಲ್ದಾಣಕ್ಕೆ ತುಮಕೂರು ರೋಡ್, ಮೈಸೂರು ರಸ್ತೆ, ನೆಲಮಂಗಲ-ಕುಣಿಗಲ್ ರಸ್ತೆ, ಕನಕಪುರ, ಮಾಗಡಿ, ದೊಡ್ಡಬಳ್ಳಾಪುರ, ದಾಬಸ್‌ಪೇಟೆಗಳು ಈ ಸಾಲಿನಲ್ಲಿ ಇದ್ದವು. ಅದರಲ್ಲೂ ತುಮಕೂರು ಮತ್ತು ಕನಕಪುರಗಳು ಹೆಚ್ಚಿನ ಸದ್ದು ಮಾಡಿದ್ದವು.

ರಾಷ್ಟ್ರೀಯ ಹೆದ್ದಾರಿ 75ರ ಮೊದಲ ಟೋಲ್ ಸಮೀಪವೇ ಆಗಿದ್ದರಿಂದ ತೊಂದರೆಯೇನೂ ಇಲ್ಲ. ಹೈವೇ, ರೈಲು ನಿಲ್ದಾಣಗಳನ್ನ ಸಂಪರ್ಕಿಸುತ್ತದೆ. ಇಲ್ಲಿ ಸರ್ಕಾರಿ ಭೂಮಿಗಳೇ ಜಾಸ್ತಿ ಇರುವುದರಿಂದ ಏರ್‌ಪೋರ್ಟ್ ನಿರ್ಮಾಣಕ್ಕೆ ತೊಡಕುಗಳು ಕಡಿಮೆ.

## ಮೀಟೂ-ವಿರೋಧ ಜಟಾಪಟಿ

• ಉದಯವಾಹಿನಿ ಬೆಂಗಳೂರು

ಮಲಯಾಳಂ ಚಿತ್ರರಂಗದಲ್ಲಿ ಹೇಮಾ ಕಮಿಟಿ ವರದಿ ಹೊರಬಿದ್ದ ಬೆನ್ನಲ್ಲೇ ಸಾಲು ಸಾಲು ಹಿರಿಯ ನಟಿಯರು ಸೇರಿದಂತೆ ಯುವ ನಟಿಯರು ತಮಗೆ ಸಹ ನಟರು, ನಿರ್ದೇಶಕರು ಹಾಗೂ ನಿರ್ಮಾಕರಿಂದ ಲೈಂಗಿಕ ಕಿರುಕುಳ ಎದುರಾಗಿತ್ತು ಎಂದು ಕ್ಯಾಮರಾ ಮುಂದೆ ಬಹಿರಂಗ ಹೇಳಿಕೆ ನೀಡಿದರು. ಹೆಸರಾಂತ ಹೀರೋಯಿನ್‌ಗಳ ಸ್ಫೋಟಕ ಹೇಳಿಕೆಗಳು ಇದೀಗ ಮಾಲಿವುಡ್ ಸಿನಿ ಇಂಡಸ್ಟ್ರಿಯನ್ನು ಅಕ್ಷರಶಃ ನೆಲಕಚ್ಚುವಂತೆ ಮಾಡಿದೆ. ಸದ್ಯ ಹೇಮಾ ಕಮಿಟಿ ವರದಿಯ ಆಧಾರ ಮೇರೆಗೆ ದೂರನ್ನು ಕೊಟ್ಟಿರುವ ನಟಿಯರನ್ನು ಖುದ್ದಾಗಿ ಮುಖಾಮುಖಿಯಾಗಿ ಭೇಟಿ ಮಾಡ್ತಿರುವ ಕೇರಳದ ಎಸ್‌ಐಟಿ ತಂಡ, ಅವರ ಹೇಳಿಕೆಗಳನ್ನು ದಾಖಲಿಸಿಕೊಂಡು, ತನಿಖೆಗೆ ಮುಂದಾಗುತ್ತಿದೆ. ಸದ್ಯ ಈ ಎಲ್ಲಾ ಬೆಳವಣಿಗೆ ಕಂಡ ಸ್ಯಾಂಡಲ್‌ವುಡ್ ಕೂಡ ನಮ್ಮಲ್ಲೂ ಒಂದು ಹೇಮ ಕಮಿಟಿ ಬರಬೇಕು ಎಂದು ಚಲನಚಿತ್ರ ವಾಣಿಜ್ಯ ಮಂಡಳಿಯನ್ನು ಆಗ್ರಹಿಸಿದೆ.



ಉದಯವಾಹಿನಿ ಚಿತ್ರ

## ಆಡಿಯೋದಲ್ಲಿರೋ ಧ್ವನಿ ನನ್ನದೇ ಕೈ ಮುಖಂಡ ಹನುಮಂತರಾಯಪ್ಪ

• ಉದಯವಾಹಿನಿ ಬೆಂಗಳೂರು

ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಜಾತಿ ನಿಂದನೆ, ಬೆದರಿಕೆ ಆರೋಪದ ಆಡಿಯೋ ಪ್ರಕರಣಕ್ಕೆ ಸಂಬಂಧಿಸಿ ನಿನ್ನೆಯಷ್ಟೇ ಮತ್ತೊಂದು ಆಡಿಯೋ ವೈರಲ್ ಆಗಿತ್ತು. ಆ ಆಡಿಯೋದಲ್ಲಿ ಕಾಂಗ್ರೆಸ್ ಮುಖಂಡ ಹನುಮಂತರಾಯಪ್ಪ ಅವರೊಂದಿಗೆ, ಮುನಿರತ್ನ ವಿರುದ್ಧ ದೂರು ನೀಡಿದ್ದ ಗುತ್ತಿಗೆದಾರ ಚಲುವರಾಜು ಅವರು ಫೋನ್ ಸಂಭಾಷಣೆ ಮಾಡಿದ್ದರು ಎನ್ನಲಾಗಿದೆ. ಅದರಲ್ಲಿ ಮಾತನಾಡಿರೋ ಆಡಿಯೋ ನನ್ನದೇ. ಅದು ನನ್ನ ಧ್ವನಿ ಅಂತಾ ನಾನು ಹೇಳಲ್ಲ ಎಂದು ಇದೀಗ ಹನುಮಂತರಾಯಪ್ಪ ಸ್ಪಷ್ಟನೆ ನೀಡಿದ್ದಾರೆ. ಚಲುವರಾಜು ನನ್ನ ಸಮುದಾಯದವರು ಹಾಗೂ ನಮ್ಮ ತಾಲ್ಲೂಕಿನವರು. ಹೀಗಾಗಿ ಸಮಸ್ಯೆ ಇದ್ದರೆ ಬಗೆಹರಿಸಿಕೊಳ್ಳಲು ಸೂಚಿಸಿದ್ದೆ ಎಂದು ಹೇಳುವ ಮೂಲಕ ಆಡಿಯೋ ತಮ್ಮದೇ ಎಂದು ಹನುಮಂತರಾಯಪ್ಪ ಒಪ್ಪಿಕೊಂಡಿದ್ದಾರೆ. ನಿನ್ನೆಯ ಆಡಿಯೋದಲ್ಲಿ, ಮುನಿರತ್ನ ತಮಗೆ ಮೋಸ ಮಾಡಿಲ್ಲ ಎಂದು ಚಲುವರಾಜು ಅವರು ಹೇಳಿದಂತಹ ಸಂಭಾಷಣೆ ಇದೆ.

## ಸರ್.ಎಂ.ವಿಶ್ವೇಶ್ವರಯ್ಯ ಜನ್ಮ ದಿನಾಚರಣೆ: ಇಂಜನಿಯರ್‌ಗಳಿಗೆ ಸರ್.ಎಂ.ವಿ.ಪ್ರಶಸ್ತಿ ಪ್ರದಾನ

• ಉದಯವಾಹಿನಿ ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ (ನೊ.)ವತಿಯಿಂದ ಸರ್. ಎಂ. ವಿಶ್ವೇಶ್ವರಯ್ಯ ಜಯಂತಿ ಪ್ರಯುಕ್ತ ಇಂಜಿನಿಯರ್ ದಿನಾಚರಣೆ ಹಾಗೂ ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಬಿಬಿಎಂಪಿ ಕೇಂದ್ರ ಕಛೇರಿಯಲ್ಲಿ ನೌಕರರ ಭವನ, ಬಸವ ಸಭಾಂಗಣದಲ್ಲಿ ದಿನಾಂಕ : 18-09-2024, ಬುಧವಾರ ಬೆಳಗ್ಗೆ 11-30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮಾಧ್ಯಮಗಳಿಗೆ ಮಾಹಿತಿ ನೀಡಿ ಸಂಘದ ವತಿಯಿಂದ ಪ್ರಪ್ರಥಮವಾಗಿ ಸರ್.ಎಂ.ವಿಶ್ವೇಶ್ವರಯ್ಯ ಜಯಂತಿ ಪ್ರಯುಕ್ತ ದಿನಾಂಕ: 18-09-2024 ರ ಬುಧವಾರದಂದು ಬೆಳಗ್ಗೆ:9:30 ಕ್ಕೆ ಕೆ.ಆರ್. ಸರ್ಕಲ್‌ನಲ್ಲಿರುವ ಸರ್.ಎಂ. ವಿಶ್ವೇಶ್ವರಯ್ಯರವರ ಪುತ್ಥಳಿಗೆ ಮಾಲಾರ್ಪಣೆ ಹಾಗೂ ಬೆಳಗ್ಗೆ 11:30 ಗಂಟೆ ನಂತರ ಸಭಾ ಕಾರ್ಯಕ್ರಮ ಇಂಜಿನಿಯರ್ ದಿನಾಚರಣೆ ಹಾಗೂ ಸರ್. ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಬಿಬಿಎಂಪಿ ನೌಕರರ ಭವನದ ಬಸವ ಸಭಾಂಗಣ ಕೇಂದ್ರ ಕಛೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಪುರಸ್ಕೃತರಗಳಾದ ಬಸವರಾಜ್ ಆರ್. ಕಬಾಡೆ ಮುಖ್ಯ ಪ್ರಧಾನ ವ್ಯವಸ್ಥಾಪಕರು (ಬಿ.ಎಸ್.ಡಬ್ಲ್ಯೂ.ಎಂ.ಎಲ್) ಶ್ರೀಮತಿ ಸುಗುಣ,ಮುಖ್ಯ ಅಭಿಯಂತರರು ಪೂರ್ವ ರಾಕೇಶ್ ಕುಮಾರ್ ಜಂಟಿ ನಿರ್ದೇಶಕರು, ಟೌನ್ ಪ್ಲಾನಿಂಗ್ ಹೆಚ್.ಎಸ್.ಮಹದೇಶ್,ಅಧೀಕ್ಷಕ ಅಭಿಯಂತರರು ರೂಪೇಶ್, ಕಾರ್ಯಪಾಲಕ ಅಭಿಯಂತರರು ಮುನಿರೆಡ್ಡಿ,ಕಾರ್ಯಪಾಲಕ ಅಭಿಯಂತರರು ಎಲ್ ವೆಂಕಟೇಶ್, ಕಾರ್ಯಪಾಲಕ ಅಭಿಯಂತರರು (ಕೆರೆಗಳು) ರಾಮಚಂದ್ರಪ್ಪ ಹೆಚ್. ಎಸ್.,ಕಾರ್ಯಪಾಲಕ ಅಭಿಯಂತರರು(ಜೆ.ಡಿ.ಟಿ.ಪಿ ದಕ್ಷಿಣ) ರಾಜಣ್ಣಕಾರ್ಯಪಾಲಕ ಅಭಿಯಂತರರು (ಟಿ.ವಿ.ಸಿ.ಸಿ) ಬಿ. ಶರತ್,ಕಾರ್ಯಪಾಲಕ ಅಭಿಯಂತರರು (ಎಂ.ಪಿ.ಇ.ಡಿ) ಬಿ.ಎನ್.ಪ್ರದೀಪ್,ಕಾರ್ಯಪಾಲಕ ಅಭಿಯಂತರರುಶ್ರೀಮತಿ ಆಶಾ ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ವಿ. ದಕ್ಷಿಣ ವಲಯ) ಚಂದ್ರಶೇಖರ್ ನಾಯಕ್ ಸಹಾಯಕ ಅಭಿಯಂತರರು (ಟಿ.ಡಿ.ಆರ್) ಸರ್.ಎಂ.ವಿ.ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರಧಾನ ಮಾಡಲಾಗುವುದು ಎಂದು ಹೇಳಿದರು.



ಉದಯವಾಹಿನಿ ಚಿತ್ರ



> ಉದ್ಘಾಟನೆಯನ್ನು ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ರವರು, ಮುಖ್ಯ ಅತಿಥಿಗಳಾಗಿ ವಿಶೇಷ ಆಯುಕ್ತರುಗಳಾದ ಡಾ|| ಅವಿನಾಶ್ ಮೆನನ್‌ರಾಜೇಂದ್ರನ್ (ಆಡಳಿತ) ಡಾ| ಹರೀಶ್ ಕುಮಾರ್ ಕೆ. ಉಪ ಆಯುಕ್ತರಾದ ಡಾ|| ಮಂಜುನಾಥಸ್ವಾಮಿ ಬಿ.ಎಸ್. ಪ್ರಧಾನ ಅಭಿಯಂತರಾದ ಬಿ.ಎಸ್. ಪ್ರಹ್ಲಾದ್, ವಿಶೇಷ ಆಹ್ವಾನಿತರಾಗಿ ಉಪಮುಖ್ಯ ಮಂತ್ರಿಗಳ ತಾಂತ್ರಿಕ ಸಲಹೆಗಾರರಾದ ಕೆ.ಟಿ. ನಾಗರಾಜ್ ರವರು, ಕರ್ನಾಟಕ ರಾಜ್ಯ ಇಂಜಿನಿ ಯರುಗಳ ಸಂಘದ ಮಾಜಿ ಅಧ್ಯಕ್ಷರಾದ ನಾಗ ರಾಜುರವರು ಉದ್ಘಾಟನೆ, ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ.

## ಅಡುಗೆ ಅನಿಲ ಸಿಲಿಂಡರ್ ಸ್ಫೋಟಕ್ಕೆ ಮನೆ ನುಚ್ಚುನೂರು - ನಾಲ್ವರ ಸ್ಥಿತಿ ಗಂಭೀರ

• ಉದಯವಾಹಿನಿ ಬೆಂಗಳೂರು

ಅಡುಗೆ ಅನಿಲ ಸ್ಫೋಟದಿಂದ ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಬೈಯಪ್ಪನಹಳ್ಳಿಯ ಸಂಜಯ್ ಗಾಂಧಿ ನಗರದ ಬಳಿ ಸೋಮವಾರ ನಡೆದಿದೆ. ಸ್ಫೋಟದ ತೀವ್ರತೆಗೆ ಮನೆಯ ಗೋಡೆಯೇ ಕುಸಿದು ಬಿದ್ದಿದ್ದು ಮನೆಯ ವಸ್ತುಗಳು ನುಚ್ಚುನೂರಾಗಿವೆ. ಅಕ್ಕಪಕ್ಕದ ಮನೆಗಳಿಗೂ ಸಹ ಸ್ಫೋಟದ ಪರಿಣಾಮ ತಗುಲಿದೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ಬೈಯಪ್ಪನಹಳ್ಳಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



ಉದಯವಾಹಿನಿ ಚಿತ್ರ

## ನಿಫಾ ಸೋಂಕಿಗೆ ಕೇರಳ ಮೂಲದ ವಿದ್ಯಾರ್ಥಿ ಬಲಿ

• ಉದಯವಾಹಿನಿ ಬೆಂಗಳೂರು

ಮಾರಣಾಂತಿಕ ನಿಫಾ ವೈರಸ್ ಸೋಂಕಿಗೆ ಕೇರಳ ಮೂಲದ ವಿದ್ಯಾರ್ಥಿಯೊಬ್ಬ ಬಲಿಯಾಗಿರುವ ಘಟನೆ ನಡೆದಿದೆ. ಮೃತ ಯುವಕನ ಟ್ರಾವೆಲ್ ಹಿಸ್ಟ್ರಿ ಬೆಚ್ಚಿ ಬೀಳಿಸುವಂತಿದ್ದು, ಸಿಲಿಕಾನ್ ಸಿಟಿ ಬೆಂಗಳೂರಿಗೂ ಆತಂಕ ಎದುರಾಗಿದೆ. ಕೇರಳದ ಮಲಪ್ಪುರಂ ಮೂಲದ 23 ವರ್ಷದ ವಿದ್ಯಾರ್ಥಿ ನಿಫಾ ಸೋಂಕಿನಿಂದ ಮೃತಪಟ್ಟಿರುವುದು ದೃಢವಾಗಿದೆ.

ಕಾಲಿಗೆ ಪೆಟ್ಟುಬಿದ್ದ ಕಾರಣ ಬೆಂಗಳೂರಿನಿಂದ ಕೇರಳಕ್ಕೆ ತೆರಳಿದ್ದ ವಿದ್ಯಾರ್ಥಿ, ಸೆ.5ರಂದು ಆಸ್ಪತ್ರೆಗೆ ದಾಖಲಾಗಿದ್ದ. ತಪಾಸಣೆ ವೇಳೆ ಯುವಕನಿಗೆ ನಿಫಾ ವೈರಸ್ ಸೋಂಕು ಪತ್ತೆಯಾಗಿತ್ತು. ಚಿಕಿತ್ಸೆ ಪಡೆಯುತ್ತಿದ್ದ ಯುವಕ ಸೆ.8ರಂದು ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದ. ಯುವಕನ ಅಂತ್ಯಕ್ರಿಯಲ್ಲಿ ಬೆಂಗಳೂರಿನ ಆತನ ಸ್ನೇಹಿತರು 15 ಜನ ವಿದ್ಯಾರ್ಥಿಗಳು ಸೇರಿದಂತೆ 115 ಜನರು ಭಾಗಿಯಾಗಿದ್ದರು. ಬೆಂಗಳೂರಿನ 15 ವಿದ್ಯಾರ್ಥಿಗಳು ಮೃತ ಯುವಕನ ಸಂಪರ್ಕದಲ್ಲಿದ್ದರು ಎಂದು ತಿಳಿದುಬಂದಿದೆ. ಈ ಹಿನ್ನೆಲೆಯಲ್ಲಿ ಕೇರಳ ಆರೋಗ್ಯ ಇಲಾಖೆ ಮೃತ ಯುವಕನ ಅಂತ್ಯಕ್ರಿಯೆಯಲ್ಲಿ ಭಾಗಿಯಾದವರನ್ನು ಐಸೋಲೇಷನ್ ಮಾಡಿದ್ದು, ಬೆಂಗಳೂರಿನ 15 ವಿದ್ಯಾರ್ಥಿಗಳನ್ನು ಕೂಡ ಐಸೋಲೇಷನ್‌ಗೆ ಒಳಪಡಿಸಲು ಆರೋಗ್ಯ ಇಲಾಖೆ ಚಿಂತನೆ ನಡೆಸಿದೆ.





ಉದಯವಾಹಿನಿ ಚಿತ್ರ

## 3 ತಿಂಗಳಿನಿಂದ ಹಣ ವರ್ಗಾವಣೆಯಾಗಿಲ್ಲವೆಂದು ಸರ್ಕಾರಕ್ಕೆ ಹಿಡಿ ಶಾಪ

• ಉದಯವಾಹಿನಿ ಬೆಂಗಳೂರು

ಸಿಎಂ ಸಿದ್ದರಾಮಯ್ಯನವರ ಕನಸಿನ ಕೂಸಾದ ಉಚಿತ ಅಕ್ಕಿ ನೀಡುವ ಅನ್ನಭಾಗ್ಯ ಯೋಜನೆಗೆ ಮತ್ತೆ ಗ್ರಹಣ ಹಿಡಿದಿದೆ. ಅಕ್ಕಿ ಬದಲಿಗೆ ಹಣ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಮಾಡಲಾಗುತ್ತಿದ್ದು, ಕಳೆದ ಮೂರು ತಿಂಗಳಿನಿಂದ ಹಣ ವರ್ಗಾವಣೆಯಾಗಿಲ್ಲ. ಇದೀಗ ಅನ್ನಭಾಗ್ಯ ಫಾಲಾನುಭವಿಗಳು ಸರ್ಕಾರಕ್ಕೆ ಹಿಡಿ ಶಾಪ ಹಾಕುತ್ತಿದ್ದಾರೆ.

ಸದ್ಯ ಗೃಹಲಕ್ಷ್ಮಿ ಯೋಜನೆಯಡಿ ನೀಡುತ್ತಿದ್ದ 2,000 ರೂ. ಎರಡು ತಿಂಗಳುಗಳಿಂದ ಫಲಾನುಭವಿಗಳ ಖಾತೆಗೆ ವರ್ಗವಾಗಿಲ್ಲ. ಇದೀಗ ಅನ್ನಭಾಗ್ಯದ ಹಣ ಕೂಡ 2 ತಿಂಗಳಿನಿಂದ ಬಂದಿಲ್ಲ ಅಂತ ಬಿಪಿಎಲ್ ಫಲಾನುಭವಿಗಳು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದುಡ್ಡು ಬರುತ್ತದೆ ಎಂದು ಇ-ಕೆವೈಸಿ ಮಾಡಿ, ಪಾನ್ ಲಿಂಕ್ ಮಾಡಿ, ಆಧಾರ್ ಲಿಂಕ್ ಮಾಡ್ಲಿ ಎಂದು ಬೆಂಗಳೂರು ಒನ್ ಕೇಂದ್ರಗಳಲ್ಲಿ ವಾರಗಟ್ಟಲೆ ನಿಂತು ಅರ್ಜಿ ಸಲ್ಲಿಕೆ ಮಾಡಿದೆವು. ಈಗ ನೋಡಿದರೆ ಹಣವೂ ಇಲ್ಲ, ಅಕ್ಕಿಯೂ ಇಲ್ಲ. ನಮಗೆ ದುಡ್ಡು ಕೊಡದೇ ಇದ್ದರೂ ಪರ್ವಾಗಿಲ್ಲ. ಆದರೆ ಅಕ್ಕಿಯನ್ನಾದರೂ ಕೊಡಿ ಎಂದು ಫಲಾನುಭವಿಗಳು ಆಗ್ರಹಿಸಿದ್ದಾರೆ.



ಉದಯವಾಹಿನಿ ಚಿತ್ರ

> ನಾವೇನೂ ಸಿದ್ದರಾಮಾಯ್ಯನವರನ್ನ ದುಡ್ಡೇ ಕೊಡಿ, ಅಕ್ಕಿಕೊಡಿ, ಫ್ರಿ ಬಸ್ ಕೊಡಿ ಅಂತ ಹೇಳಿಲ್ಲ. ಆದರೆ ಅಧಿಕಾರಕ್ಕೆ ಬರುವ ಆಸೆಗಾಗಿ ಯೋಜನೆ ಜಾರಿ ಮಾಡಿ, ಸ್ವಲ್ಪ ದಿನ ಕೊಟ್ಟು ಜನರಿಗೆ ಮೋಸ ಮಾಡಿ ದ್ದಾರೆ. ಸರ್ಕಾರ ಕೊಡುವ ದುಡ್ಡನ್ನು ನಂಬಿ ನಾವು ಜೀವನ ಮಾಡುತ್ತಿಲ್ಲ. ಆದರೆ ಕೊಡುತ್ತೇವೆ ಎಂದು ಮೋಸ ಮಾಡಿದರು ಎಂದು ಸಾರ್ವಜನಿಕರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಗುತ್ತಿಗೆದಾರ ಚಲುವರಾಜು ಮನೆಗೆ ಭೇಟಿ ನೀಡಿ ಮಾಹಿತಿ ಪಡೆದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

• ಉದಯವಾಹಿನಿ ಬೆಂಗಳೂರು

ಬಿಜೆಪಿ ಶಾಸಕ ಮುನಿರತ್ನ ಆಡಿಯೋ ಪ್ರಕರಣ, ಜೀವ ಬೆದರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಗುತ್ತಿಗೆದಾರ ಚಲುವರಾಜು ನಿವಾಸಕ್ಕೆ ಭೇಟಿ ನೀಡಿ ಮಾಹಿತಿ ಪಡೆದರು.ಬೆಂಗಳೂರಿನ ಭಾರತ್ ನಗರದಲ್ಲಿರುವ ಗುತ್ತಿಗೆದಾರ ಚಲುವರಾಜು ನಿವಾಸಕ್ಕೆ ಭೇಟಿ ನೀಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಚಲುವರಾಜು ಹಾಗೂ ಅವರ ಪತ್ನಿಯಿಂದ ಮಾಹಿತಿ ಪಡೆದರು. ಶಾಸಕ ಮುನಿರತ್ನ ಕಳೆದ ಮೂರು ವರ್ಷಗಳಿಂದ ಕೊಡಬಾರದ ಹಿಂಸೆ ಕೊಟ್ಟಿದ್ದಾರೆ. ಕಮಿಷನ್ ಗಾಗಿ ಪೀಡಿಸಿದ್ದಾರೆ. ನನ್ನ ಹಾಗೂ ನನ್ನ ಪತ್ನಿಯನ್ನು ಹೀನಾಮಾನ ವಾಗಿ ಅವಮಾನಿಸಿದ್ದಾರೆ. ನನ್ನ ಪತ್ನಿ ಫೋಟೋ ಕಳುಹಿಸು ಎಂದು ಕಿರುಕುಳ ನೀಡಿದ್ದಾರೆ ಎಂದು ಚಲುವರಾಜು ಸಚಿವರ ಬಳಿ ಕಣ್ಣೀರಿಟ್ಟಿದ್ದಾರೆ. ನನಗೆ ಹಾಗೂ ನನ್ನ ಕುಟುಂಬಕ್ಕೆ ರಕ್ಷಣೆ ನೀಡುವಂತೆ ಮನವಿ ಮಾಡಿದ್ದಾರೆ. ಈ ವೇಳೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸರ್ಕಾರ ನಿಮ್ಮ ಜೊತೆಗಿದೆ ಎಂದು ಧೈರ್ಯ ತುಂಬಿದರು.



ಉದಯವಾಹಿನಿ ಚಿತ್ರ

## ರಾಜ್ಯದಲ್ಲಿ ನಿಫಾ ವೈರಸ್ ಆತಂಕ: ಇದರ ಲಕ್ಷಣ, ಮುನ್ನೆಚ್ಚರಿಕೆ

### ಕೇರಳದ ಮಲಪ್ಪುರಂ ಮೂಲದ 24 ವರ್ಷದ ವಿದ್ಯಾರ್ಥಿ ನಿಫಾದಿಂದ ಸಾವು, ಪ್ರಾಣಿಗಳಿಂದ ಮನುಷ್ಯರಿಗೆ, ನಂತರ ಮನುಷ್ಯರಿಂದ ಮನುಷ್ಯರಿಗೆ

• ಉದಯವಾಹಿನಿ ಬೆಂಗಳೂರು

ಬೆಂಗಳೂರಿನಲ್ಲಿ ಓದುತ್ತಿದ್ದ ಕೇರಳ ಮೂಲದ ವಿದ್ಯಾರ್ಥಿ ನಿಫಾಗೆ ಬಲಿಯಾಗಿದ್ದಾರೆ. ಕೇರಳದ ಮಲಪ್ಪುರಂ ಮೂಲದ 24 ವರ್ಷದ ವಿದ್ಯಾರ್ಥಿ ನಿಫಾದಿಂದ ಮೃತಪಟ್ಟಿದ್ದಾರೆ.ಈ ಹಿನ್ನೆಲೆ ರಾಜ್ಯದಲ್ಲಿ ನಿಫಾ ವೈರಸ್ ಆತಂಕ ಮನೆ ಮಾಡಿದೆ.

ನಿಫಾ ವೈರಸ್ ಎಂದರೇನು ..? ಇದರ ಲಕ್ಷಣ, ಮುನ್ನೆಚ್ಚರಿಕೆ ಕ್ರಮಗಳೇನು..?

ನಿಫಾ ಒಂದು ಝೂನೋಟಿಕ್ ವೈರಸ್ ಆಗಿದ್ದು, ಇದು ಪ್ರಾಣಿಗಳಿಂದ ಮನುಷ್ಯರಿಗೆ ಮತ್ತು ನಂತರ ಮನುಷ್ಯರಿಂದ ಮನುಷ್ಯರಿಗೆ ಹರಡುತ್ತದೆ. ಹಾರುವ ನರಿಗಳು' ಎಂದೂ ಕರೆಯಲ್ಪಡುವ ಹಣ್ಣಿನ ಬಾವಲಿಗಳು ನಿಪಾಹ್ ವೈರಸ್ನ ವಾಹಕಗಳಾಗಿವೆ, ವೈರಸ್‌ಗೆ ಮೊದಲು ಪತ್ತೆಯಾದ ಮಲೇಷ್ಯಾದ ಹಳ್ಳಿಯ ಹೆಸರನ್ನು ಇಡಲಾಗಿದೆ.

ನಿಪಾಹ್ ವೈರಸ್ ಸೋಂಕಿಗೆ ಒಳಗಾದ ಹಣ್ಣಿನ ಬಾವಲಿಗಳು ಈ ವೈರಸ್ ಸೋಂಕನ್ನು ಇತರ ಪ್ರಾಣಿಗಳಿಗೆ ಅಥವಾ ಮನುಷ್ಯರಿಗೆ ಹರಡುತ್ತವೆ. ಸೋಂಕಿತ ಪ್ರಾಣಿಯೊಂದಿಗಿನ ನಿಕಟ ಸಂಪರ್ಕ ಅಥವಾ ಅದರ ದೇಹದ ದ್ರವಗಳ ಸಂಪರ್ಕದಿಂದಾಗಿ ಸೋಂಕಿನ ಅಪಾಯವು ತುಂಬಾ ಹೆಚ್ಚಾಗಿದೆ.

**ಯಾವುದೇ ಔಷಧಿ ಇಲ್ಲ**

ನಿಪಾಹ್ ವೈರಸ್ ಸೋಂಕು ಒಬ್ಬ ವ್ಯಕ್ತಿಯಿಂದ ಇನ್ನೊಬ್ಬರಿಗೆ ಹರಡಬಹುದು.

ಉಸಿರಾಟದ ಕಾಯಿಲೆಗಳಲ್ಲದೆ, ನಿಪಾಹ್ ವೈರಸ್ ಸೋಂಕಿನಿಂದಾಗಿ, ಮೆದುಳಿನ ಉರಿಯೂತ, ಅಂದರೆ ಎನ್ಸೆಫಾಲಿಟಿಸ್ ನಂತಹ ಮಾರಣಾಂತಿಕ ಕಾಯಿಲೆಗಳು ಸಹ ಇರಬಹುದು. ಜ್ವರ, ತಲೆನೋವು, ಕೆಮ್ಮು, ಉಸಿರಾಟದ ತೊಂದರೆ ಮತ್ತು ವಾಂತಿ ಇದರ ಲಕ್ಷಣಗಳಾಗಿವೆ. ಗಂಭೀರ ಸ್ಥಿತಿಯ ರೋಗಲಕ್ಷಣಗಳಲ್ಲಿ ತಪ್ಪು ಗ್ರಹಿಕೆಗಳು, ಸೆಳೆತಗಳು ಮತ್ತು ಕೋಮಾ ಕೂಡ ಸೇರಿವೆ. ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯು ಎಚ್‌ಒ) ಪ್ರಕಾರ, ನಿಪಾಹ್ ವೈರಸ್ ಸೋಂಕಿತ ಪ್ರಕರಣಗಳಲ್ಲಿ ಸಾವಿನ ಪ್ರಮಾಣವು ಶೇಕಡಾ 40 ರಿಂದ 75 ರ ನಡುವೆ ಇರುತ್ತದೆ. ನಿಪಾಹ್ ವೈರಸ್ ಸೋಂಕನ್ನು ಕಡಿಮೆ ಮಾಡಲು ಅಥವಾ ತೊಡೆದುಹಾಕಲು ಇರುವ ಏಕೈಕ ಮಾರ್ಗವೆಂದರೆ ಜನರಿಗೆ ಅರಿವು ಮೂಡಿಸುವುದು ಎಂದು ವಿಶ್ವ ಆರೋಗ್ಯ ಸಂಸ್ಥೆ ಒತ್ತಿಹೇಳುತ್ತದೆ. ಸಾರ್ವಜನಿಕರಿಗೆ ಕಲಿಸಲು ಮತ್ತು ಅರಿವು ಮೂಡಿಸಲು ಸಂದೇಶಗಳನ್ನು ಕಳುಹಿಸಬೇಕೆಂದು ಸಂಸ್ಥೆ ಸೂಚಿಸುತ್ತದೆ, 4) ಜನರು ಆಹಾರ, ಅಥವಾ ಹಣ್ಣು ಸೇವಿಸುವ ಮೊದಲು ಚೆನ್ನಾಗಿ ತೊಳೆಯಬೇಕು. ಹಾಗೂ ಸೋಂಕಿತ ವ್ಯಕ್ತಿಯ ಸಂಪರ್ಕಕ್ಕೆ ಬಂದ ನಂತರ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಬೇಕು.

ಹೆಚ್ಚಿನ ಜ್ವರ, ತಲೆನೋವು, ಉಸಿರಾಟದ ತೊಂದರೆ, ಗಂಟಲು ನೋವು, ವಿಲಕ್ಷಣ ನ್ಯುಮೋನಿಯಾದಂತಹ ರೋಗಲಕ್ಷಣಗಳು ಕಂಡುಬರುತ್ತವೆ. ಅದೇ ಸಮಯದಲ್ಲಿ, ಪರಿಸ್ಥಿತಿ ಹೆಚ್ಚು ಗಂಭೀರವಾಗಿದ್ದರೆ, ವ್ಯಕ್ತಿಯು ಎನ್ಸೆಫಾಲಿಟಿಸ್ಗೆ ಬಲಿಯಾಗಬಹುದು ಮತ್ತು 24 ರಿಂದ 48 ಗಂಟೆಗಳಲ್ಲಿ ಕೋಮಾಗೆ ಹೋಗಬಹುದು.



ಉದಯವಾಹಿನಿ ಚಿತ್ರ

> ನಿಫಾದ ಮೊದಲ ಪ್ರಕರಣ 1999 ರಲ್ಲಿ ವರದಿಯಾಗಿದೆ, ಆದರೆ ಇಲ್ಲಿಯವರೆಗೆ ಅದಕ್ಕೆ ಚಿಕಿತ್ಸೆ ನೀಡಲು ಯಾವುದೇ ಔಷಧಿ ಇಲ್ಲ ಅಥವಾ ಅದನ್ನು ತಡೆಗಟ್ಟಲು ಯಾವುದೇ ಲಸಿಕೆ ತಯಾರಿಸಲಾಗಿಲ್ಲ. ಇದೀಗ, ನಿಫಾ ಚಿಕಿತ್ಸೆಯನ್ನು ಕೇವಲ ಮುನ್ನೆಚ್ಚರಿಕೆ ಎಂದು ಪರಿಗಣಿಸಲಾಗಿದೆ. ಕೆಲವು ವಿಷಯಗಳ ಬಗ್ಗೆ ಕಾಳಜಿ ವಹಿಸಿದರೆ, ಈ ವೈರಸ್ ನಿಂದ ಸಿಕ್ಕಿಹಾಕಿಕೊಳ್ಳುವುದನ್ನು ತಪ್ಪಿಸಬಹುದು. ಬಾವಲಿಗಳು ಮತ್ತು ಹಂದಿಗಳ ಸಂಪರ್ಕವನ್ನು ತಪ್ಪಿಸಿ, ನೆಲದಿಂದ ಅಥವಾ ನೇರವಾಗಿ ಮರದಿಂದ ಬಿದ್ದ ಹಣ್ಣುಗಳನ್ನು ತಿನ್ನಬೇಡಿ, ಮಾಸ್ಕ್ ಧರಿಸಿ ಮತ್ತು ಕಾಲಕಾಲಕ್ಕೆ ಕೈಗಳನ್ನು ತೊಳೆಯಿರಿ.

> ನಿಪಾಹ್ ವೈರಸ್ನ ಲಕ್ಷಣಗಳು 5 ರಿಂದ 14 ದಿನಗಳಲ್ಲಿ ಕಾಣಿಸಿಕೊಳ್ಳಬಹುದು, ಆದರೆ ಕೆಲವು ಸಂದರ್ಭಗಳಲ್ಲಿ ಇದು 45 ದಿನಗಳವರೆಗೆ ವಿಸ್ತರಿಸಬಹುದು. ಇದು ವೈರಸ್ ಗೆ ಸಂಬಂಧಿಸಿದ ಅತ್ಯಂತ ಅಪಾಯಕಾರಿ ಅಂಶವಾಗಿದೆ.

# ಒಂದೂವರೆ ತಿಂಗಳಾದರೂ 'ಸ್ಕಂದಗಿರಿ' ಚಾರಣ ಬಂದ್

## • ದೀರ್ಘವಾಗಿ ಚಾರಣದ ಹಾದಿ ಬಂದ್ ಆಗಿರುವುದು ಚಾರಣಿಗರಿಗೆ ಮತ್ತು ಪ್ರವಾಸಿಗರಿಗೆ ಬೇಸರ ತರಿಸಿದೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ರಾಜ್ಯದಲ್ಲಿಯೇ ಪ್ರಸಿದ್ಧವಾದ ತಾಲ್ಲೂಕಿನ ಸ್ಕಂದಗಿರಿ ಬೆಟ್ಟದ ಚಾರಣ ಹಾದಿ ಬಂದ್ ಆಗಿ ಒಂದೂವರೆ ತಿಂಗಳು ಕಳೆದಿದೆ. ಹೀಗೆ ದೀರ್ಘವಾಗಿ ಚಾರಣದ ಹಾದಿ ಬಂದ್ ಆಗಿರುವುದು ಚಾರಣಿಗರಿಗೆ ಮತ್ತು ಪ್ರವಾಸಿಗರಿಗೆ ಬೇಸರ ತರಿಸಿದೆ. ರಾಜ್ಯದಲ್ಲಿಯೇ ಸ್ಕಂದಗಿರಿ ಪ್ರಮುಖ ಚಾರಣ ಸ್ಥಳಗಳಲ್ಲಿ ಒಂದು.

ಜು.31ರ ನಂತರ ಇಲ್ಲಿಯವರೆಗೆ ಪ್ರವಾಸಿಗರ ಪ್ರವೇಶ ಸಾಧ್ಯವಾಗಿಲ್ಲ. ಈ ತಿಂಗಳ ಅಂತ್ಯದಲ್ಲಿ ಅಥವಾ ಶೀಘ್ರದಲ್ಲಿಯೇ ಪ್ರವೇಶಕ್ಕೆ ಅವಕಾಶವಾಗಲಿದೆ ಎಂದು ಅರಣ್ಯ ಇಲಾಖೆ ಮೂಲಗಳು ತಿಳಿಸುತ್ತವೆ.

ಹೀಗೆ ಸ್ಕಂದಗಿರಿಯ ಚಾರಣದ ಹಾದಿ ಬಂದ್ ಆಗಿರುವುದು ಚಿಕ್ಕಬಳ್ಳಾಪುರದ ಪ್ರವಾಸೋದ್ಯಮದ ಕಲರವನ್ನು ಸ್ವಲ್ಪಮಟ್ಟಿಗೆ ತಗ್ಗಿಸಿದೆ. ವಿಶೇಷವಾಗಿ ಶನಿವಾರ ಮತ್ತು ಭಾನುವಾರದ ವಾರಾಂತ್ಯದ ದಿನಗಳಲ್ಲಿ ಸ್ಕಂದಗಿರಿ ಹಾದಿಯಲ್ಲಿ ಬೈಕ್ ಮತ್ತು ಕಾರುಗಳ ಸಂಖ್ಯೆ ಹೆಚ್ಚುತ್ತಿತ್ತು. ಬೆಳ್ಳಂ ಬೆಳಿಗ್ಗೆಯೇ ಚಾರಣಿಗರು ಗಿರಿ ಪ್ರವೇಶಿಸುತ್ತಿದ್ದರು. ಈ ವಾರಾಂತ್ಯದ ಪ್ರವಾಸಕ್ಕೆ ಎರಡು ಮೂರು ವಾರಗಳ ಮುನ್ನವೇ ಟಿಕೆಟ್ ಕಾಯ್ದಿರಿಸಬೇಕಾಗಿತ್ತು.

ಹೀಗೆ ಹೆಚ್ಚಿನ ಬೇಡಿಕೆಯು ಸ್ಕಂದಗಿರಿ ಚಾರಣಕ್ಕೆ ಇತ್ತು. ಬೆಂಗಳೂರಿನ ಚಾರಣ ಸಂಸ್ಥೆಗಳು ದೊಡ್ಡ ಸಂಖ್ಯೆಯಲ್ಲಿ ಪ್ರವಾಸಿಗರನ್ನು ಕರೆ ತರುತ್ತಿದ್ದವು. ಚಿಕ್ಕಬಳ್ಳಾಪುರದ ಪ್ರವಾಸೋದ್ಯಮದಲ್ಲಿ ಸ್ಕಂದಗಿರಿಯು ಮುಕುಟ ಮಣಿ ಎನಿಸಿತ್ತು.

ಆದರೆ ಕಳೆದ ಒಂದೂವರೆ ತಿಂಗಳಿನಿಂದ ಸ್ಕಂದಗಿರಿಯ ಚಾರಣ ಬಂದ್ ಆಗಿದೆ. ಚಾರಣಿಗರು ಸ್ಕಂದಗಿರಿಗೆ ಪ್ರವೇಶ ಯಾವಾಗ ದೊರೆಯುತ್ತದೆ ಎನ್ನುವ ಕುತೂಹಲದಲ್ಲಿ ಇದ್ದಾರೆ.

**ಶೀಘ್ರದಲ್ಲಿಯೇ ಪ್ರವೇಶಕ್ಕೆ ಅವಕಾಶ**

ಈ ಹಿಂದಿನಿಂದಲೂ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಸ್ಕಂದಗಿರಿಯ ನಿರ್ವಹಣೆಯ ಹೊಣೆ ಹೊತ್ತಿತ್ತು. ಟಿಕೆಟ್ ಬುಕ್ಕಿಂಗ್‌ನಲ್ಲಿ ಅಕ್ರಮ ನಡೆಯುತ್ತಿವೆ. ಕಾಯ್ದಿರಿಸದಿದ್ದರೂ ಅಕ್ರಮವಾಗಿ ಪ್ರವೇಶ ನೀಡಲಾಗುತ್ತಿದೆ. ವೆಬ್‌ಸೈಟ್ ನಿರ್ವಾಹಕರು ನಕಲಿ ಟಿಕೆಟ್ ನೀಡುತ್ತಿದ್ದಾರೆ. ಚಾರಣ ಸಂಸ್ಥೆಗಳು ಅವ್ಯವಹಾರದಲ್ಲಿ ಶಾಮೀಲಾಗಿವೆ- ಎನ್ನುವ ಗುರುತರ


☛ ಉದಯವಾಹಿನಿ ಚಿತ್ರ

ಆರೋಪಗಳ ಹಿನ್ನೆಲೆಯಲ್ಲಿ ಅರಣ್ಯ ಸಚಿವರು ತನಿಖೆಗೆ ಆದೇಶಿಸಿದ್ದರು.

ಈ ಬಗ್ಗೆ ತನಿಖೆ ನಡೆಸುವಂತೆ ಮುಖ್ಯ ಕಾರ್ಯದರ್ಶಿಗೆ ಅರಣ್ಯ ಸಚಿವರು ಸೂಚಿಸಿದ್ದರು. ಆರೋಪಗಳ ಹಿನ್ನೆಲೆಯಲ್ಲಿ ಸ್ಕಂದಗಿರಿಯಲ್ಲಿ ಕೆಲಸ ಮಾಡುತ್ತಿದ್ದ ಮೂವರು ಸಿಬ್ಬಂದಿಯನ್ನು ಕೆಲಸದಿಂದ ಕೈ ಬಿಡಲಾಯಿತು. ತನಿಖೆ ನಡೆಸಿ ವರದಿ ನೀಡುವಂತೆ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಐವರು ಅಧಿಕಾರಿಗಳ ಸಮಿತಿ ಸಹ ರಚಿಸಿದ್ದರು. ಆ ಸಮಿತಿ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಸಹ ಕಲೆ ಹಾಕಿತ್ತು. ಈ ಎಲ್ಲಾ ಬೆಳವಣಿಗೆಗಳ ನಡುವೆ ಸ್ಕಂದಗಿರಿ ಸೇರಿದಂತೆ ರಾಜ್ಯದ ಪ್ರಸಿದ್ಧ ಚಾರಣ ಸ್ಥಳಗಳ ಟಿಕೆಟ್ ಬುಕ್ಕಿಂಗ್ ವಿಚಾರದಲ್ಲಿ ಅಕ್ರಮದ ವಾಸನೆಗಳು ಅಡರಿದ ಕಾರಣ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯು ಈ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆಯ ಜವಾಬ್ದಾರಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸಿತು.

ಮಂಡಳಿ ಚಾರಣ ತಾಣಗಳ ಟಿಕೆಟ್ ಬುಕ್ಕಿಂಗ್ ಅನ್ನು ಜು.31ಕ್ಕೆ ಸ್ಥಗಿತಗೊಳಿಸಿದೆ. ಆಗಸ್ಟ್‌ನಿಂದ ಅರಣ್ಯ ಇಲಾಖೆಯ ಐಸಿಟಿ ಕಚೇರಿಯ ಮೂಲಕ ಆನ್‌ಲೈನ್ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆ ನಿರ್ಮಿಸಿ ತಾವೇ ಆನ್‌ಲೈನ್ ಟಿಕೆಟ್ ಬುಕ್ಕಿಂಗ್ ನಿರ್ವಹಣೆ ಮಾಡಲು ಕ್ರಮವಹಿಸುವಂತೆ ಮಂಡಳಿ ತಿಳಿಸಿತ್ತು. ಈ ಸಂಬಂಧ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ವಿವಿಧ ಜಿಲ್ಲೆಗಳ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಪತ್ರ ಬರೆದಿದ್ದರು.

**ಪರೀಕ್ಷಾರ್ಥ ಕೆಲಸ ಆಗಬೇಕು**

ಆನ್‌ಲೈನ್ ಟಿಕೆಟ್ ಬುಕ್ಕಿಂಗ್‌ಗೆ ವೆಬ್‌ಸೈಟ್ ಅಭಿವೃದ್ಧಿ ಕೆಲಸ ಬೆಂಗಳೂರಿನ ಅರಣ್ಯ ಭವನದಲ್ಲಿ ನಡೆಯುತ್ತಿದೆ. ಶುಲ್ಕ ನಿಗದಿ ಹೊಣೆಯನ್ನೂ ಇಲಾಖೆಗೆ ವಹಿಸಲಾಗಿದೆ. ವೆಬ್‌ಸೈಟ್ ಸಿದ್ಧವಾದ ನಂತರವೇ ಸ್ಕಂದಗಿರಿ ಸೇರಿದಂತೆ ಉಳಿದ ಚಾರಣ ಪಥಗಳ ಪ್ರವೇಶಕ್ಕೆ ಅವಕಾಶ ನೀಡಲಾಗುತ್ತದೆ. ವೆಬ್‌ಸೈಟ್ ರೂಪಿಸಿದ ನಂತರ ಪರೀಕ್ಷಾರ್ಥ ಕೆಲಸ ಆಗಬೇಕು ಎಂದು ಅರಣ್ಯ ಇಲಾಖೆ ತಿಳಿಸಿತ್ತು.

> ಸದರಿ ಚಾರಣ ಪಥಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಕೃತಿ ಮಾರ್ಗದರ್ಶಕರು ಹಾಗೂ ಚಾರಣ ಉಸ್ತುವಾರಿಗಳಿಗೆ ಆ.1ರಿಂದ ಪ್ರತಿ ತಿಂಗಳು ಮಾರ್ಗದರ್ಶಕರ ಶುಲ್ಕ ಮತ್ತು ಚಾರಣ ಉಸ್ತುವಾರಿ ಶುಲ್ಕವನ್ನು ತಾವೇ ಪಾವತಿಸುವಂತೆ ಕ್ರಮವಹಿಸಬೇಕು. ತರಬೇತಿಗಳು ಅವಶ್ಯವಿದ್ದಲ್ಲಿ ಮಂಡಳಿಯಿಂದ ನಡೆಸಿಕೊಡಲಾಗುವುದು ಎಂದು ಪತ್ರದಲ್ಲಿ ತಿಳಿಸಿದ್ದರು.


---

# ಅಂಗವಿಕಲರಿಗೆ ಸರ್ಕಾರ ಮತ್ತು ಸ್ವಯಂ ಸೇವಾ ಸಂಘಗಳಿಂದ ಸಿಗುವ ಸೌಲಭ್ಯಗಳು ಸದುಪಯೋಗವಾಗಬೇಕು: ಶ್ರೀನಿವಾಸ್

• **ಉದಯವಾಹಿನಿ, ಕೋಲಾರ**

ಸಮಾಜದಲ್ಲಿ ಅಂಗವಿಕಲರಿಗೆ ಹಾಗೂ ವಿಕಲಚೇತನರಿಗೆ ಎಪಿಡಿ ಬೆಂಗಳೂರು ಮತ್ತು ಫೆವಾರ್ಡ್ ಕೋಲಾರ ಜಿಲ್ಲಾ ಒಕ್ಕೂಟದಿಂದ ಅವಶ್ಯಕ ಮಾಹಿತಿ ಮತ್ತು ಸೌಲಭ್ಯಗಳನ್ನು ಒದಗಿಸಲು ಸಿದ್ಧವಿದ್ದು ಇದರ ಸದುಪಯೋಗವನ್ನು ಪ್ರತಿಯೊಬ್ಬರಿಗೂ ಸಿಗುವಂತಾಗಬೇಕು ಎಂದು ಎಪಿಡಿ ಸಂಸ್ಥೆಯ ರಾಜ್ಯದ ವಲಯ ವ್ಯವಸ್ಥಾಪಕ ಶ್ರೀನಿವಾಸ್ ತಿಳಿಸಿದರು.

ನಗರದ ವಿದ್ಯಾಲಯ ಸಂಹೆ ಸಭಾಂಗಣದಲ್ಲಿ ಎಪಿಡಿ ಸಂಸ್ಥೆ ಬೆಂಗಳೂರು ಹಾಗೂ ಫೆವಾರ್ಡ್ ಜಿಲ್ಲಾ ಒಕ್ಕೂಟದಿಂದ ಅಂಗವಿಕಲರ ಸ್ವಯಂ ಸೇವಾ ಸಂಸ್ಥೆಗಳ ಸದಸ್ಯರಿಗೆ ಒಂದು ದಿನದ ಕಾರ್ಯಾಗಾರದಲ್ಲಿ ಮಾಹಿತಿ ನೀಡಿ ಮಾತನಾಡಿದ ಅವರು ಈ ಸಂಸ್ಥೆಗಳ ಜೊತೆಯಲ್ಲಿ ಸರ್ಕಾರಿ, ಅರೆಸರ್ಕಾರಿ ಹಾಗೂ



☛ ಉದಯವಾಹಿನಿ ಚಿತ್ರ

**ಸಿಗಬೇಕಾದ ಸೌಲಭ್ಯಗಳ ಬಗ್ಗೆ ಚರ್ಚೆ**


ಸಿಎಸ್‌ಆರ್ ಅನುದಾನದ ಮೂಲಕ ಅಂಗವಿಕಲರಿಗೆ ಹಾಗೂ ವಿಕಲಚೇತನರಿಗೆ ಸೌಲಭ್ಯಗಳನ್ನು ಒದಗಿಸಲು ಸಂಬಂಧಿಸಿದವರನ್ನು ಮುಂದಿನ ದಿನಗಳಲ್ಲಿ ಒತ್ತಾಯಿಸಬೇಕಾಗುತ್ತದೆ ಎಂದು ಕಾರ್ಯಾಗಾರದಲ್ಲಿ ಚರ್ಚೆ ನಡೆಸಿದರು.

ಅಂಗವಿಕಲರು ಮತ್ತು ವಿಕಲಚೇತನರಿಗೆ ಅನುಕೂಲವಾಗುವಂತೆ ಹೋಟೆಲ್, ಶಾಲಾ ಕಾಲೇಜುಗಳು, ರೈಲ್ವೆ, ಬಸ್ ನಿಲ್ದಾಣ, ಆಸ್ಪತ್ರೆ, ಪಾರ್ಕ್, ಶೌಚಾಲಯ ಸೇರಿದಂತೆ ಇತರೆ ಕಡೆಗಳಲ್ಲಿ ಅವರಿಗೆ ಸಿಗಬೇಕಾದ ಸೌಲಭ್ಯಗಳ ಬಗ್ಗೆ ಚರ್ಚೆ ನಡೆಸಲಾಯಿತು ಸಮಾಜದ ಭಾಗವಾಗಿ ಗುರುಸಿಕೊಳ್ಳುವ ಮೂಲಕ ಮುಖ್ಯವಾಹಿನಿಗೆ ಬರಲು ಬೇಕಾದ ಸೌಲಭ್ಯಗಳನ್ನು ನೀಡುವಂತೆ ಒತ್ತಾಯಿಸಬೇಕು ಇವರ ಮಧ್ಯೆ ಕೆಲಸ ಮಾಡಲು ಸ್ವಯಂ ಸೇವಕರನ್ನು ಗುರುತಿಸಲು ಚರ್ಚಿಸಲಾಯಿತು.

ಕಾರ್ಯಾಗಾರದಲ್ಲಿ ಫೆವಾರ್ಡ್ ಕರ್ನಾಟಕ ರಾಜ್ಯ ಸಂಪನ್ಮೂಲಗಳ ಮ್ಯಾಫಿಂಗ್ ಸಂಯೋಜಕರಾದ ರಿನೀಟಾ, ಜಿಲ್ಲಾ ಒಕ್ಕೂಟದ ಅಧ್ಯಕ್ಷ ಫೋಕಸ್ ಅ.ನಾ ಹರೀಶ್, ಕಾರ್ಯದರ್ಶಿ ರತ್ನ ನಾಗರಾಜ್, ಎಪಿಡಿ ಸಂಸ್ಥೆಯ ಜಿಲ್ಲಾ ಸಂಯೋಜಕಿ ಗಿರಿಜಾ, ವಿವಿಧ ಸೇವಾ ಸಂಸ್ಥೆಗಳ ಮುಖ್ಯಸ್ಥರಾದ ಮಾಲೂರು ಸುಬ್ರಮಣಿ ಮುಳಬಾಗಿಲು ಕೃಷ್ಣಮೂರ್ತಿ, ಮಂಜುಳಾರೆಡ್ಡಿ, ಮುನಿರಾಜು, ಮಾಲೂರು ಸುಬ್ರಮಣಿ, ಕೆಜಿಎಫ್ ಸುಬ್ರಮಣಿ ಮುಂತಾದವರು ಇದ್ದರು.

---

# ಪಕ್ಷಾತೀತವಾದ ಹೋರಾಟಕ್ಕೆ ಒಕ್ಕೊರಲ ಕರೆ


☛ ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮಡಿಕೇರಿ**

ಕೊಡಗು ಜಿಲ್ಲೆಯ ರೈತರು, ಬೆಳೆಗಾರರನ್ನು ಕಾಡುತ್ತಿರುವ ಜ್ವಲಂತ ಸಮಸ್ಯೆಗಳಾದ 'ಸಿ' ಮತ್ತು 'ಡಿ' ಭೂಮಿ ಸಮಸ್ಯೆ, ಕಸ್ತೂರಿ ರಂಗನ್ ವರದಿ, ವನ್ಯಜೀವಿ ಉತ್ಪನ್ನಗಳನ್ನು ವಾಪಸ್ ಕೊಡುವುದು, ವನ್ಯಜೀವಿ- ಮಾನವ ಸಂಘರ್ಷ ಸೇರಿದಂತೆ ಹಲವು ಸಮಸ್ಯೆಗಳ ವಿರುದ್ಧ ಪಕ್ಷಾತೀತವಾಗಿ, ರಾಜಕೀಯರಹಿತವಾಗಿ ಹೋರಾಡಬೇಕು ಎಂಬ ಒಕ್ಕೊರಲ ಅಭಿಪ್ರಾಯ ಇಲ್ಲಿ ಭಾನುವಾರ ನಡೆದ ಸಂವಾದ ಕಾರ್ಯಕ್ರಮದಲ್ಲಿ ವ್ಯಕ್ತವಾಯಿತು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಪತ್ರಿಕಾ ಭವನದಲ್ಲಿ ಏರ್ಪಡಿಸಿದ್ದ ಸಂವಾದದಲ್ಲಿ ಶಾಸಕರಾದ ಎ.ಎಸ್.ಪೊನ್ನಣ್ಣ, ಡಾ.ಮಂತರ್‌ಗೌಡ, ವಿಧಾನಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಧರ್ಮಜಾ ಉತ್ತಪ್ಪ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ರವಿ ಕಾಳಪ್ಪ, ರೈತ ಹೋರಾಟಗಾರರಾದ ಮನುಸೋಮಯ್ಯ, ಕೆ.ಪಿ.ಸುರೇಶ್, ಮಿಥುನ್, ಪರಿಸರವಾದಿ ತಮ್ಮು ಪೂವಯ್ಯ ಸೇರಿದಂತೆ ಹಲವು ಮಂದಿ ಮುಖಂಡರು ಭಾಗವಹಿಸಿದ್ದರು. ಈ ವೇಳೆ ಎಲ್ಲರೂ ಪಕ್ಷಾತೀತವಾದ ಒಗ್ಗಟ್ಟಿನ ಹೋರಾಟಕ್ಕೆ ಕರೆ ನೀಡಿದರು.

ಎಲ್ಲಾ ಪಕ್ಷದವರನ್ನು, ರೈತ ಹೋರಾಟಗಾರರನ್ನು ಒಳಗೊಂಡ ನಿಯೋಗವು ಶಾಸಕ ಎ.ಎಸ್.ಪೊನ್ನಣ್ಣ ಅವರ ನೇತೃತ್ವದಲ್ಲಿ ಸದ್ಯದಲ್ಲೇ ಮುಖ್ಯಮಂತ್ರಿಯನ್ನು ಭೇಟಿ ಮಾಡಬೇಕು' ಎಂದು ಶಾಸಕ ಡಾ.ಮಂತರ್‌ಗೌಡ ತಿಳಿಸಿದರು. ಸೆ. 19ರಂದು ಅರಣ್ಯ ಸಚಿವರು ಕಸ್ತೂರಿ ರಂಗನ್ ವರದಿ ಸಂಬಂಧ ಕರೆದಿರುವ ಸಭೆಗೆ ಇಲ್ಲಿನ ಅಪ್ಪಚ್ಚುರಂಜನ್ ನೇತೃತ್ವದ ಕಸ್ತೂರಿರಂಗನ್ ವಿರೋಧಿ ಸಮಿತಿಯೂ ಭಾಗವಹಿಸಿ ತಮ್ಮ ಅಭಿಪ್ರಾಯ ತಿಳಿಸಲಿ' ಎಂದು ಶಾಸಕ ಎ.ಎಸ್.ಪೊನ್ನಣ್ಣ ಸಲಹೆ ನೀಡಿದರು.

---

# ಉದ್ಯಾನ ಅದ್ವಾನ: ವಿಹಾರಿಗಳು ಹೈರಾಣ

• **ಉದಯವಾಹಿನಿ, ತಿಪಟೂರು**

ಸಾರ್ವಜನಿಕರ ವಾಯು ವಿಹಾರಕ್ಕೆ, ಮಕ್ಕಳ ಆಟಕ್ಕೆ, ವೃದ್ಧರ ವಿಶ್ರಾಂತಿಗೆ ಉಪಯೋಗವಾಗಬೇಕಿದ್ದ ನಗರದ ಅಮಾನಿಕೆರೆಯಲ್ಲಿರುವ ಉದ್ಯಾನ ಕುಡುಕರ ಅಡ್ಡವಾಗಿ, ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿದೆ.

ನಗರದಲ್ಲಿರುವ 111 ಎಕರೆಯ ಅಮಾನಿಕೆರೆ ಪ್ರಾಂಗಣದಲ್ಲಿ 3ರಿಂದ 4 ಎಕರೆ ವ್ಯಾಪ್ತಿಯಲ್ಲಿ ಕಳೆದ ಬಿಜೆಪಿ ಸರ್ಕಾರದ ಅವಧಿಯಲ್ಲಿ 2 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಮಾಡಲಾಗಿತ್ತು. ಆದರೆ ಎರಡು ವರ್ಷಗಳ ಅಂತರದಲ್ಲಿಯೇ ಉದ್ಯಾನದ ಸೌಂದರ್ಯ ನಶಿಸಿದೆ.

ಅಮಾನಿಕೆರೆಯಲ್ಲಿರುವ ಪಾರ್ಕ್ ನಗರದ ಮಧ್ಯ ಭಾಗದಲ್ಲಿದ್ದು, ಎಂಟು ವಾರ್ಡ್‌ಗಳಿಗೆ ಸಂಪರ್ಕ ಹೊಂದಿದೆ. ಇಲ್ಲಿನ ಸುತ್ತಮುತ್ತ ಯಾವುದೇ ಮತ್ತೊಂದು ಪಾರ್ಕ್ ಇಲ್ಲದಿರುವುದರಿಂದ ಸಾಕಷ್ಟು ಜನರು ವಾಕಿಂಗ್‌ಗೆ ಬರುತ್ತಾರೆ. ಉದ್ಯಾನದ ಮುಂಬಾಗದಲ್ಲಿ ಎಪಿಎಂಸಿ ಮಾರುಕಟ್ಟೆಯ ವ್ಯಾಪಾರ ಪ್ರಾಂಗಣವಿದ್ದು, ರೈತರು ತರಕಾರಿ ಹರಾಜಿಗೆ ಕೊಟ್ಟ ನಂತರ ಹಣ ಪಡೆಯುವವರೆಗೆ ಪಾರ್ಕ್‌ಗೆ ಬಂದು ಹೋಗುತ್ತಾರೆ. ಮತ್ತೊಂದೆಡೆ ಎಆರ್‌ಟಿಒ ಕಚೇರಿ ಸಹ ಇದ್ದು, ಸಾರ್ವಜನಿಕರು ಪ್ರತಿನಿತ್ಯ


☛ ಉದಯವಾಹಿನಿ ಚಿತ್ರ

ಕಚೇರಿಗೆ ಬಂದು ಕೆಲಸ ವಿಳಂಬವಾದಾಗ ವಿಶ್ರಾಂತಿಗಾಗಿ ಈ ಪಾರ್ಕ್ ಅನ್ನು ಅವಲಂಬಿಸುತ್ತಾರೆ.

ಪ್ರತಿನಿತ್ಯ ಈ ಉದ್ಯಾನದಲ್ಲಿ ಬೆಳಿಗ್ಗೆ ಹಾಗೂ ಸಂಜೆ ನೂರಾರು ಸಾರ್ವಜನಿಕರು, ಮಹಿಳೆಯರು, ವೃದ್ಧರು, ಮಕ್ಕಳು, ವ್ಯಾಯಾಮ, ವಾಯುವಿಹಾರ ಹಾಗೂ ಯೋಗಾಸನಕ್ಕೆ ಬರುತ್ತಾರೆ. ಆದರೆ ಈ ಉದ್ಯಾನದಲ್ಲಿ ನಿರ್ಮಾಣವಾಗಿರುವ ನಡಿಗೆ ಪಥದಲ್ಲಿ ಹುಲ್ಲು, ಗಿಡ ಗಂಟಿ, ಮುಳ್ಳಿನ ಗಿಡಗಳು ಬೆಳೆದು ಜನರು ನೆಡೆದಾಡುವಾಗ ಕಾಲಿಗೆ ಸುತ್ತಿಕೊಂಡು ಬೀಳುವ ಸಾಧ್ಯತೆಯೂ ಇದೆ. ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ಕೆರೆಗೆ ನಿರ್ಮಿಸಿರುವ ತಂತಿಬೇಲಿ ಅಲ್ಲಲ್ಲಿಯೇ ತುಂಡಾಗಿದ್ದು, ಪ್ರಾಣಿಗಳು ನುಸುಳುವ ಜಾಗವಾಗಿದೆ.

---

# ಪಂಚಾಯಿತಿ ಸಹಕಾರವೂ ಇಲ್ಲ: ಪುರಸಭೆ ನೆರವೂ ಇಲ್ಲ

• **ಉದಯವಾಹಿನಿ, ಮಾಲೂರು**

ಪಟ್ಟಣದ ಪ್ರತಿಷ್ಠಿತ ಬಡಾವಣೆ (ವೈಟ್ ಗಾರ್ಡನ್) ನಾಗರಿಕರು ಸುಮಾರು 11 ವರ್ಷಗಳಿಂದ ಮೂಲ ಸೌಲಭ್ಯದಿಂದ ವಂಚಿತರಾಗಿದ್ದಾರೆ. ಈ ಬಡಾವಣೆ ಜನರಿಗೆ ಇತ್ತ ಪಂಚಾಯಿತಿ ಸಹಕಾರವೂ ಇಲ್ಲ, ಅತ್ತ ಪುರಸಭೆ ನೆರವು ಇಲ್ಲದೇ ತ್ರಿಶಂಕು ಪರಿಸ್ಥಿತಿ ಎದುರಿಸುಂತಾಗಿದೆ.

ಪಟ್ಟಣದ 22 ,23 ಮತ್ತು 24ನೇ ವಾರ್ಡ್‌ಗಳಲ್ಲಿ ಈ ಬಡಾವಣೆ ಹಂಚಿ ಹೋಗಿದೆ. ಪಟ್ಟಣದಲ್ಲಿ 2013ರಲ್ಲಿ ನೂತನವಾಗಿ ಆರಂಭಿಸಿದ ವೈಟ್ ಗಾರ್ಡನ್ ಬಡಾವಣೆಯಲ್ಲಿ ಮಾಲೂರು ಪಟ್ಟಣಕ್ಕೆ ಸಮೀಪದ ಗ್ರಾಮಾಂತರದ ಪ್ರದೇಶದ ಕೆಲ ಕುಟುಂಬಗಳು ಬಂದು ಇಲ್ಲಿ ನೆಲೆಸಿವೆ.

ಆದರೆ, ವೈಟ್ ಗಾರ್ಡನ್ ತಾಲ್ಲೂಕಿನ ಅರಳೇರಿ ಗ್ರಾಮ ಪಂಚಾಯಿತಿಗೆ ಸೇರಿದೆ. ಅಭಿವೃದ್ಧಿ ಕಾಣದೆ ನಾಗರಿಕರು ಮೂಲ ಸೌಲಭ್ಯ ಕೊರತೆಯಿಂದ ತೊಂದರೆ ಪಡುವಂತಾಗಿದೆ. ಬಡಾವಣೆ ನಾಗರಿಕರು ಮನೆ ತೆರಿಗೆಯನ್ನು ಅರಳೇರಿ ಪಂಚಾಯಿತಿಗೆ ಸಂದಾಯ ಮಾಡುತ್ತಿದ್ದಾರೆ.


☛ ಉದಯವಾಹಿನಿ ಚಿತ್ರ

**ಕುಡಿಯುವ ನೀರಿನ ಸಮಸ್ಯೆ**

ಬಡಾವಣೆ ಜನರು ಕುಡಿಯುವ ನೀರಿನ ಕೊರತೆಯಿಂದ ತೊಂದರೆ ಪಡುತ್ತಿದ್ದಾರೆ. ಕೆಲವರು ಸ್ವಂತ ಖರ್ಚಿನಲ್ಲಿ ಕೊಳವೆ ಬಾವಿ ಕೊರೆಯಿಸಿಕೊಂಡಿದ್ದಾರೆ. ಉಳಿದಂತೆ ಮಧ್ಯಮ ವರ್ಗದ ಕುಟುಂಬಗಳು ನೀರಿನ ಟ್ಯಾಂಕರ್ ಮೇಲೆ ಅವಲಂಭಿತರಾಗಿದ್ದಾರೆ.

**ಬೀದಿದೀಪ ಕೊರತೆ**

ವೈಟ್ ಗಾರ್ಡನ್ ಬಡಾವಣೆಯಲ್ಲಿ ಸುಮಾರು 600ರಿಂದ 700 ಮನೆಗಳು ಇವೆ. ಯಾವುದೇ ರಸ್ತೆಗಳಿಗೆ ಬೀದಿದೀಪ ಇಲ್ಲ. ಹಾಕಿರುವ ಕೆಲವು ಬೀದಿ ದೀಪಗಳು ಹುರಿಯುತ್ತಿಲ್ಲ. ಒಂಟಿ ಮಹಿಳೆಯರ ಸರ ಕಳವು, ಮನೆಗಳ ಮುಂದೆ ನಿಲ್ಲಿಸುವ ದ್ವಿಚಕ್ರ ವಾಹನ ಕಳವು, ಜಾನುವಾರು ಕಳವು ಸಾಮಾನ್ಯವಾಗಿದೆ.

ಆದರೆ, ಪಂಚಾಯಿತಿ ವತಿಯಿಂದ ಅಭಿವೃದ್ಧಿ ಮಾತ್ರ ಶೂನ್ಯ.

ಟ್ಯಾಂಕರ್ ನೀರು ಖರೀದಿಸಲು ಸಾಧ್ಯವಿಲ್ಲದವರು ಮಾರಿಕಾಂಬ ಸಮಿತಿ ವತಿಯಿಂದ ನಿರ್ಮಾಣ ಮಾಡಿರುವ ಶುದ್ಧ ಕುಡಿಯುವ ನೀರಿನ ಘಟಕಗಳಿಂದ ನೀರು ತರುತ್ತಾರೆ. ಇನ್ನು ಕೆಲ ವರು ಕೃಷಿ ಭೂಮಿಗೆ ತೆರಳಿ ಕೊಳವೆ ಬಾವಿಗಳಿಂದ ನೀರು ತಂದು ಬಳಸುವ ಪರಿಸ್ಥಿತಿ ಇದೆ.

---

# ಸಿದ್ದರಾಮಯ್ಯ, ಎಚ್‌ಡಿಕೆ ತಮ್ಮ ಆಸ್ತಿ ಬದಲಾಯಿಸಿಕೊಳ್ಳಲಿ: ಬೈರತಿ ಸುರೇಶ್

• **ಉದಯವಾಹಿನಿ, ಕೋಲಾರ**

ಸಿದ್ದರಾಮಯ್ಯ ಹಾಗೂ ಎಚ್.ಡಿ.ಕುಮಾರಸ್ವಾಮಿ ತಮ್ಮ ಆಸ್ತಿಯನ್ನು ಪರಸ್ಪರ ಬದಲಾಯಿಸಿಕೊಳ್ಳಲಿ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ಸವಾಲು ಹಾಕಿದರು. ಸಿದ್ದರಾಮಯ್ಯ ದಲಿತರ ನಿವೇಶನ ಕಬಳಿಕೆ ಮಾಡಿದ್ದಾರೆ ಎಂಬ ಕುಮಾರಸ್ವಾಮಿ ಹೇಳಿಕೆಗೆ ನಗರದಲ್ಲಿ ಭಾನುವಾರ ತಿರುಗೇಟು ನೀಡಿದ ಅವರು, ಇಬ್ಬರ ಆಸ್ತಿಯನ್ನು ಹೋಲಿಕೆ ಮಾಡೋಣ.

ಸಿದ್ದರಾಮಯ್ಯ ತಮ್ಮ ಎಲ್ಲಾ ಆಸ್ತಿಯನ್ನು ಕುಮಾರಸ್ವಾಮಿ ಅವರಿಗೆ ನೀಡಲಿ. ಕುಮಾರಸ್ವಾಮಿ ತಮ್ಮ ಎಲ್ಲಾ ಆಸ್ತಿಯನ್ನು ಸಿದ್ದರಾಮಯ್ಯ ಅವರಿಗೆ ನೀಡಲಿ. ಆಗ ಎಲ್ಲವೂ ಸರಿ ಹೋಗುತ್ತದೆ' ಎಂದರು. ಸಿದ್ದಾಮರಾಮಯ್ಯ 1982ರಿಂದ ರಾಜಕಾರಣದಲ್ಲಿದ್ದಾರೆ. ಕುಮಾರಸ್ವಾಮಿ 1998ರಲ್ಲಿ ರಾಜಕೀಯಕ್ಕೆ ಬಂದರು. ಯಾರು ಎಷ್ಟು ಆಸ್ತಿ ಮಾಡಿಕೊಂಡಿದ್ದಾರೆ ಎಂಬುದು ಎಲ್ಲರಿಗೂ ಗೊತ್ತಿದೆ. ಸಿದ್ದರಾಮಯ್ಯ ಅವರನ್ನು ನಾನು ಬಹಳ ಹತ್ತಿರದಿಂದ ನೋಡಿದ್ದೇನೆ. ಇಡೀ ದೇಶದಲ್ಲಿ ಅತ್ಯಂತ ಪ್ರಾಮಾಣಿಕ ಮುಖ್ಯಮಂತ್ರಿ ಇದ್ದರೆ ಅದು ಸಿದ್ದರಾಮಯ್ಯ ಮಾತ್ರ. ಅವರ ಬಗ್ಗೆ ಮಾತನಾಡಿದವರನ್ನು ಆ ದೇವರೇ ನೋಡಿಕೊಳ್ಳುತ್ತಾನೆ' ಎಂದು ನುಡಿದರು. ಬಿಜೆಪಿ ಶಾಸಕ ಮುನಿರತ್ನ ಬಂಧನ ವಿಚಾರವಾಗಿ ಪ್ರತಿಕ್ರಿಯಿಸಿ, ಕಾಂಗ್ರೆಸ್‌ನಿಂದ ಬಿಜೆಪಿಗೆ ಹೋಗಿದ್ದಕ್ಕೆ ಟಾರ್ಗೆಟ್ ಮಾಡುತ್ತಿದ್ದಾರೆ ಎನ್ನುತ್ತಿದ್ದಾರೆ. ಒಕ್ಕಲಿಗರು, ದಲಿತರನ್ನು ಅವಾಚ್ಯ ಶಬ್ದಗಳಿಂದ ಬೈಯ್ಯಲು, ಹಣಕ್ಕೆ ಬೇಡಿಕೆ ಇಡಲು ಕಾಂಗ್ರೆಸ್ ಪಕ್ಷ ಹೇಳಿತ್ತೇ? ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹೇಳಿದ್ದರೇ? ಜಾತಿ, ಜನಾಂಗದ ಮೇಲೆ ವೈಯಕ್ತಿಕವಾಗಿ ನಿಂದನೆ ಮಾಡುವುದು ಪ್ರಜಾಪ್ರಭುತ್ವಕ್ಕೆ ಮಾರಕ.

**ಜಾತಿನಿಂದನೆ ಪ್ರಜಾಪ್ರಭುತ್ವಕ್ಕೆ ಮಾರಕ**



> ಮಾಡಿದ್ದುಣ್ಣೋ ಮಾರಾಯ ಎಂಬಂತೆ ತಪ್ಪು ಮಾಡಿದವರು ಅದರ ಫಲ ಅನುಭವಿಸಬೇಕು. ಅಸಹ್ಯಕರವಾಗಿ ಮಾತನಾಡಿರುವ ಆಡಿಯೊ ಇದೆ. ಮುನಿರತ್ನ ಮಾತನಾಡಿದ್ದು ನಿಜವೋ ಅಲ್ಲವೋ ಎಂಬುದು ವಿಧಿ ವಿಜ್ಞಾನ ಪ್ರಯೋಗಾಲಯದಲ್ಲಿ ದೃಢವಾಗಲಿದೆ, ತನಿಖೆಯಿಂದ ಗೊತ್ತಾಗುತ್ತದೆ
> -ಬೈರತಿ ಸುರೇಶ್, ಸಚಿವ

---

# ಉಪ ಚುನಾವಣೆ: ನೂರಕ್ಕೆ ನೂರರಷ್ಟು ನನಗೇ ಟಿಕೆಟ್

• **ಉದಯವಾಹಿನಿ, ರಾಮನಗರ**

ಚನ್ನಪಟ್ಟಣ ಉಪ ಚುನಾವಣೆಯಲ್ಲಿ ನೂರಕ್ಕೆ ನೂರರಷ್ಟು ನನಗೇ ಟಿಕೆಟ್ ಸಿಗಲಿದೆ. ಚುನಾವಣೆ ಹಿನ್ನೆಲೆಯಲ್ಲಿ ಈಗಾಗಲೇ ಕ್ಷೇತ್ರ ಭೇಟಿ ಆರಂಭಿಸಿದ್ದೇನೆ. ಟಿಕೆಟ್‌ಗೆ ಸಂಬಂಧಿಸಿದಂತೆ ಬಿಜೆಪಿ ಮತ್ತು ಜೆಡಿಎಸ್ ಮಧ್ಯೆ ಗೊಂದಲವಿಲ್ಲ. ಚುನಾವಣೆ ದಿನಾಂಕ ಘೋಷಣೆಯಾದ ಬಳಿಕ ವದಂತಿಗಳಿಗೆ ಉತ್ತರ ಸಿಗಲಿದೆ' ಎಂದು ಟಿಕೆಟ್ ಆಕಾಂಕ್ಷಿಯಾಗಿರುವ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಹೇಳಿದರು.



ನಗರದ ಜಿಲ್ಲಾ ಪಂಚಾಯಿತಿ ಭವನದಲ್ಲಿ ಸಂಸದ ಡಾ. ಸಿ.ಎನ್. ಮಂಜುನಾಥ್ ಅವರ ಕಚೇರಿ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸದ ಡಾ. ಸಿ.ಎನ್. ಮಂಜುನಾಥ್ ದಂಪತಿ ಸಹ ನನ್ನ ಪರವಾಗಿದ್ದು, ಅವರ ಆಶೀರ್ವಾದ ಸದಾ ಇರಲಿದೆ' ಎಂದರು. ಚುನಾವಣೆ ಹಿನ್ನೆಲೆಯಲ್ಲಿ ಈಗಾಗಲೇ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಮುಖರ ಸಭೆ ನಡೆಸಿ ಅಭಿಪ್ರಾಯ ಸಂಗ್ರಹಿಸುತ್ತಿದ್ದೇನೆ. ಮುಂದೆ ಹಳ್ಳಿಗಳಿಗೂ ಭೇಟಿ ನೀಡಿ, ಎನ್‌ಡಿಎ ಅಭ್ಯರ್ಥಿಯಾಗಿ ಬರುವ ನನಗೆ ಆಶೀರ್ವಾದ ಮಾಡಿ ಎಂದು ಕೇಳುತ್ತೇನೆ. ಕ್ಷೇತ್ರದಲ್ಲಿ ಕಾಂಗ್ರೆಸ್ ಆಪರೇಷನ್ ಹಸ್ತ ನಡೆಸಿದರೂ ಅದರ ಪರಿಣಾಮ ಉಪ ಚುನಾವಣೆ ಮೇಲೆ ಬೀರುವುದಿಲ್ಲ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

> ಲೋಕಸಭಾ ಚುನಾವಣೆ ಸಂದರ್ಭದಲ್ಲಿ ದುಡ್ಡು ಕೊಟ್ಟು ನಗರಸಭೆ ಸದಸ್ಯರು ಸೇರಿದಂತೆ ಕೆಲ ಮುಖಂಡರನ್ನು ಕಾಂಗ್ರೆಸ್‌ನವರು ಸೆಳೆದಿದ್ದರು. ಈಗ ಅವರೆಲ್ಲರೂ ಮಾನಸಿಕವಾಗಿ ನಮಗೆ ಬೆಂಬಲ ನೀಡುತ್ತಿದ್ದಾರೆ. ಕ್ಷೇತ್ರದಲ್ಲಿ ನಾನು ಮತ್ತು ನಿಖಿಲ್ ಪ್ರತ್ಯೇಕವಾಗಿ ಕಾರ್ಯಕರ್ತರೊಂದಿಗೆ ಸಭೆ ನಡೆಸುತ್ತಾ, ಪಕ್ಷ ಸಂಘಟನೆ ಮಾಡಿ ಚುನಾವಣೆಗೆ ಅಣಿಗೊಳಿಸುತ್ತಿದ್ದೇವೆ -ಸಿ.ಪಿ.ಯೋಗೇಶ್ವರ್

---

# ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆ

## • ದೇಹದ ಪ್ರತಿಯೊಂದು ಅಂಗಾಂಗದ ಬಗ್ಗೆಯೂ ವಿಶೇಷ ಅಧ್ಯಯನ ನಡೆಸಿರುವ ತಜ್ಞ ವೈದ್ಯರು ಇಲ್ಲದೆ ಪರದಾಟ

• **ಉದಯವಾಹಿನಿ ಚಿಕ್ಕಬಳ್ಳಾಪುರ**

ಜಿಲ್ಲೆಯಲ್ಲಿ ವಿವಿಧ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಬರೋಬ್ಬರಿ 17 ಮಂದಿ ತಜ್ಞ ವೈದ್ಯರು ಹುದ್ದೆಗಳು ಹಲವು ವರ್ಷಗಳಿಂದ ಖಾಲಿ ಇದ್ದು, ಹುದ್ದೆಗಳ ನೇಮಕಾತಿಗೆ ಸ್ವತಃ ಆರೋಗ್ಯ ಇಲಾಖೆ ಆಹ್ವಾನಿಸಿದರೂ ತಜ್ಞ ವೈದ್ಯರು ಮಾತ್ರ ಮುಂದೆ ಬರುತ್ತಿಲ್ಲ.

ಹೌದು, ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಗೊಂಡು ವೈದ್ಯಕೀಯ ಶಿಕ್ಷಣ ಕೋರ್ಸ್ ಗಳನ್ನು ಈಗ 4ನೇ ಬ್ಯಾಚ್ ಪಡೆದುಕೊಳ್ಳುತ್ತಿದೆ. ಆದರೆ ಇಂದಿಗೂ ವೈದ್ಯಕೀಯ ಕಾಲೇಜಿನಲ್ಲಿ ಕಾರ್ಯಾರಂಭ ಮಾಡದ ಕಾರಣ ಜಿಲ್ಲೆಯಲ್ಲಿ ತಜ್ಞ ವೈದ್ಯರ ಕೊರತೆ ಎದುರಾಗಿ ರೋಗಪೀಡಿತರಿಗೆ ಸಂಕಟ, ಸಂಕಷ್ಟ ಎದುರಾಗಿದೆ.

**ರೋಗಪೀಡಿತರಿಗೆ ಸಂಕಟ, ಸಂಕಷ್ಟ**

ವಿಶೇಷವಾಗಿ ಹೃದ್ರೋಗ ತಜ್ಞರು, ಹೃದಯ ತಜ್ಞರು, ಕಿವಿ. ಮೂಳೆ, ಗಂಟಲು, ಚರ್ಮ ಹೀಗೆ ದೇಹದ ಪ್ರತಿಯೊಂದು ಅಂಗಾಂಗದ ಬಗ್ಗೆಯು ವಿಶೇಷ ಅಧ್ಯಯನ ನಡೆಸಿರುರುವ ತಜ್ಞ ವೈದ್ಯರು ಇಲ್ಲದೇ ಚಿಕಿತ್ಸೆಗೆ ಬರುವ ರೋಗಿಗಳು ಪರದಾಡಬೇಕಿದ್ದು, ಜಿಲ್ಲೆಯ ಆರೋಗ್ಯ ಇಲಾಖೆ ಅಧಿಕಾರಿಗಳಯ ಹೇಳುವ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 17 ತಜ್ಞ ವೈದ್ಯರ ಕೊರತೆ ಇದೆ.

ಹೀಗಾಗಿ ಜಿಲ್ಲಾಸ್ಪತ್ರೆಯಿಂದ ಹಿಡಿದು ತಾಲ್ಲೂಕು ಮಟ್ಟದ ಸಾರ್ವಜನಿಕ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಕಾಲಕ್ಕೆ ರೋಗಿಗಳಿಗೆ ಚಿಕಿತ್ಸೆ ಕೊಡಲು ಅಥವ ಮಾರ್ಗದರ್ಶನ ಮಾಡಲು ತಜ್ಞರ ವೈದ್ಯರ ಕೊರತೆಯನ್ನು ಜಿಲ್ಲೆ ಬಹುವಾಗಿ ಎದುರುಸುತ್ತಿದೆ. ತಜ್ಞ ವೈದ್ಯರ ನೇಮಕಕ್ಕೆ ಜಿಲ್ಲಾ ಆರೋಗ್ಯ ಇಲಾಖೆ ಅರ್ಜಿ ಆಹ್ವಾನಿಸಿದರೂ, ನೇಮಕಾತಿಗೆಯಾರು ಮುಂದೆ ಬರುತ್ತಿಲ್ಲ ಎಂಬ ಮಾಹಿತಿಯನ್ನು ಆರೋಗ್ಯ ಇಲಾಖೆ ನೀಡುತ್ತಿದೆ.

ಜಿಲ್ಲೆಯಲ್ಲಿ ಹಲವು ದಶಕಗಳ ಬಳಿಕ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಗೊಂಡಿತು ಎನ್ನುವ ಸಮಾಧಾನ ಇದ್ದರೂ ಇಂದಿಗೂ ಜಿಲ್ಲೆಯ ಜನತೆ ಗಂಭೀರ ರೋಗ ಸಮಸ್ಯೆಗಳಿಗೆ ಬೆಂಗಳೂರು ಆಸ್ಪತ್ರೆಗಳನ್ನೆ ಅವಲಂಬಿಸಬೇಕಿರುವುದು ಎದ್ದು ಕಾಣುತ್ತಿದೆ.

ಮೆಡಿಕಲ್ ಕಾಲೇಜ್ ಉದ್ಘಾಟನೆಗೊಂಡು ಒಂದೂವರೆ ವರ್ಷ ಕಳೆಯುತ್ತಾ ಬಂದರೂ ಇನ್ನೂ ಅಲ್ಲಿ ವೈದ್ಯಕೀಯ ಆಸ್ಪತ್ರೆ ಕಾರ್ಯಾರಂಭ ಮಾಡದೇ ಇರುವುದು ಜಿಲ್ಲೆಯ ಪಾಲಿಗೆ ಮೆಡಿಕಲ್ ಕಾಲೇಜ್ ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬಂತಾಗಿದೆ.


☛ ಉದಯವಾಹಿನಿ ಚಿತ್ರ

**ಜಿಲ್ಲೆಯಲ್ಲಿ ಒಟ್ಟು 17 ತಜ್ಞ ವೈದ್ಯರ ಕೊರತೆ**

> ಜಿಲ್ಲೆಯಲ್ಲಿ 17 ತಜ್ಞ ವೈದ್ಯರ ಕೊರತೆ ಇರುವುದು ನಿಜಕ್ಕೂ ಕಳವಳಕಾರಿ ಸಂಗತಿ. ನಮ್ಮ ಸರ್ಕಾರ ಇದ್ದಾಗ ವೈದ್ಯರಿಗೆ ಗ್ರಾಮೀಣ ಸೇವೆಯನ್ನು ಕಡ್ಡಾಯ ಮಾಡಿತ್ತು. ಕಾಂಗ್ರೆಸ್ ಸರ್ಕಾರ ಬಂದ ಕೂಡಲೇ ಅದನ್ನು ರದ್ದುಗೊಳಿಸಿದ ಪರಿಣಾಮ ಇವತ್ತು ಗ್ರಾಮೀಣ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ ಹೆಚ್ಚಾಗಿದೆ. ಆರೋಗ್ಯ ಸೇವೆ ಅತ್ಯಂತ ತುರ್ತು ಸೇವೆಗಳಲ್ಲಿ ಒಂದು ವೈದ್ಯರ ಕೊರತೆ ಆಗದಂತೆ ಸರ್ಕಾರ ಎಚ್ಚರ ವಹಿಸಬೇಕು.
> -ಡಾ.ಕೆ.ಸುಧಾಕರ್, ಸಂಸದರು.

**ಆಸ್ಪತ್ರೆ ಆರಂಭಗೊಳದಿದ್ದಕ್ಕೆ ವೈದ್ಯರ ಸಮಸ್ಯೆ**

ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಇರುವುದಕ್ಕೆ ರಾಜ್ಯ ಸರ್ಕಾರ ಜಿಲ್ಲೆಯಲ್ಲಿ ಖಾಲಿ ಇರುವ ತಜ್ಞ ವೈದ್ಯರ ಭರ್ತಿಗೆ ಅವಕಾಶ ಕೊಡುತ್ತಿಲ್ಲವಂತೆ. ವೈದ್ಯಕೀಯ ಕಾಲೇಜಿನಲ್ಲಿ ಆಸ್ಪತ್ರೆ ಇರುವ ಕಾರಣಕ್ಕೆ ವೈದ್ಯರ ನೇಮಕಕ್ಕೆ ಅವಕಾಶ ಕೊಡುತ್ತಿಲ್ಲ. ಆದರೆ ಜಿಲ್ಲೆಯಲ್ಲಿನ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ ಆಸ್ಪತ್ರೆ ಇನ್ನೂ ಕಾರ್ಯಾರಂಭ ಮಾಡುವುದು ಒಂದು ಅಥವಾ ಎರಡು ವರ್ಷ ಆಗಲಿದೆ. ಅಲ್ಲಿವರೆಗೂ ತಜ್ಞ ವೈದ್ಯರ ಸಮಸ್ಯೆ ನೀಗುವುದು ಅನುಮಾನ ಎನ್ನುವ ಮಾತು ಆರೋಗ್ಯ ಇಲಾಖೆ ಅಂಗಳದಲ್ಲಿಯೆ ಕೇಳಿ ಬರುತ್ತಿದೆ.

---

## ಮಿನಿ ನ್ಯೂಸ್

### ಗಮನ ಸೆಳೆದ ಸೋಲಿಗರ ಗಣೇಶ


☛ ಉದಯವಾಹಿನಿ ಚಿತ್ರ

• **ಉದಯವಾಹಿನಿ ಯಳಂದೂರು**

ತಾಲ್ಲೂಕಿನ ಬಿಳಿಗಿರಿರಂಗನಬೆಟ್ಟದ ಹಾಡಿಗಳ ಸೋಲಿಗರ ಗಣೇಶ ಉತ್ಸವ ಭಾನುವಾರ ವಿಜೃಂಭಣೆಯಿಂದ ಜರುಗಿತು.

ಬಿಳಿಗಿರಿಬೆಟ್ಟ ಗ್ರಾಮದ ಎಲ್ಲಾ ಭಕ್ತರು ಗಣೇಶನ ಮೆರವಣಿಗೆಯಲ್ಲಿ ಸಾಗಿದರು. ಈ ಬಾರಿ ಹಾಡಿಗಳಲ್ಲಿ ಗಣೇಶನನ್ನು ಶ್ರದ್ಧಾ ಭಕ್ತಿಯಿಂದ ಪೂಜಿಸಿದ್ದು, ಒಂದು ವಾರ ಕಾಲ ವನಸುಮಗಳಿಂದ ಅಲಂಕರಿಸಿ, ಧೂಪ ದೀಪ ಹಚ್ಚಿ ವಿಶೇಷ ಪೂಜೆ ನೆರವೇರಿಸಿದ್ದರು.

ಬೆನಕನ ವಿಸರ್ಜನೆ ಸಮಯದಲ್ಲಿ ಎಲ್ಲರೂ ಸೇರಿ ವನಭೋಜನ ಸವಿದರು. ಹರಕೆ ಹೊತ್ತವರು ಹಣ್ಣು ಕಾಯಿ ಮಾಡಿಸಿ, ಪಂಚಾಮೃತ ಪ್ರಸಾದ ವಿತರಿಸಿದರು. ಪೂಜೆ ನಂತರ ಸೋಮರನ ಕೆರೆತನಕ ಮೆರವಣಿಗೆ ಸಾಗಿತು. ಸಾಂಪ್ರದಾಯಿಕ ನೃತ್ಯ ಮತ್ತು ದೇವರನ್ನು ಸ್ತುತಿಸುವ ಭಕ್ತಿ ಗಾಯನ ಗಮನ ಸೆಳೆಯಿತು. ವೈಭವದಿಂದ ಜರುಗಿದ ಧಾರ್ಮಿಕ ಕಾರ್ಯದಲ್ಲಿ ಸಾವಿರಾರು ಜನರು ಪಾಲ್ಗೊಂಡು ಭಕ್ತಿ ಸಮರ್ಪಿಸಿದರು ಎಂದು ಬಂಗ್ಲೆಪೋಡು ಕೇತಮ್ಮ ಹೇಳಿದರು.

### ಎಲ್ಲೆಂದರಲ್ಲಿ ವಾಹನ ಪಾರ್ಕಿಂಗ್ ಹೇಳೋರಿಲ್ಲ, ಕೇಳೋರಿಲ್ಲ


☛ ಉದಯವಾಹಿನಿ ಚಿತ್ರ

• **ಉದಯವಾಹಿನಿ ರಾಮನಗರ**

ಜಿಲ್ಲಾ ಕೇಂದ್ರವಾದ ರಾಮನಗರದಲ್ಲಿ ವಾಹನ ನಿಲುಗಡೆಗೆ (ಪಾರ್ಕಿಂಗ್) ಯಾವುದೇ ಲಂಗು ಲಗಾಮಿಲ್ಲದೆ ಅವ್ಯವಸ್ಥೆಯಿಂದ ಕೂಡಿದೆ. ನಿಲುಗಡೆ ನಿಯಮಕ್ಕೆ ಕಿಮ್ಮತ್ತಿಲ್ಲವಾಗಿದೆ. ಯಾರು, ಎಲ್ಲಿ ಬೇಕಾದರೂ, ಮನ ಬಂದಂತೆ ತಮ್ಮ ವಾಹನವನ್ನು ನಿಲ್ಲಿಸಿ ಹೋಗಬಹುದು. ಅದು ಹೆದ್ದಾರಿಯೇ ಆಗಿರಲಿ, ಜನನಿಬಿಡ ಮುಖ್ಯ ರಸ್ತೆಯೇ ಇರಲಿ, ಮಾರುಕಟ್ಟೆಯೇ ಆಗಿರಲಿ, ಸರ್ಕಾರಿ ಕಚೇರಿ…

ನಗರದ ಹೃದಯ ಭಾಗವನ್ನು ಹಾದು ಹೋಗಿರುವ ಬೆಂಗಳೂರು-ಮೈಸೂರು ಹಳೆ ರಾಷ್ಟ್ರೀಯ ಹೆದ್ದಾರಿ, ಜೂನಿಯರ್ ಕಾಲೇಜು ರಸ್ತೆ, ರೈಲು ನಿಲ್ದಾಣ ರಸ್ತೆ, ಮುಖ್ಯರಸ್ತೆ, ಎಂ.ಜಿ. ರಸ್ತೆ, ಮಾಗಡಿ ರಸ್ತೆ, ಕೆಂಗಲ್ ಹನುಮಂತಯ್ಯ ವೃತ್ತ, ಮಾರುಕಟ್ಟೆ ರಸ್ತೆ, ಎಸ್‌ಪಿ ಕಚೇರಿ ವೃತ್ತ, ಕೋರ್ಟ್ ರಸ್ತೆ, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ವೃತ್ತ ಸೇರಿದಂತೆ ನಗರವನ್ನು ಒಂದು ಸುತ್ತು ಹಾಕಿದರೆ ಇಲ್ಲಿನ ಪಾರ್ಕಿಂಗ್ ವ್ಯವಸ್ಥೆ ಹೇಗಿದೆ ಎಂಬುದು ಕಣ್ಣಿಗೆ ರಾಚುತ್ತದೆ.

**ಅರ್ಧ ರಸ್ತೆವರೆಗೆ ನಿಲುಗಡೆ:** ಬೆಂಗಳೂರು-ಮೈಸೂರು ಹಳೆ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಇಲ್ಲಿನ ರೇಷ್ಮೆಗೂಡು ಮಾರುಕಟ್ಟೆ ಎದುರು ನಿತ್ಯ ಅರ್ಧದಷ್ಟು ರಸ್ತೆಯನ್ನು ದ್ವಿಚಕ್ರ ವಾಹನಗಳು ಬೆಳಿಗ್ಗೆಯಿಂದ ಮಧ್ಯಾಹ್ನ 12ರವರೆಗೆ ಅತಿಕ್ರಮಿಸಿರುತ್ತವೆ. ಸ್ಥಳೀಯವಾಗಷ್ಟೇ ಅಲ್ಲದೆ, ವಿವಿಧ ಕಡೆಯಿಂದ ಬರುವ ರೈತರು ಹಾಗೂ ವ್ಯಾಪಾರಿಗಳು ಮಾರುಕಟ್ಟೆ ಎದುರಿಗೇ ವಾಹನಗಳನ್ನು ಮನಬಂದಂತೆ ನಿಲ್ಲಿಸಿರುತ್ತಾರೆ.

### ವರದಕ್ಷಿಣೆ ಕಿರುಕುಳಕ್ಕೆ ಮಗಳ ಸಾವು ವಿಷಯ ಕೇಳಿ ನೊಂದ ತಂದೆ ಆತ್ಮಹತ್ಯೆಗೆ ಯತ್ನ

• **ಉದಯವಾಹಿನಿ ಚಿಕ್ಕಬಳ್ಳಾಪುರ**



ಪತಿಯ ಮನೆಯವರ ಅವಮಾನ ಹಾಗೂ ವರದಕ್ಷಿಣೆ ಕಿರುಕುಳಕ್ಕೆ ಮನನೊಂದು ಮಗಳು ಆತ್ಮಹತ್ಯೆಗೆ ಶರಣಾದ ಸುದ್ದಿ ಕೇಳಿ ನೊಂದ ತಂದೆ ಕೂಡ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಚಿಕ್ಕಬಳ್ಳಾಪುರದ ಚಿಂತಾಮಣಿಯಲ್ಲಿ ನಡೆದಿದೆ. ಕೆ.ಬಿ.ದೇವರಾಜ್ ಆತ್ಮಹತ್ಯೆಗೆ ಯತ್ನಿಸಿದ್ದು, ತೀವ್ರ ಅಸ್ವಸ್ಥರಾಗಿರುವ ಅವರನ್ನು ಚಿಂತಾಮಣಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಕೆ.ಬಿ.ದೇವರಾಜ್ ಮಗಳು ಬಿಂದುಶ್ರೀ ಪತಿ ಹಾಗೂ ಕುಟುಂಬದವರ ಕಿರುಕುಳಕ್ಕೆ ನೊಂದು ನೇಣಿಗೆ ಶರಣಾಗಿದ್ದಳು. ಇದರಿಂದ ನೊಂದ ಕೆ.ಬಿ. ದೇವರಾಜ್ ತಾವೂ ಸಾವಿಗೆ ಶರಣಾಗಲು ಯತ್ನಿಸಿದ್ದಾರೆ. ಪತಿ ದೇವರಾಜ್ ನಿರ್ಧಾರ ಕಂಡು ಅವರ ಪತ್ನಿಗೂ ಆಘಾತವಾಗಿ ಅಸ್ವಸ್ಥಗೊಂಡಿದ್ದಾರೆ. ಬಿಂದುಶ್ರೀಯನ್ನು 7 ತಿಂಗಳ ಹಿಂದಷ್ಟೇ ರಾಘವೇಂದ್ರ ಎಂಬಾತನಿಗೆ ವಿವಾಹ ಮಾಡಿಕೊಡಲಾಗಿತ್ತು. ಆದರೆ ಬಿಂದುಶ್ರೀ ಕಪ್ಪಗಿದ್ದಾಳೆ ಎಂದು ಅವಮಾನಿಸುತ್ತಿದ್ದ ರಾಘವೇಂದ್ರ ಬರಬರುತ್ತಾ 20 ಲಕ್ಷ ವರದಕ್ಷಿಣೆ ತರುವಂತೆ ಹಿಂಸಿಸತೊಡಗಿದ್ದ. ಪತಿಯ ಕಾಟಕ್ಕೆ ಅತ್ತೆ-ಮಾವ ಕೂಡ ಸಾಥ್ ನೀಡಿದ್ದರು. ಪತಿಯ ಕಿರುಕುಳ, ವರದಕ್ಷಿಣೆಗಾಗಿ ಹಿಂಸೆಗೆ ಬೇಸತ್ತ ಬಿಂದುಶ್ರೀ ತವರಿಗೆ ಬಂದಿದ್ದಳು. ಅಲ್ಲಿಯೇ ನೇಣಿಗೆ ಕೊರಳೊಡ್ಡಿದ್ದಾಳೆ. ಮಗಳ ಸಾವಿನ ವಿಷಯ ತಿಳಿಯುತ್ತಿದ್ದಂತೆ ನೊಂದ ಕೆ.ಬಿ.ದೇವರಾಜ್ ತಾವೂ ಆತ್ಮಹತ್ಯೆಗೆ ಯತ್ನಿಸಿ, ಆಸ್ಪತ್ರೆಗೆ ದಾಖಲಾಗಿದ್ದಾರೆ.ಬಿಂದುಶ್ರೀ ಪತಿ ರಾಘವೇಂದ್ರ ಹಾಗೂ ಅತ್ತೆ-ಮಾವನ ವಿರುದ್ಧ ಚಿಂತಾಮಣಿ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ತಾಯಿ ಹೆಸರಿನಲ್ಲಿ ಒಂದು ಗಿಡ ಅಭಿಯಾನ

• **ಉದಯವಾಹಿನಿ ಕುಶಾಲನಗರ**

ಕರ್ನಾಟಕ ಅರಣ್ಯ ಇಲಾಖೆ, ಮಡಿಕೇರಿ ಉಪ ವಿಭಾಗ ಹಾಗೂ ಸೋಮವಾರಪೇಟೆ ವಲಯದಿಂದ ಹೆಬ್ಬಾಲೆ ಸಂಯುಕ್ತ ಪದವಿ ಪೂರ್ವ ಕಾಲೇಜು ಆವರಣದಲ್ಲಿ ವಿಶ್ವ ಪ್ರಜಾಪ್ರಭುತ್ವ ದಿನದ ಅಂಗವಾಗಿ ಹಾಗೂ 'ತಾಯಿ ಹೆಸರಿನಲ್ಲಿ ಒಂದು ಗಿಡ ಅಭಿಯಾನ' ಮತ್ತು ವನ ಮಹೋತ್ಸವವನ್ನು ಆಚರಿಸಲಾಯಿತು.

ಶಾಲಾ ಆವರಣದಲ್ಲಿ ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ವಲಯ ಅರಣ್ಯಾಧಿಕಾರಿ ಶೈಲೇಂದ್ರ ಕುಮಾರ್ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಭಾರತ ವಿಶ್ವದಲ್ಲಿಯೇ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ. ಸಂವಿಧಾನ ಬದ್ಧವಾಗಿ ಬಂದಿರುವ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಪ್ರತಿಯೊಬ್ಬರೂ ಎತ್ತಿ ಹಿಡಿಯಬೇಕು' ಎಂದು ಸಲಹೆ ನೀಡಿದರು.ಶಾಲಾ ಮುಖ್ಯ ಶಿಕ್ಷಕ ಬಸವರಾಜ ಶೆಟ್ಟಿ, ಶಿಕ್ಷಕ ಮೆ.ನಾ. ವೆಂಕಟನಾಯಕ್, ಕನ್ನಡ ಸಾಹಿತ್ಯ ಪರಿಷತ್ತು ಹೋಬಳಿ ಘಟಕದ ಖಜಾಂಚಿ ಉಮೇಶ್, ಉಪವಲಯ ಅರಣ್ಯ ಅಧಿಕಾರಿಗಳಾದ ಭರತ್, ಚಂದ್ರೇಶ್, ಲೋಹಿತ್ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

# ಓಣಂ ಹಬ್ಬದಂದು 'ವೆಟ್ಟೈಯಾನ್' ಚಿತ್ರದ ಹಾಡಿಗೆ ಹೆಜ್ಜೆ ಹಾಕಿದ ತಲೈವಾ



ಸೂಪರ್ ಸ್ಟಾರ್ ರಜನಿಕಾಂತ್ ಅವರು ಓಣಂ ಹಬ್ಬದಂದು 'ಮನಸಿಲಾಯೋ' ಚಿತ್ರದ ಹಾಡಿಗೆ ಹೆಜ್ಜೆ ಹಾಕಿದ್ದಾರೆ. ತಲೈವಾ ಮಾಡಿರುವ ಡ್ಯಾನ್ಸ್ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಇದೀಗ ಭಾರೀ ಸದ್ದು ಮಾಡುತ್ತಿದೆ. ಲೋಕೇಶ್ ಕನಕರಾಜ್ ನಿರ್ದೇಶನದ 'ಕೂಲಿ' ಸಿನಿಮಾ ಸೆಟ್‌ನಲ್ಲಿ ತಾವೇ ನಟಿಸಿರುವ 'ವೆಟ್ಟೈಯಾನ್' ಸಿನಿಮಾದ ಹಾಡಿಗೆ ಚಿತ್ರತಂಡದ ಜೊತೆ ಹೆಜ್ಜೆ ಹಾಕಿ ರಜನಿಕಾಂತ್ ಸಂಭ್ರಮಿಸಿದ್ದಾರೆ. ಈ ಸ್ಪೆಷಲ್ ವಿಡಿಯೋ ಮೂಲಕ ಫ್ಯಾನ್ಸ್‌ಗೆ ವಿಶ್ ಮಾಡಿದ್ದಾರೆ.

ಅಂದಹಾಗೆ, ಬಹುನಿರೀಕ್ಷಿತ ಸಿನಿಮಾ 'ವೆಟ್ಟೈಯಾನ್' ಬಿಡುಗಡೆ ಸಜ್ಜಾಗಿದೆ. ಅಕ್ಟೋಬರ್ 10ಕ್ಕೆ ಪಂಚ ಭಾಷೆಯಲ್ಲಿ ಚಿತ್ರ ತೆರೆಗೆ ಬರಲಿದೆ. ಸದ್ಯ ಪೋಸ್ಟ್ ಪ್ರೊಡಕ್ಷನ್ ಕೆಲಸದಲ್ಲಿ ಬ್ಯುಸಿಯಾಗಿರುವ ವೆಟ್ಟೈಯಾನ್ ಬಳಗ ಮೊದಲ ಹಾಡನ್ನು ಇತ್ತೀಚೆಗೆ ರಿಲೀಸ್ ಮಾಡಿತ್ತು.

'ವೆಟ್ಟೈಯಾನ್' ಸಿನಿಮಾದ 'ಮನಸಿಲಾಯೋ' ಎಂಬ ಸಾಂಗ್ ಸಖತ್ ಸದ್ದು ಮಾಡುತ್ತಿದೆ. ತಮಿಳು ಹಾಗೂ ತೆಲುಗು ಭಾಷೆಯಲ್ಲಿ ಹಾಡು ರಿಲೀಸ್ ಮಾಡಲಾಗಿದ್ದು, ಕಲರ್‌ಫುಲ್ ಸೆಟ್ ನಲ್ಲಿ ತಲೈವ ಜೊತೆ ಮಂಜು ವಾರಿಯರ್ ಭರ್ಜರಿಯಾಗಿ ಕುಣಿದು ಕುಪ್ಪಳಿಸಿದ್ದರು. ರಾಕ್ ಸ್ಟಾರ್ ಅನಿರುದ್ಧ ರವಿಚಂದರ್ ಹಾಡಿಗೆ ಟ್ಯೂನ್ ಮಾಡಿರೋದು ವಿಶೇಷ.


ರಜನಿಕಾಂತ್ ಹಾಗೂ ಅನಿರುದ್ಧ ಕಾಂಬೋದಲ್ಲಿ ಬಂದ ಹಾಡುಗಳು ಹಿಟ್ ಲಿಸ್ಟ್ ಸೇರಿವೆ. ಈ ಹಿಂದೆ ಪೆಟ್ಟಾ, ದರ್ಬಾರ್, ಜೈಲರ್ ಬಳಿಕ ಈ ಜೋಡಿ ವೆಟ್ಟೈಯಾನ್‌ಗಾಗಿ ಒಂದಾಗಿದೆ. ಮನಸಿಲಾಯೋ ಸಿಂಗಿಂಗ್ ಸಖತ್ ಸೌಂಡ್ ಮಾಡುತ್ತಿದ್ದು, ಟ್ರೆಂಡಿಂಗ್‌ನಲ್ಲಿದೆ.

ಸೂರ್ಯ ನಟಿಸಿದ 'ಜೈ ಭೀಮ್' ಸಿನಿಮಾ ನಿರ್ದೇಶಿಸಿದ್ದ ಟಿ.ಜೆ. ಜ್ಞಾನವೇಲ್ 'ವೆಟ್ಟೈಯಾನ್'ಗೆ ಆಕ್ಷನ್ ಕಟ್ ಹೇಳಿದ್ದಾರೆ. ಈ ಚಿತ್ರದ ಮೇಲೆ ನಿರೀಕ್ಷೆ ದುಪ್ಪಟ್ಟಾಗೋದಿಕ್ಕೆ ಮತ್ತೊಂದು ಕಾರಣ ತಲೈವಾ ಹಾಗೂ ಬಿಗ್ ಬಿ ಸಂಗಮ. ಭಾರತೀಯ ಚಿತ್ರರಂಗದ ದಿಗ್ಗಜರಾದ ಬಿಗ್ ಬಿ ಹಾಗೂ ರಜನಿಕಾಂತ್ ವೆಟ್ಟೈಯಾನ್ ಸಿನಿಮಾ ಮೂಲಕ ಮೂರು ದಶಕದ ಬಳಿಕ ಮತ್ತೊಮ್ಮೆ ಒಟ್ಟಿಗೆ ನಟಿಸಿದ್ದಾರೆ. ಭಾರತೀಯ ಚಿತ್ರರಂಗದ ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ಲೈಕಾ ಈ ಅಭೂತಪೂರ್ವ ಸಮಾಗಮಕ್ಕೆ ವೇದಿಕೆ ನಿರ್ಮಿಸಿದೆ.

ಈ ಚಿತ್ರದಲ್ಲಿ ರಜನಿಕಾಂತ್, ಅಮಿತಾಭ್ ಜೊತೆ ರಾಣಾ ದಗ್ಗುಬಾಟಿ, ಪ್ರಮುಖ ನಟರು ನಟಿಸಿದ್ದಾರೆ.

**ಮೂರು ದಶಕದ ಬಳಿಕ**

# ದಾಂಪತ್ಯ ಜೀವನಕ್ಕೆ ಕಾಲಿಟ್ಟ ಮೇಘಾ



ತಮಿಳಿನ 'ಪೆಟ್ಟಾ' ಖ್ಯಾತಿಯ ಮೇಘಾ ಆಕಾಶ್ ಅವರು ಬಹುಕಾಲದ ಗೆಳೆಯ ಸಾಯಿ ವಿಷ್ಣು ಜೊತೆ ಮದುವೆಯಾಗಿದ್ದಾರೆ. ನವಜೋಡಿಗೆ ಅಭಿಮಾನಿಗಳು ಶುಭಕೋರುತ್ತಿದ್ದಾರೆ. ಚೆನ್ನೈನಲ್ಲಿ ಸಾಯಿ ವಿಷ್ಣು ಜೊತೆ ಅದ್ದೂರಿಯಾಗಿ ಮೇಘಾ ಮದುವೆಯಾದರು. 6 ವರ್ಷಗಳು ಪ್ರೀತಿಗೆ ಮದುವೆಯ ಮುದ್ರೆ ಒತ್ತಿದ್ದರು. ಈ ಮದುವೆಗೆ ಕುಟುಂಬಸ್ಥರು, ಸ್ಟಾರ್ ಕಲಾವಿದರಿಗೆ, ಆಪ್ತರಿಗೆ ಆಹ್ವಾನ ನೀಡಲಾಗಿತ್ತು.

ಇನ್ನೂ ರಾಜಕೀಯ ಹಿನ್ನೆಲೆಯಿಂದ ಬಂದಿರುವ ಸಾಯಿ ವಿಷ್ಣು ಜೋಡಿಯ ಆರತಕ್ಷತೆಗೆ ತಮಿಳುನಾಡಿನ ಸಿಎಂ ಸ್ಟಾಲಿನ್ ಕೂಡ ಭಾಗವಹಿಸಿದ್ದರು. ಹೊಸ ಜೋಡಿಗೆ ಆಶೀರ್ವಾದ ಮಾಡಿದರು.

ಅಂದಹಾಗೆ, ಪೆಟ್ಟಾ, ಕುಟ್ಟಿ ಸ್ಟೋರಿ, ರಾಧೆ, ಡಿಯರ್ ಮೇಘಾ ಸೇರಿದಂತೆ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ.

# ಪುರಾತನ ದೇವಸ್ಥಾನದಲ್ಲಿ ಮದುವೆಯಾದ ಸಿದ್ಧಾರ್ಥ್, ಅದಿತಿ

ತಮಿಳಿನ ಸ್ಟಾರ್ ನಟ ಸಿದ್ಧಾರ್ಥ್ ಮತ್ತು ಅದಿತಿ ರಾವ್ ಹೈದರಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. 400 ವರ್ಷಗಳ ಹಿಂದಿನ ಪುರಾತನ ದೇವಸ್ಥಾನದಲ್ಲಿ ಸರಳವಾಗಿ ವಿವಾಹವಾಗಿದ್ದಾರೆ.

ಮದುವೆಯ ಸಂಭ್ರಮದ ಫೋಟೋ ಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ.

ಹಲವು ವರ್ಷಗಳ ಪ್ರೀತಿಗೆ ಇಂದು ಸಿದ್ಧಾರ್ಥ್, ಅದಿತಿ ರಾವ್ ಮದುವೆಯ ಮುದ್ರೆ ಒತ್ತಿದ್ದಾರೆ. 400 ವರ್ಷಗಳ ಹಿಂದಿನ ವನಪರ್ತಿ ಪುರಾತನ ದೇವಸ್ಥಾನದಲ್ಲಿ ಈ ಜೋಡಿ ಹಸೆಮಣೆ ಏರಿದೆ. ಇನ್ನೂ ಸಿದ್ಧಾರ್ಥ್ ಜೊತೆಗಿನ ಅದಿತಿ ಮದುವೆಯ ಫೋಟೋ ಶೇರ್ ಮಾಡಿ, ನೀವೇ ನನ್ನ ಸೂರ್ಯ, ನೀವೇ ನನ್ನ ಚಂದ್ರ ಮತ್ತು ನನ್ನ ಎಲ್ಲಾ ನಕ್ಷತ್ರಗಳು ಎಂದು ಬರೆದುಕೊಂಡಿದ್ದಾರೆ. ಶಾಶ್ವತ ಪ್ರೀತಿ, ಬೆಳಕು, ಮ್ಯಾಜಿಕ್ ಪ್ರಾರಂಭ ಎಂದಿದ್ದಾರೆ ನಟಿ.

ಅದಿತಿ ಮತ್ತು ಸಿದ್ಧಾರ್ಥ್ ಇಬ್ಬರಿಗೂ ಇದು 2ನೇ ಮದುವೆಯಾಗಿದೆ. ಮೊದಲ ಮದುವೆಗೆ ಡಿವೋರ್ಸ್ ನೀಡಿದ ಬಳಿಕ ಸಿನಿಮಾವೊಂದರ ಚಿತ್ರೀಕರಣದಲ್ಲಿ ಪರಿ ಚಯವಾಗಿ ಇಂದು ಮದುವೆ ಮುನ್ನುಡಿ ಬರೆದಿದೆ.

ಹೊಸ ಜೋಡಿಗೆ ಸಿನಿಮಾ ಸೆಲೆಬ್ರಿಟಿಗಳು ಮತ್ತು ಅಭಿಮಾನಿಗಳು ಶುಭ ಹಾರೈಸುತ್ತಿದ್ದಾರೆ.



**ನೀವೇ ನನ್ನ ಸೂರ್ಯ, ನೀವೇ ನನ್ನ ಚಂದ್ರ**

# 7 ತಿಂಗಳ ಹಿಂದಷ್ಟೇ ನಾನು ಬ್ರೇಕಪ್ ಮಾಡಿಕೊಂಡೆ



**ಲವ್ ಲೈಫ್ ಮತ್ತು ಬ್ರೇಕಪ್**

'ಸೀತಾ ರಾಮಂ' ನಟಿ ಮೃಣಾಲ್ ಠಾಕೂರ್ ಬ್ಯೂಟಿ ಮತ್ತು ಅಮೋಘ ನಟನೆಯಿಂದ ಅಪಾರ ಅಭಿಮಾನಿಗಳನ್ನು ಗೆದ್ದಿದ್ದಾರೆ. ಇದರ ನಡುವೆ ಬ್ರೇಕಪ್ ಕಥೆಯೊಂದನ್ನು ನಟಿ ರಿವೀಲ್ ಮಾಡಿದ್ದಾರೆ. ಬಾಯ್‌ಫ್ರೆಂಡ್ ನನಗೆ ಕೈ ಕೊಟ್ಟು ಹೋದ, 7 ತಿಂಗಳ ಹಿಂದಷ್ಟೇ ಬ್ರೇಕಪ್ ಮಾಡಿಕೊಂಡೆ ಎಂದು ಅಚ್ಚರಿಯ ಹೇಳಿಕೆ ನೀಡಿದ್ದಾರೆ. ಇತ್ತೀಚೆಗೆ ಮೃಣಾಲ್ ನೀಡಿದ ಸಂದರ್ಶನದಲ್ಲಿ ಲವ್ ಲೈಫ್ ಮತ್ತು ಬ್ರೇಕಪ್ ಬಗ್ಗೆ ಮಾತನಾಡಿದ್ದಾರೆ. ಎಲ್ಲಾರಂತೆ ನನಗೂ ಬ್ರೇಕಪ್ ಆಗಿದೆ. 7 ತಿಂಗಳ ಹಿಂದಷ್ಟೇ ಬ್ರೇಕಪ್ ಮಾಡಿಕೊಂಡೆ. ನಮಗೆ ಸರಿ ಹೊಂದುವ ವ್ಯಕ್ತಿ ನಮ್ಮ ಜೀವನದಲ್ಲಿ ಬರುವವರೆಗೂ ಬಂದು ಹೋಗುವವರು ಇರುತ್ತಾರೆ. ನಟಿ ಎಂಬ ಕಾರಣಕ್ಕೆ ಒಪ್ಪಲಿಲ್ಲ. ಅದ್ಯಾಕೆ ಹೀಗೆ ಎಂಬುದು ನನಗೆ ಅರ್ಥವಾಗುತ್ತಿಲ್ಲ. ಆದರೆ ಈ ಸಂಬಂಧ ಅಂತ್ಯವಾಗಿರೋದು ಖುಷಿಯಿದೆ ಎಂದಿದ್ದಾರೆ. ನಟನೆಯ ವಿಚಾರದಲ್ಲಿ ನಮ್ಮದು ಶಿಸ್ತುಬದ್ಧ ಕುಟುಂಬ, ತುಂಬಾ ಕಟ್ಟುನಿಟ್ಟು ಇದೆಲ್ಲಾ ಸರಿ ಹೋಗಲ್ಲ ಎಂದು ಆತ ಹೇಳಿದ. ಇದೆಲ್ಲಾ ಕೇಳಿದ ಮೇಲೆ ಬಹಳ ನೋವಾಯ್ತು. ಇಬ್ಬರ ಪರಸ್ಪರ ಒಪ್ಪಿಗೆಯ ಮೇರೆಗೆ ಬ್ರೇಕಪ್ ಮಾಡಿಕೊಂಡೆವು. ಇದೆಲ್ಲಾ 7 ತಿಂಗಳ ಹಿಂದೆ ನಡೆದಿರೋದು ಎಂದಿದ್ದಾರೆ ಮೃಣಾಲ್. ಬ್ರೇಕಪ್ ಆದ ವೇಳೆ, ನಾನು ದುಃಖಿಸಲಿಲ್ಲ. ನಾನು ಬದುಕಿನಲ್ಲಿ ಕೆಲವು ಬ್ರೇಕಪ್‌ಗಳು ಆಗಿವೆ. ನನಗೆ ನೋಡಲು ಸಖತ್ ಲುಕ್ ಇರುವ ಹುಡುಗ ಬೇಕಿಲ್ಲ, ಆದರೆ ಒಳ್ಳೆಯ ಗುಣವಿದ್ದರೆ ಸಾಕು ಎಂದು ನಟಿ ಮಾತನಾಡಿದ್ದಾರೆ. ಅಂದಹಾಗೆ, ಸೀತಾ ರಾಮಂ, ಹಾಯ್ ನಾನ್ನಾ, ಫ್ಯಾಮಿಲಿ ಸ್ಟಾರ್ ಚಿತ್ರಗಳ ಬ್ಯಾಕ್ ಟು ಬ್ಯಾಕ್ ಸಕ್ಸಸ್ ಕಂಡಿರುವ ಮೃಣಾಲ್ ಸದ್ಯ ಸೌತ್ ಮತ್ತು ಬಾಲಿವುಡ್ ಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ.

# ಲೈಂಗಿಕ ಕಿರುಕುಳ

## ನೃತ್ಯ ನಿರ್ದೇಶಕ ಜಾನಿ ಮಾಸ್ಟರ್ ವಿರುದ್ಧ ಕೇಸ್



ತೆಲುಗು, ತಮಿಳು ಚಿತ್ರರಂಗದಲ್ಲಿ ಹೆಸರುವಾಸಿಯಾಗಿರುವ ಜಾನಿ ಮಾಸ್ಟರ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಜಾನಿ ಮಾಸ್ಟರ್ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು 21 ವರ್ಷದ ಯುವತಿಯೊಬ್ಬರು ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ರಾಯದುರ್ಗ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಜಾನಿ ಮಾಸ್ಟರ್ ಕೆಲವು ದಿನಗಳಿಂದ ನನಗೆ ಕಿರುಕುಳ ನೀಡುತ್ತಿದ್ದರು. ಹೊರಾಂಗಣ ಚಿತ್ರೀಕರಣ ವೇಳೆ, ದೈಹಿಕ ಹಲ್ಲೆ ಮತ್ತು ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಯುವತಿ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಮಹಿಳೆ ನರಸಂಗಿ ನಿವಾಸಿಯಾಗಿರುವುದರಿಂದ ನರಸಂಗಿ ಪೊಲೀಸರಿಗೆ ಪ್ರಕರಣ ವರ್ಗಾಯಿಸಲಾಗಿದ್ದು, ಕ್ರಿಮಿನಲ್ ಬೆದರಿಕೆ ಮತ್ತು ಸ್ವಯಂಪ್ರೇರಿತ ಗಾಯ ಎಂದು ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಬಲಿಷ್ಠ ಇಂಗ್ಲೆಂಡ್‌ಗೆ ಮತ್ತೊಂದು ಸೋಲಿನ ಶಾಕ್ ನೀಡಿದ ಐರ್ಲೆಂಡ್

## 5 ದಿನಗಳ ಅಂತರದಲ್ಲಿ ಇಂಗ್ಲೆಂಡ್ ಮಹಿಳಾ ತಂಡದ ವಿರುದ್ಧ ಎರಡನೇ ಬಾರಿಗೆ ಸ್ಮರಣೀಯ ಗೆಲುವು ದಾಖಲೆ

ಇತ್ತೀಚಿನ ದಿನಗಳಲ್ಲಿ ಕ್ರಿಕೆಟ್ ಲೋಕದಲ್ಲಿ ಕೆಲವು ಅಚ್ಚರಿಯ ಫಲಿತಾಂಶಗಳು ಹೊರಬೀಳುತ್ತಿವೆ. ಟಿ20 ವಿಶ್ವಕಪ್‌ನಲ್ಲಿ ದುರ್ಬಲ ಅಮೆರಿಕ ತಂಡ, ಬಲಿಷ್ಠ ಪಾಕಿಸ್ತಾನವನ್ನು ಸೋಲಿಸಿದರೆ, ಅಫ್ಘಾನಿಸ್ತಾನ ತಂಡ, ಆಸ್ಟ್ರೇಲಿಯಾವನ್ನು ಸೋಲಿಸಿತ್ತು. ಆ ನಂತರ ಮಹಿಳಾ ಏಷ್ಯಾಕಪ್‌ನ ಫೈನಲ್‌ನಲ್ಲಿ ಶ್ರೀಲಂಕಾ ತಂಡ, ಟೀಂ ಇಂಡಿಯಾವನ್ನು ಮಣಿಸಿತ್ತು. ಕಳೆದ ವಾರವಷ್ಟೇ ಪಾಕಿಸ್ತಾನದಲ್ಲಿ ಅಚ್ಚರಿಯ ಪ್ರದರ್ಶನ ನೀಡುವ ಮೂಲಕ ಬಾಂಗ್ಲಾದೇಶ ಮೊದಲ ಬಾರಿಗೆ ಟೆಸ್ಟ್ ಸರಣಿಯನ್ನು 2-0 ಅಂತರದಲ್ಲಿ ಗೆದ್ದುಕೊಂಡಿತ್ತು. ಇದೆಲ್ಲದರ ನಡುವೆ ಇದೀಗ ಐರ್ಲೆಂಡ್ ಮಹಿಳಾ ಕ್ರಿಕೆಟ್ ತಂಡ ಕೂಡ ಸಂಚಲನ ಮೂಡಿಸಲು ಆರಂಭಿಸಿದ್ದು, 5 ದಿನಗಳ ಅಂತರದಲ್ಲಿ ಇಂಗ್ಲೆಂಡ್ ಮಹಿಳಾ ತಂಡದ ವಿರುದ್ಧ ಎರಡನೇ ಬಾರಿಗೆ ಸ್ಮರಣೀಯ ಗೆಲುವು ದಾಖಲಿಸಿದೆ. ಈ ಮೊದಲು ಸುಮಾರು 23 ವರ್ಷಗಳ ನಂತರ ಏಕದಿನ ಪಂದ್ಯದಲ್ಲಿ ಇಂಗ್ಲೆಂಡ್ ತಂಡವನ್ನು ಸೋಲಿಸಿದ ಐರ್ಲೆಂಡ್ ಇದೀಗ ಮೊದಲ ಬಾರಿಗೆ ಇಂಗ್ಲೆಂಡ್ ವಿರುದ್ಧ ಟಿ20 ಪಂದ್ಯವನ್ನು ಗೆದ್ದುಕೊಂಡಿದೆ.

**5 ದಿನದೊಳಗೆ 2ನೇ ಗೆಲುವು**

ಕಳೆದ ಕೆಲವು ದಿನಗಳಿಂದ ಇಂಗ್ಲೆಂಡ್ ಮಹಿಳಾ ಕ್ರಿಕೆಟ್ ತಂಡ ಐರ್ಲೆಂಡ್ ಪ್ರವಾಸದಲ್ಲಿದ್ದು, ಉಭಯ ತಂಡಗಳನಡುವೆ ಏಕದಿನ ಹಾಗೂ ಟಿ20 ಸರಣಿಯುತ್ತಿದೆ. ಮೊದಲು ನಡೆದ ಏಕದಿನ ಸರಣಿಯ ಮೊದಲೆರಡು ಪಂದ್ಯಗಳನ್ನು ಗೆಲ್ಲುವ ಮೂಲಕ ಇಂಗ್ಲೆಂಡ್ ಏಕದಿನ ಸರಣಿಯನ್ನು ಗೆದ್ದುಕೊಂಡಿತ್ತು. ಆದರೆ ಸೆಪ್ಟೆಂಬರ್ 11 ರಂದು ನಡೆದ ಮೂರನೇ ಮತ್ತು ಕೊನೆಯ ಏಕದಿನ ಪಂದ್ಯದಲ್ಲಿ ಐರ್ಲೆಂಡ್ ತಂಡ ಅದ್ಭುತ ಪ್ರದರ್ಶನ ನೀಡಿ ಇಂಗ್ಲೆಂಡ್ ತಂಡವನ್ನು 3 ವಿಕೆಟ್‌ಗಳಿಂದ ಸೋಲಿಸಿತು. ಈ ಮೂಲಕ 2001ರ ನಂತರ ಮೊದಲ ಬಾರಿಗೆ ಐರ್ಲೆಂಡ್ ಮಹಿಳಾ ತಂಡ ಏಕದಿನ ಪಂದ್ಯದಲ್ಲಿ ಇಂಗ್ಲೆಂಡ್ ತಂಡವನ್ನು ಸೋಲಿಸಿತು. ಇದೀಗ 4 ದಿನಗಳ ಬಳಿಕ ಅದೇ ತಂಡ ಟಿ20 ಸರಣಿಯ ಎರಡನೇ ಪಂದ್ಯದಲ್ಲಿ ಇಂಗ್ಲೆಂಡ್ ತಂಡವನ್ನು ಮಣಿಸಿದೆ.

**ಬೌಲರ್‌ಗಳ ಮೇಲುಗೈ**

**ಸೆಪ್ಟೆಂಬರ್ 15ರ ಭಾನುವಾರ ಬೆಲ್‌ಫಾಸ್ಟ್‌ನಲ್ಲಿ ನಡೆದ ಟಿ20 ಸರಣಿಯ ಎರಡನೇ ಪಂದ್ಯದಲ್ಲಿ ಐರ್ಲೆಂಡ್ 5 ವಿಕೆಟ್‌ಗಳಿಂದ ರೋಚಕ ಜಯ ಸಾಧಿಸಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಇಂಗ್ಲೆಂಡ್ 20 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 169 ರನ್ ಗಳಿಸಿತು. ಇಂಗ್ಲೆಂಡ್ ಪರ, ಅನುಭವಿ ಓಪನರ್ ಟಮ್ಮಿ ಬ್ಯೂಮಾಂಟ್ 34 ಎಸೆತಗಳಲ್ಲಿ 40 ರನ್ ಗಳಿಸಿದರೆ, ನಾಲ್ಕನೇ ಕ್ರಮಾಂಕದಲ್ಲಿ ಬಂದ ಪೈಜ್ ಸ್ಕೋಫೀಲ್ಡ್ ಕೇವಲ 21 ಎಸೆತಗಳಲ್ಲಿ 3 ಬೌಂಡರಿ ಮತ್ತು ಒಂದು ಸಿಕ್ಸರ್ ಸಹಿತ 34 ರನ್ ಗಳಿಸಿದರು. ಅವರಲ್ಲದೆ, ಜಾರ್ಜಿಯಾ ಆಡಮ್ಸ್ ಕೂಡ 15 ಎಸೆತಗಳಲ್ಲಿ 23 ರನ್ ಗಳಿಸಿದರು. ಐರ್ಲೆಂಡ್ ಪರ ಬೌಲಿಂಗ್‌ನಲ್ಲಿ ಮಿಂಚಿದ ಪ್ರೆಂಡರ್‌ಗಾಸ್ಟ್ 31 ರನ್‌ಗಳಿಗೆ 2 ವಿಕೆಟ್ ಪಡೆದರೆ, ಏಕದಿನ ಪಂದ್ಯದ ಗೆಲುವಿನ ತಾರೆ ಆಮಿ ಮ್ಯಾಗೈರ್ ಕೂಡ 2 ವಿಕೆಟ್ ಪಡೆದರು.**



**ಪ್ರೆಂಡರ್‌ಗಾಸ್ಟ್ ಆಟಕ್ಕೆ ಒಲಿದ ಜಯ**

ಬೌಲಿಂಗ್‌ನಲ್ಲಿ 2 ವಿಕೆಟ್ ಉರುಳಿಸಿದ್ದ 22 ವರ್ಷದ ಆಲ್‌ರೌಂಡರ್ ಪ್ರೆಂಡರ್‌ಗಾಸ್ಟ್ ಬ್ಯಾಟಿಂಗ್‌ನಲ್ಲೂ ಕಮಾಲ್ ಮಾಡಿದರು. ಮೊದಲ ಓವರ್‌ನಲ್ಲೇ ವಿಕೆಟ್ ಪತನಗೊಂಡ ಬಳಿಕ ಕ್ರೀಸ್‌ಗೆ ಬಂದ ಪ್ರೆಂಡರ್ ಗ್ಯಾಸ್ಟ್, ಇಂಗ್ಲೆಂಡ್ ಬೌಲಿಂಗ್ ಮೇಲೆ ದಾಳಿ ನಡೆಸಿದರು. ಈ ಬ್ಯಾಟರ್ ಕೇವಲ 51 ಎಸೆತಗಳಲ್ಲಿ 80 ರನ್ ಗಳಿಸಿ ತಂಡವನ್ನು ಗೆಲುವಿನ ಸಮೀಪಕ್ಕೆ ತಂದರು. 19ನೇ ಓವರ್‌ನ ಕೊನೆಯ ಎಸೆತದಲ್ಲಿ ಪ್ರೆಂಡರ್‌ಗಾಸ್ಟ್ ಔಟಾಗುವುದಕ್ಕೂ ಮುನ್ನ 13 ಬೌಂಡರಿಗಳನ್ನು ಬಾರಿಸಿದ್ದರು. ಇವರಲ್ಲದೆ ನಾಯಕಿ ಗ್ಯಾಬಿ ಲೂಯಿಸ್ ಕೂಡ 35 ಎಸೆತಗಳಲ್ಲಿ 38 ರನ್ ಬಾರಿಸಿ ತಂಡದ ಗೆಲುವಿಗೆ ಪ್ರಮುಖ ಕೊಡುಗೆ ನೀಡಿದರು. ಕೊನೆಯ ಓವರ್‌ನಲ್ಲಿ ಐರ್ಲೆಂಡ್ ಗೆಲುವಿಗೆ 7 ರನ್‌ಗಳ ಅಗತ್ಯವಿತ್ತು. 20ನೇ ಓವರ್‌ನ ಮೊದಲ ಎಸೆತದಲ್ಲಿ ಐರ್ಲೆಂಡ್ ಬ್ಯಾಟರ್ 1 ರನ್ ಮತ್ತು ಎರಡನೇ ಎಸೆತದಲ್ಲಿ ಬೌಂಡರಿ ಕಲೆಹಾಕಿದರು. ಆದರೆ ಇಲ್ಲಿ ತಮ್ಮ ಚಮತ್ಕಾರ ತೋರಿದ ಇಂಗ್ಲೆಂಡ್ ಬೌಲರ್ ಮ್ಯಾಡಿ ವಿಲಿಯರ್ಸ್ ನಂತರದ 2 ಎಸೆತಗಳಲ್ಲಿ 2 ವಿಕೆಟ್ ಪಡೆದರು. ಅಂತಿಮವಾಗಿ ಐರ್ಲೆಂಡ್ ಗೆಲುವಿಗೆ 2 ಎಸೆತಗಳಲ್ಲಿ 2 ರನ್‌ಗಳ ಅಗತ್ಯವಿತ್ತು. ಈ ವೇಳೆ ಸ್ಟ್ರೈಕ್‌ನಲ್ಲಿದ್ದ ಕ್ರಿಸ್ಟಿನಾ ಕೌಲ್ಟರ್ ಒಂದೇ ಎಸೆತದಲ್ಲಿ 2 ರನ್ ಗಳಿಸಿ ತಂಡಕ್ಕೆ ಐತಿಹಾಸಿಕ ಜಯ ತಂದುಕೊಟ್ಟರು.

# ಮತ್ತೆ ಆರ್‌ಸಿಬಿ ಸೇರುವ ಸುಳಿವು ನೀಡಿದ ಕೆಎಲ್ ರಾಹುಲ್

ಟೀಂ ಇಂಡಿಯಾದ ಸ್ಟಾರ್ ಬ್ಯಾಟ್ಸ್‌ಮನ್ ಕೆಎಲ್ ರಾಹುಲ್ ಪ್ರಸ್ತುತ ಚೆನ್ನೈನಲ್ಲಿ ಟೆಸ್ಟ್ ಸರಣಿಗಾಗಿ ತಯಾರಿ ನಡೆಸುತ್ತಿದ್ದಾರೆ. ಆದರೆ ಈ ಎಲ್ಲಾದರ ನಡುವೆ, ಐಪಿಎಲ್‌ನಲ್ಲಿ ರಾಹುಲ್ ಯಾವ ತಂಡವನ್ನು ಸೇರಿಕೊಳ್ಳಲಿದ್ದಾರೆ ಎಂಬ ಬಗ್ಗೆ ಬಿಗ್ ಅಪ್‌ಡೇಟ್ ಹೊರಬಿದ್ದಿದೆ. ವಾಸ್ತವವಾಗಿ ಕಳೆದ 3 ಸೀಸನ್‌ಗಳಿಂದ ಲಕ್ನೋ ಸೂಪರ್ ಜೈಂಟ್ಸ್ ತಂಡದ ನಾಯಕರಾಗಿರುವ ರಾಹುಲ್ ಮುಂದಿನ ಸೀಸನ್‌ನಲ್ಲೂ ಲಕ್ನೋ ತಂಡದಲ್ಲೇ ಉಳಿಯುತ್ತಾರಾ ಎಂಬ ಪ್ರಶ್ನೆ ಎಲ್ಲಾರ ಮನದಲ್ಲಿ ಮೂಡಿದೆ. ಅಲ್ಲದೆ ಈ ನಡುವೆ ರಾಹುಲ್ ತಮ್ಮ ಹಳೆಯ ತಂಡವಾದ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ಮರಳುವ ಬಗ್ಗೆ ಊಹಾಪೋಹಗಳೂ ಹೆಚ್ಚಾಗಿದ್ದು, ಇದೀಗ ಸ್ವತಃ ರಾಹುಲ್ ಅವರೇ ಈ ಬಗ್ಗೆ ದೊಡ್ಡ ಸುಳಿವು ನೀಡಿ ಸಂಚಲನ ಮೂಡಿಸಿದ್ದಾರೆ. ರಾಹುಲ್ ಹೇಳಿಕೆಯ ವಿಡಿಯೋ ವೈರಲ್ ಆಗುತ್ತಿದ್ದು, ಅದರಲ್ಲಿ ಅವರು ಮತ್ತೆ ಆರ್‌ಸಿಬಿಗೆ ಮರಳುವ ಭರವಸೆಯನ್ನು ವ್ಯಕ್ತಪಡಿಸಿದ್ದಾರೆ.

**ನಾನು ಕೂಡ ಹಾಗೆ ಆಗಲಿ**



**ಆರ್‌ಸಿಬಿಗೆ ಮರಳುವ ಸುಳಿವು ನೀಡಿದ ರಾಹುಲ್**

ಮುಂದಿನ ವರ್ಷ ನಡೆಯಲಿರುವ ಮೆಗಾ ಹರಾಜಿಗೂ ಮುನ್ನ ರಾಹುಲ್ ಫ್ರಾಂಚೈಸಿಯನ್ನು ಬದಲಾಯಿಸುವ ಬಗ್ಗೆ ಊಹಾಪೋಹಗಳು ಆಗಿನಿಂದಲೂ ಕೇಳಿಬರುತ್ತಿವೆ. ಇದೀಗ ವೈರಲ್ ಆಗುತ್ತಿರುವ ವೀಡಿಯೊದಲ್ಲಿ ಅವರು ಆರ್‌ಸಿಬಿಗೆ ಮರಳುವ ಸುಳಿವು ನೀಡಿದ್ದಾರೆ. ಈ ವೀಡಿಯೋದಲ್ಲಿ ಅಭಿಮಾನಿಯೊಬ್ಬ ರಾಹುಲ್‌ಗೆ, 'ಆರ್‌ಸಿಬಿ ಎಂದರೆ ನನಗೆ ತುಂಬ ಇಷ್ಟ. ಬಹಳ ವರ್ಷಗಳಿಂದ ನಾನು ಆರ್‌ಸಿಬಿಯ ದೊಡ್ಡ ಅಭಿಮಾನಿಯಾಗಿದ್ದೇನೆ. ಹೀಗಾಗಿ ನೀವು ಮತ್ತೊಮ್ಮೆ ಆರ್‌ಸಿಬಿ ಫ್ರಾಂಚೈಸಿಯಲ್ಲಿ ಆಡುವುದನ್ನು ನೋಡಲು ಬಯಸುತ್ತೇನೆ ಎಂದಿದ್ದಾನೆ.


ಆದರೆ ಅಭಿಮಾನಿಯ ಈ ಹೇಳಿಕೆಗೆ ರಾಹುಲ್ ಮೊದಲು ಏನನ್ನೂ ಹೇಳಲಿಲ್ಲ. ಇದಾದ ನಂತರ ಅಭಿಮಾನಿ, ನೀವು ಇದಕ್ಕೆ ಪ್ರತಿಕ್ರಿಯಿಸಬೇಕು ಎಂದು ನಾನು ಹೇಳುತ್ತಿಲ್ಲ. ಆದರೆ ನೀವು ಮತ್ತೊಮ್ಮೆ ಆರ್‌ಸಿಬಿಯಲ್ಲಿ ಉತ್ತಮ ಪ್ರದರ್ಶನ ನೀಡುವುದನ್ನು ನೋಡಲು ಬಯಸುತ್ತೇನೆ ಎಂದು ಹೇಳಿದ್ದಾನೆ. ಈ ಬಾರಿ ಪ್ರತಿಕ್ರಿಸಿದ ರಾಹುಲ್, 'ನಾನು ಕೂಡ ಹಾಗೆ ಆಗಲಿ ಎಂದು ಆಶಿಸುತ್ತೇನೆ' ಎಂದಿದ್ದಾರೆ. ಈ ಮೂಲಕ ರಾಹುಲ್, ತನಗೂ ಆರ್‌ಸಿಬಿ ಸೇರುವ ಇಂಗಿತವಿದೆ ಎಂಬುದನ್ನು ಸ್ಪಷ್ಟಪಡಿಸಿದ್ದಾರೆ.

# ಡ್ರೆಸ್ಸಿಂಗ್ ಕೊಠಡಿಯ ಗೋಡೆ ಒಡೆದ ಕೊಹ್ಲಿ!

ಭಾರತ ಹಾಗೂ ಬಾಂಗ್ಲಾದೇಶ ನಡುವಿನ ಎರಡು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯ ಸೆಪ್ಟೆಂಬರ್ 19 ರಿಂದ ಚೆನ್ನೈನಲ್ಲಿ ಆರಂಭವಾಗಲಿದೆ. ಈ ಪಂದ್ಯಕ್ಕಾಗಿ ಈಗಾಗಲೇ ಉಭಯ ತಂಡಗಳು ಚೆನ್ನೈಗೆ ಬಂದಿಳಿದಿವೆ. ಟೀಂ ಇಂಡಿಯಾ ಈಗಾಗಲೇ ಚೆನ್ನೈನಲ್ಲಿ ಅಭ್ಯಾಸ ಆರಂಭಿಸಿದ್ದರೆ, ಬಾಂಗ್ಲಾದೇಶ ತಂಡ ನಿನ್ನೆಯಷ್ಟೇ ಚೆನ್ನೈ ತಲುಪಿದೆ. ಮೂರ್ನಾಲ್ಕು ದಿನಗಳಿಂದ ಚೆನ್ನೈನಲ್ಲಿ ಅಭ್ಯಾಸ ನಡೆಸುತ್ತಿರುವ ಟೀಂ ಇಂಡಿಯಾ ಆಟಗಾರರು ನೆಟ್ಸ್‌ನಲ್ಲಿ ಸಾಕಷ್ಟು ಬೆವರು ಹರಿಸುತ್ತಿದ್ದಾರೆ. ಡಬ್ಲ್ಯುಟಿಸಿ ಫೈನಲ್ ದೃಷ್ಟಿಯಿಂದ ಈ ಸರಣಿ ಟೀಂ ಇಂಡಿಯಾಗೆ ಮಹತ್ವದ್ದಾಗಿದೆ. ಹೀಗಾಗಿಯೇ ತಂಡದ ಆಟಗಾರರು ಸಾಕಷ್ಟು ಸಮಯವನ್ನು ನೆಟ್ಸ್‌ನಲ್ಲಿ ಕಳೆಯುತ್ತಿದ್ದಾರೆ. ಅದರಂತೆ ತಿಂಗಳುಗಳ ಬಳಿಕ ಟೆಸ್ಟ್ ಕ್ರಿಕೆಟ್‌ನಲ್ಲಿ ಕಾಣಿಸಿಕೊಳ್ಳುತ್ತಿರುವ ವಿರಾಟ್ ಕೊಹ್ಲಿ ಅಭ್ಯಾಸದ ವೇಳೆ ತಮ್ಮ ಪವರ್‌ಫುಲ್ ಶಾಟ್‌ನಿಂದ ಕ್ರೀಡಾಂಗಣದ ಡ್ರೆಸ್ಸಿಂಗ್ ಕೋಣೆಯ ಗೋಡೆಯಲ್ಲಿ ರಂಧ್ರವುಂಟಾಗುವಂತೆ ಮಾಡಿದ್ದಾರೆ.

ನಿನ್ನೆ ನಡೆದ ಅಭ್ಯಾಸದ ಅವಧಿಯಲ್ಲಿ ನೆಟ್ಸ್‌ನಲ್ಲಿ ಬಿರುಸಿನ ಬ್ಯಾಟಿಂಗ್ ಅಭ್ಯಾಸ ನಡೆಸಿದ ವಿರಾಟ್ ಕೊಹ್ಲಿ, ಬಿಗ್ ಶಾಟ್ ಆಡಿದರು. ಈ ವೇಳೆ ಕೊಹ್ಲಿ ಹೊಡೆದ ಶಾಟ್ ಡ್ರೆಸ್ಸಿಂಗ್ ರೂಮಿನ ಗೋಡೆಯನ್ನು ಒಡೆದಿದೆ. ಅದರ ವಿಡಿಯೋ ಇದೀಗ ಸೋಶಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ.

ಮೇಲೆ ಹೇಳಿದಂತೆ ವಿರಾಟ್ ಕೊಹ್ಲಿ ತಮ್ಮ ಕೊನೆಯ ಟೆಸ್ಟ್ ಪಂದ್ಯವನ್ನು 2024 ರ ಆರಂಭದಲ್ಲಿ ದಕ್ಷಿಣ ಆಫ್ರಿಕಾ ಪ್ರವಾಸದಲ್ಲಿ ಆಡಿದ್ದರು. ಇದರ ನಂತರ, ಅವರು ವೈಯಕ್ತಿಕ ಕಾರಣಗಳಿಂದ ತವರಿನಲ್ಲಿ ನಡೆದಿದ್ದ ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟೆಸ್ಟ್ ಸರಣಿಯಿಂದ ಹೊರಗುಳಿದಿದ್ದರು. ಇದೀಗ ಕೊಹ್ಲಿ ಟೆಸ್ಟ್‌ನಲ್ಲಿ ಪುನರಾಗಮನ ಮಾಡಲಿದ್ದು, ಅವರ ಮೇಲೆ ಎಲ್ಲಾರ ಗಮನ ನೆಟ್ಟಿದೆ.



# ಒಂದೇ ಓವರ್‌ನಲ್ಲಿ 5 ಬೌಂಡರಿ ಬಾರಿಸಿದ ಬಾಬರ್

ಅಂತಾರಾಷ್ಟ್ರೀಯ ಸರಣಿಗಳಲ್ಲಿ ತಮ್ಮ ಕಳಪೆ ಪ್ರದರ್ಶನದ ಮೂಲಕ ಅಭಿಮಾನಿಗಳ ಛೀಮಾರಿಗೆ ಗುರಿಯಾಗಿರುವ ಪಾಕಿಸ್ತಾನ ಕ್ರಿಕೆಟಿಗರು ಇದೀಗ ದೇಶದಲ್ಲಿ ನಡೆಯುತ್ತಿರುವ ಪಾಕಿಸ್ತಾನ ಚಾಂಪಿಯನ್ಸ್ ಕಪ್‌ನಲ್ಲಿ ತಮ್ಮ ಹಳೆಯ ಫಾರ್ಮ್‌ಗೆ ಮರಳಲು ಪ್ರಯತ್ನಿಸುತ್ತಿದ್ದಾರೆ. ಈ ಟೂರ್ನಿಯಲ್ಲಿ ಪಾಕ್ ರಾಷ್ಟ್ರೀಯ ತಂಡದ ಆಟಗಾರರಾದ ಬಾಬರ್ ಆಝಂ, ಮೊಹಮ್ಮದ್ ರಿಜ್ವಾನ್, ಶಾಹೀನ್ ಶಾ ಆಫ್ರಿದಿ ಮತ್ತು ಶಾದಾಬ್ ಖಾನ್ ಅವರಂತಹ ಅನೇಕ ಸ್ಟಾರ್ ಆಟಗಾರರು ಆಡುತ್ತಿದ್ದಾರೆ. ಇನ್ನು ನಿನ್ನೆ ನಡೆದ ಸ್ಟಾಲಿಯನ್ಸ್ ಮತ್ತು ಮಾರ್ಖೋರ್ಸ್ ತಂಡಗಳ ನಡುವಿನ ರೋಚಕ ಪಂದ್ಯದಲ್ಲಿ ಬಾಬರ್ ಆಝಂ, ಯುವ ವೇಗಿ ಶಹನವಾಜ್ ದಹಾನಿ ಬೌಲ್ ಮಾಡಿದ ಓವರ್‌ನಲ್ಲಿ ಸತತ ಐದು ಬೌಂಡರಿಗಳನ್ನು ಬಾರಿಸಿದರು. ಸತತ ಐದು ಬೌಂಡರಿಗಳು 50 ಓವರ್‌ಗಳ ಪಂದ್ಯದಲ್ಲಿ ಗೆಲ್ಲಲು 232 ರನ್‌ಗಳ ಗುರಿ ಬೆನ್ನಟ್ಟಿದ ಸ್ಟಾಲಿಯನ್ಸ್ ತಂಡದ ಪರ ಮೂರನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬಂದ ಬಾಬರ್, ಆರಂಭದಿಂದಲೇ ಮುಕ್ತವಾಗಿ ಆಡಲು ಆರಂಭಿಸಿದರು. ಇದೇ ವೇಳೆ ಎಂಟನೇ ಓವರ್ ಬೌಲ್ ಮಾಡಲು ಬಂದ ದಹಾನಿ ಅವರ ವಿರುದ್ಧ ಬಾಬರ್, ಕೊನೆಯ ಐದು ಎಸೆತಗಳನ್ನು ಬೌಂಡರಿಗಟ್ಟಿದರು. ಅದರ ವಿಡಿಯೋ ಈಗ ಎಲ್ಲೆಡೆ ವೈರಲ್ ಆಗಿದೆ.



**ಬಾಬರ್ ತಂಡಕ್ಕೆ ಸೋಲು**

**45 ಎಸೆತಗಳಲ್ಲಿ 45 ರನ್**

8ನೇ ಓವರ್‌ನಲ್ಲಿ ಬಾಬರ್ ಸತತ ಐದು ಬಾಂಡರಿ ಬಾರಿಸಿದ ಹೊರತಾಗಿಯೂ ಅವರ ಸ್ಟ್ರೈಕ್ ರೇಟ್‌ನಲ್ಲಿ ಯಾವುದೇ ಹೆಚ್ಚಳ ಕಂಡುಬರಲಿಲ್ಲ. ಈ ಪಂದ್ಯದಲ್ಲಿ 45 ಎಸೆತಗಳನ್ನು ಎದುರಿಸಿದ ಬಾಬರ್, ಎಂಟು ಬೌಂಡರಿಗಳ ನೆರವಿನಿಂದ 45 ರನ್ ಗಳಿಸಿ ಔಟಾದರು.

ಬಾಬರ್ ಕ್ರೀಸ್‌ನಲ್ಲಿರುವವರೆಗೂ, ಸ್ಟಾಲಿಯನ್ಸ್ ತಂಡ ಪಂದ್ಯವನ್ನು ಗೆಲ್ಲುವ ಹಾದಿಯಲ್ಲಿತ್ತು. ಆದರೆ ಬಾಬರ್ ವಿಕೆಟ್ ಪತನದ ಬಳಿಕ ಪಂದ್ಯದ ಚಿತ್ರಣವೇ ಬದಲಾಯಿತು. ಲೆಗ್ ಸ್ಪಿನ್ನರ್ ಜಾಹಿದ್ ಮಹಮೂದ್ ಅವರ ಎಸೆತದಲ್ಲಿ ಪುಲ್ ಶಾಟ್ ಆಡುವ ಪ್ರಯತ್ನದಲ್ಲಿ ಬಾಬರ್ ಔಟಾದರು.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**